ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 86

18-9-2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 86

## ಸಂಪಾದಕೀಯ.....

### ಮಗು ಉಳಿದಿದೆ ಸಮಾಜ ಸೋತಿದೆ

## ಶೌಚಗೃಹದ ಬಕೆಟ್‌ನಲ್ಲಿ ಶಿಶು: ಸಮಾಜದ ಮಾನವೀಯತೆಗೆ ಮಸುಕು



ದಾವಣಗೆರೆ ಜಿಲ್ಲೆಯ ಹೊನ್ನಾಳಿ ತಾಲ್ಲೂಕಿನ ಸರ್ಕಾರಿ ಆಸ್ಪತ್ರೆಯಲ್ಲಿ ನವಜಾತ ಹೆಣ್ಣು ಶಿಶು ಬಕೆಟ್‌ನೊಳಗೆ ಪತ್ತೆಯಾಗಿರುವ ಘಟನೆ ಸಮಾಜದ ಮನಸ್ಸಿಗೆ ಆಘಾತ ತಂದಿದೆ. ಜನ್ಮ ಪಡೆದ ತಕ್ಷಣವೇ ಶಿಶುವನ್ನು ಬಟ್ಟೆಯಲ್ಲಿ ಸುತ್ತಿ ಶೌಚಗೃಹದ ಬಕೆಟ್‌ನಲ್ಲಿ ಹಾಕಿ ಹೋಗಿರುವುದು ಕೇವಲ ಕ್ರೂರತೆಯಲ್ಲ, ಇದು ನಮ್ಮ ಸಮಾಜದ ಮಾನವೀಯತೆಯ ನಿಜಸ್ವರೂಪವನ್ನು ಬಯಲಿಗೆಳೆದಿದೆ. ಸ್ವಚ್ಛತಾ ಸಿಬ್ಬಂದಿ ಮಗುವಿನ ಅಳುವ ಶಬ್ದವನ್ನು ಗಮನಿಸಿ ವೈದ್ಯಕೀಯ ಸಿಬ್ಬಂದಿಗೆ ತಿಳಿಸಿದ ಪರಿಣಾಮ, ಶಿಶುವಿನ ಜೀವ ಉಳಿಯಿತು.

ಮಗುವನ್ನು ದಾವಣಗೆರೆ ಮಕ್ಕಳ ಆರೈಕೆ ಕೇಂದ್ರಕ್ಕೆ ಕಳುಹಿಸಿರುವುದು ತಾತ್ಕಾಲಿಕ ಪರಿಹಾರವಾದರೂ, ಈ ಘಟನೆಯ ಹಿಂದೆ ಮಲಗಿರುವ ಗಾಢ ಸಾಮಾಜಿಕ ಸಮಸ್ಯೆಗಳನ್ನು ನಾವು ನಿರ್ಲಕ್ಷ್ಯ ಮಾಡಲಾಗದು.

ಇಂತಹ ಘಟನೆಗಳು ಇನ್ನೂ ಹೆಣ್ಣುಮಕ್ಕಳಿಗೆ ಸಮಾಜ ನೀಡುವ ಸ್ಥಾನವನ್ನು ಪ್ರಶ್ನಿಸುತ್ತವೆ. ಅಲ್ಟ್ರಾಸೌಂಡ್ ಮೂಲಕ ಲಿಂಗಪರೀಕ್ಷೆ ನಿಷೇಧಿತವಾಗಿದ್ದರೂ, ಗರ್ಭದಲ್ಲಿಯೇ ಹೆಣ್ಣುಮಕ್ಕಳ ಹತ್ಯೆ ಅಥವಾ ಜನ್ಮ ಪಡೆದ ನಂತರದ ತ್ಯಜನೆಗಳು ಅಡಗಿಕೊಂಡು ನಡೆಯುತ್ತಲೇ ಇವೆ. "ಹೆಣ್ಣುಮಕ್ಕಳು ಭಾರ" ಎಂಬ ಹಳೆಯ ತಪ್ಪು ಕಲ್ಪನೆ ಇಂದಿಗೂ ಗ್ರಾಮೀಣ ಹಾಗೂ ಬಡವರ್ಗದ ಮನಸ್ಸಿನಲ್ಲಿ ಜೀವಂತವಾಗಿದೆ. ಹೊನ್ನಾಳಿಯ ಈ ಘಟನೆ ಆ ಕಲ್ಪನೆಯ ಕ್ರೂರ ಪ್ರತಿಫಲ.

ಕಲಕಓಆಖ ಂಥಿಣ ಲಿಂಗಪರೀಕ್ಷಣೆಯನ್ನು ನಿಷೇಧಿಸಿದೆ, ಎಣಾತಜಟಿಟಜ ಎಞಣಟಿಥಿಜ ಂಥಿಣ ತ್ಯಜಿಸಲ್ಪಟ್ಟ ಮಕ್ಕಳ ಹಕ್ಕುಗಳನ್ನು ಕಾಯುವ ಭರವಸೆ ನೀಡುತ್ತದೆ. ಆದಾಗ್ಯೂ ಕಾನೂನುಗಳಿದ್ದರಷ್ಟೇ ಸಾಕಾಗುವುದಿಲ್ಲ. ಜಾರಿಗೆ ಬೇಕಾದ ಗಟ್ಟಿತನ, ತ್ವರಿತ ಕ್ರಮಗಳು ಹಾಗೂ ಜನಜಾಗೃತಿ ಇನ್ನೂ ಅಪೂರ್ಣ. ಕಾನೂನು ಪುಸ್ತಕದಲ್ಲಿ ಉಳಿದುಕೊಳ್ಳದೆ ನೆಲಮಟ್ಟದಲ್ಲಿ ಪರಿಣಾಮ ತೋರಿಸುವುದು ಅತ್ಯಗತ್ಯ.

ಮಗುವನ್ನು ಬಿಟ್ಟುಹೋದ ತಾಯಿಯೇ ಅಪರಾಧಿ ಎನ್ನುವ ಅಭಿಪ್ರಾಯ ಸುಲಭವಾದ ನಿರ್ಣಯ. ಆದರೆ ಬಡತನ, ಮದುವೆಯ ಹೊರಗಿನ ಗರ್ಭಧಾರಣೆ, ಕುಟುಂಬದ ಅವಮಾನ ಭಯ, ಲಿಂಗ ಅಸಮಾನತೆ? ಇವೆಲ್ಲವನ್ನೂ ಸಮಾಜವೇ ಹುಟ್ಟುಹಾಕಿದೆ. ಈ ಅಂಶಗಳನ್ನು ತಿದ್ದದೆ ಇಂತಹ ಘಟನೆಗಳನ್ನು ತಡೆಯಲು ಸಾಧ್ಯವಿಲ್ಲ. ಹೆಣ್ಣುಮಕ್ಕಳಿಗೆ ಸಮಾನ ಸ್ಥಾನ, ಗೌರವ ಮತ್ತು ಅವಕಾಶ ನೀಡುವುದು ಸಮಾಜದ ಒಟ್ಟಾರೆ ಜವಾಬ್ದಾರಿ.

ಈ ಪ್ರಕರಣದಲ್ಲಿ ಆಸ್ಪತ್ರೆಯ ಸಿಬ್ಬಂದಿ ತೋರಿಸಿದ ಮಾನವೀಯತೆ ಶ್ಲಾಘನೀಯ. ಸ್ವಚ್ಛತಾ ಸಿಬ್ಬಂದಿಯ ಎಚ್ಚರಿಕೆ ಮತ್ತು ವೈದ್ಯಕೀಯ ಸಿಬ್ಬಂದಿಯ ತಕ್ಷಣದ ಕ್ರಮದಿಂದ ಶಿಶುವಿನ ಜೀವ ಉಳಿಯಿತು. ವೈದ್ಯಕೀಯ ಕ್ಷೇತ್ರದಲ್ಲಿ ಮಾನವೀಯತೆ ಎಷ್ಟು ಅಗತ್ಯವೆಂಬುದಕ್ಕೆ ಇದು ಜೀವಂತ ಉದಾಹರಣೆ.

ಶಿಶುವನ್ನು ಮಕ್ಕಳ ಆರೈಕೆ ಕೇಂದ್ರಕ್ಕೆ ಕಳುಹಿಸಿರುವುದು ಸದ್ಯಕ್ಕೆ ಸುರಕ್ಷಿತ. ಆದರೆ ಅನೇಕ ಶಿಶುಗಳು ದತ್ತು ಪ್ರಕ್ರಿಯೆಯ ಸಂಕೀರ್ಣತೆಗಳಿಂದ ವರ್ಷಗಟ್ಟಲೆ ಸಂಸ್ಥೆಗಳಲ್ಲೇ ಬೆಳೆದಿರುತ್ತಾರೆ. ದತ್ತು ಪ್ರಕ್ರಿಯೆ ಸರಳವಾಗದಿದ್ದರೆ ಶಿಶುಗಳಿಗೆ ತಕ್ಷಣವಾದ ಪ್ರೀತಿಯ ಮನೆ ದೊರಕುತ್ತದೆ ಸರ್ಕಾರ ಈ ಬಗೆಗೆ ಗಂಭೀರವಾಗಿ ತೊಡಗಿಸಿಕೊಳ್ಳಬೇಕು.

ಹೆಣ್ಣುಮಕ್ಕಳ ಮೌಲ್ಯವನ್ನು ತಿಳಿಸುವ ಬೃಹತ್ ಅಭಿಯಾನ ಅಗತ್ಯವಾಗಿದೆ. ಶಿಶು ತ್ಯಜನೆಗೆ ತಕ್ಷಣದ ಮತ್ತು ಕಠಿಣ ಕ್ರಮ ಬೇಕು. ಬಡ ತಾಯಂದಿರಿಗೆ ಸಹಾಯಧನ, ಸಮಾಲೋಚನೆ ವ್ಯವಸ್ಥೆ ಬಲಪಡಿಸಬೇಕು. ಶಿಕ್ಷಣ ಮತ್ತು ಉದ್ಯೋಗದ ಮೂಲಕ ಮಹಿಳೆಯರಲ್ಲಿ ಆತ್ಮವಿಶ್ವಾಸ ಬೆಳೆಸಬೇಕು.

ಒಂದು ಶಿಶು ಬದುಕಿ ಉಳಿದಿರುವುದು ನಿಸ್ಸಂದೇಹ ಅದೃಷ್ಟ. ಆದರೆ ಇಂತಹ ಘಟನೆಗಳು ಪುನರಾವರ್ತನೆಗೊಳ್ಳಬಾರದೆಂಬುದೇ ನಿಜವಾದ ಸಮಾಜದ ಪರೀಕ್ಷೆ. ಹೆಣ್ಣುಮಕ್ಕಳನ್ನು ಭಾರವಲ್ಲ, ಭವಿಷ್ಯದ ಶಕ್ತಿ ಎಂದು ಕಾಣುವ ದಿನ ಬಂದಾಗ ಮಾತ್ರ ಮಾನವೀಯತೆಯ ನಿಜವಾದ ಜಯವಾಗುತ್ತದೆ

ಶಿಶುವಿನ ಜೀವ ಉಳಿದಿದೆ, ಆದರೆ ನಮ್ಮ ಸಮಾಜ ಮಾನವೀಯತೆಯ ಪರೀಕ್ಷೆಯಲ್ಲಿ ಸೋತಿದೆ. ಇದು ಕೇವಲ ಕಾನೂನು ಕ್ರಮದ ವಿಷಯವಲ್ಲ, ಮನೋಭಾವ ಬದಲಾವಣೆಯ ಪ್ರಶ್ನೆ.

– ಮಲ್ಲಿಕಾರ್ಜುನ್ ಕಬ್ಬೂರು,
ಸಂಪಾದಕರು

# ಒಬಿಸಿ ಸಮಾಜದ ಸಮೀಕ್ಷೆಗೆ ಸಿದ್ಧತೆ

## ದಾವಣಗೆರೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ಸುದ್ದಿಗೋಷ್ಠಿ

**ದಾವಣಗೆರೆ:** ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಸಾಮಾಜಿಕ, ಶೈಕ್ಷಣಿಕ ಸ್ಥಿತಿಗಳ ಸಮೀಕ್ಷಾ ಕಾರ್ಯ ಸೆ.9ರಿಂದ ಅ.7ರ ವರೆಗೆ ಜಿಲ್ಲೆಯಲ್ಲಿ ನಡೆಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮನೆಯ ವಿದ್ಯುತ್ ಆರ್‌ಆರ್ ಸಂಖ್ಯೆ ಆಧರಿಸಿ ಈಗಾಗಲೇ ಸಂಪೂರ್ಣ ಜಿಯೋಟ್ಯಾಗ್ ಮಾಡಿಸಲಾಗಿದೆ ಎಂದು ಹೇಳಿದರು.

ಹಿಂದುಳಿದ ವರ್ಗಗಳ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸ್ಥಿತಿಗತಿ ತಿಳಿಯಲು ಆಯೋಗ ಸಮೀಕ್ಷೆ ಕೈಗೆತ್ತಿಕೊಂಡಿದೆ. ಜಿಲ್ಲೆಯಲ್ಲಿ ಒಟ್ಟು 452224 ಮನೆಗಳಿದ್ದು, 491981 ಜಿಯೋ ಟ್ಯಾಗ್ ಅಂಟಿಸಲಾಗಿದೆ. ಗ್ರಾಮೀಣ ಭಾಗದಲ್ಲಿ ಆಶಾ ಕಾರ್ಯಕರ್ತೆಯರು ಹಾಗೂ ನಗರದಲ್ಲಿ ಎನ್‌ಎಸ್‌ಎಸ್, ಎನ್‌ಸಿಸಿ



ಆಸಕ್ತ ವಿದ್ಯಾರ್ಥಿಗಳಿಂದ ಸಮೀಕ್ಷೆ ಬಗ್ಗೆ ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದರು.

ಆಯೋಗದಿಂದ ಜಿಲ್ಲಾ ಮಟ್ಟದ 6 ಅಧಿಕಾರಿಗಳಿಗೆ ಮಾಸ್ಟರ್ ತರಬೇತಿ ನೀಡಿ ನಿಯೋಜಿಸಲಾಗಿದೆ. 150 ಕಟುಂಬಕ್ಕೆ ಒಬ್ಬ ಗಣತಿದಾರ ಹಾಗೂ 20 ಗಣ–ತಿದಾರರಿಗೆ ಒಬ್ಬ ಮೇಲ್ವಿಚಾರಕರನ್ನು ನಿಯೋಜಿಸಲಾಗಿದೆ. ಒಟ್ಟು 3898 ಸಿಬ್ಬಂದಿಗಳನ್ನು ಸಮೀಕ್ಷಾ ಕಾರ್ಯಕ್ಕೆ ಬಳಸಿಕೊಳ್ಳಲಾಗುತ್ತಿದೆ ಎಂದು ಮಾಹಿತಿ ನೀಡಿದರು.

| ತಾಲ್ಲೂಕು | ಆರ್‌ಆರ್ ಸಂಖ್ಯೆ | ಗಣತಿದಾರರು |
|---|---|---|
| ಚನ್ನಗಿರಿ | 86897 | 727 |
| ದಾವಣಗೆರೆ | 234481 | 1626 |
| ಹರಿಹರ | 69053 | 578 |
| ಜಗಳೂರು | 40192 | 387 |
| ಹೊನ್ನಾಳಿ | 39024 | 352 |
| ನ್ಯಾಮತಿ | 22334 | 207 |
| ಒಟ್ಟು | 491981 | 3876 |

> ವೀರಶೈವ, ಲಿಂಗಾಯತ ಧರ್ಮದ ಗೊಂದಲ ಹಾಗೂ ಅದನ್ನು ನಮೂದಿಸುವ ಬಗ್ಗೆ ರಾಜ್ಯ ಸರ್ಕಾರ ಯಾವುದೇ ಸೂಚನೆ ನಮಗೆ ನೀಡಿಲ್ಲ.
> -ಗಂಗಾಧರಸ್ವಾಮಿ ಜಿ.ಎಂ.
> ಜಿಲ್ಲಾಧಿಕಾರಿಗಳು

ಜಿಪಂ ಸಿಇಒ ಗಿತ್ತೆ ಮಾಧವ ವಿಠಲ್‌ರಾವ್ ಮಾತನಾಡಿ, ಗುಡ್ಡಗಾಡು ಹಾಗೂ ಅರಣ್ಯ ಪ್ರದೇಶದಲ್ಲಿ ವಾಸಿಸುವ ಕುಟುಂಬಗಳನ್ನು ಸಮೀಕ್ಷೆ ಕಾರ್ಯದಲ್ಲಿ ಒಳಪಡಿಸಲು ಗಣತಿದಾರರಿಗೆ ತರಬೇತಿ ನೀಡಲಾಗಿದೆ ಎಂದರು.

ಅಪರ ಜಿಲ್ಲಾಧಿಕಾರಿ ಶಿವಕುಮಾರ್, ಹಿಂದುಳಿದ ವರ್ಗಗಳ ಇಲಾಖೆ ಜಿಲ್ಲಾಧಿಕಾರಿ ರೇಣುಕಾದೇವಿ ಉಪಸ್ಥಿತರಿದ್ದರು.

# ಮಳೆಯಿಂದ ಬೆಳೆ ಹಾನಿ; ಜಂಟಿ ಸಮೀಕ್ಷೆ ನಂತರ ರೈತರಿಗೆ ಪರಿಹಾರ: ಸಿದ್ದರಾಮಯ್ಯ



**ಕಲಬುರಗಿ:** ಭಾರೀ ಮಳೆ ಮತ್ತು ಪ್ರವಾಹದಿಂದ ಬೆಳೆ ಹಾನಿಗೊಳಗಾದ ರೈತರಿಗೆ ಪರಿಹಾರ ನೀಡುವ ಜವಾಬ್ದಾರಿ ಹೊಂದಿರುವ ಕಂದಾಯ ಮತ್ತು ಕೃಷಿ ಇಲಾಖೆಗಳಿಂದ ಜಂಟಿ ಸಮೀಕ್ಷೆಗೆ ನಿರ್ದೇಶನ ನೀಡಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬುಧವಾರ ಹೇಳಿದ್ದಾರೆ.

ಸರ್ಕಾರದಿಂದ ಬೆಳೆ ಸಾಲ ಮನ್ನಾ ನಿರೀಕ್ಷಿಸುತ್ತಿರುವ ರೈತರ ಬಗ್ಗೆ ಪ್ರತಿಕ್ರಿಯಿಸಿದ ಸಿಎಂ, "ನೋಡೋಣ, ನಾವು ಅದನ್ನು ಪರಿಶೀಲಿಸುತ್ತೇವೆ" ಎಂದು ಹೇಳಿದರು.

"ಮೊದಲು ಬೆಳೆ ನಷ್ಟಕ್ಕೆ ಪರಿಹಾರ ನೀಡಬೇಕು, ಆದ್ದರಿಂದ ಕಂದಾಯ ಮತ್ತು ಕೃಷಿ ಇಲಾಖೆಗಳಿಗೆ ಜಂಟಿ ಸಮೀಕ್ಷೆ ನಡೆಸಲು ಸೂಚನೆ ನೀಡಿದ್ದೇನೆ. ಒಂದು ವಾರದಲ್ಲಿ ಜಂಟಿ ಸಮೀಕ್ಷೆ ನಡೆಯಲಿದೆ. ಅದರ ನಂತರ ಬೆಳೆ ನಷ್ಟ ಪರಿಹಾರವನ್ನು ವಿತರಿಸಲಾಗುವುದು" ಎಂದು ಸಿಎಂ ಸಿದ್ದರಾಮಯ್ಯ ಸುದ್ದಿಗಾರರಿಗೆ ತಿಳಿಸಿದರು.

ಅತಿವೃಷ್ಟಿ ಪೀಡಿತ ಪ್ರದೇಶಗಳ ಜಂಟಿ ಸಮೀಕ್ಷೆ ಮುಗಿಯುತ್ತಿದ್ದಂತೆ, ಅಧಿಕಾರಿಗಳು ತಕ್ಷಣ ಕಾರ್ಯಪ್ರವೃತ್ತರಾಗಿ ಬೆಳೆ ಹಾನಿಗೆ ಸಮರ್ಪಕವಾಗಿ ಪರಿಹಾರ ತಲುಪಿಸಬೇಕು. ಮಾನವ– ಜಾನುವಾರು ಜೀವ ಹಾನಿಗಳಿಗೆ ಶೇ.100 ರಷ್ಟು ಪರಿಹಾರ ಒದಗಿಸಿರುವ ರೀತಿಯಲ್ಲೇ ಬೆಳೆ ಹಾನಿಗೂ ಒದಗಿಸುತ್ತೇವೆ ಎಂದರು ಕಳೆದ ಬಾರಿಗಿಂತ ಈ ಬಾರಿ ಉತ್ತಮ ಮಳೆ ಆಗಿದೆ. ವಾಡಿಕೆಗಿಂತ ಶೇ17 ರಷ್ಟು ಮಳೆ ಹೆಚ್ಚಾಗಿದೆ. 37 ಜನರ ಜೀವ ಹಾನಿ ಪ್ರಕರಣಗಳು ವರದಿಯಾಗಿದ್ದು, ಎಲ್ಲಾ ಪರಿಹಾರ ನೀಡಲಾಗಿದೆ.

175 ಜಾನುವಾರುಗಳ ಪ್ರಾಣ ಹಾನಿ ಪ್ರಕರಣಗಳು ವರದಿಯಾಗಿದ್ದು, ಎಲ್ಲದಕ್ಕೂ ಪರಿಹಾರ ನೀಡಲಾಗಿದೆ. ಸಂಪೂರ್ಣ ಮನೆ ಹಾನಿ, ಭಾಗಶಃ ಹಾನಿ ಆಗಿರುವ ಎಲ್ಲಾ ಪ್ರಕರಣಗಳಲ್ಲೂ ಪರಿಹಾರ ನೀಡಲಾಗಿದೆ.

"ಕೆಲವು ಸ್ಥಳಗಳಲ್ಲಿ – ಬೀದರ್, ಕಲಬುರಗಿ, ಯಾದಗಿರಿಯಲ್ಲಿ ಹೆಚ್ಚಿನ ಮಳೆಯಾಗಿದ್ದು, ಬೆಳೆ ನಷ್ಟವಾಗಿದೆ. ಪರಿಹಾರವನ್ನು ತಕ್ಷಣವೇ ನೀಡಲಾಗುವುದು" ಎಂದು ಸಿಎಂ ಭರವಸೆ ನೀಡಿದರು.ವಿಮೆ ಇಲ್ಲದ ರೈತರಿಗೆ ಪರಿಹಾರ ನೀಡಲಾಗುತ್ತದೆಯೇ ಎಂಬ ಪ್ರಶ್ನೆಗೆ, "ನಾವು ಚರ್ಚಿಸಿ ಪರಿಗಣಿಸುತ್ತೇವೆ" ಎಂದರು.

ಎನ್‌ಡಿಆರ್‌ಎಫ್ ಮಾನದಂಡಗಳ ಅಡಿಯಲ್ಲಿ ಹೆಚ್ಚಿನ ಪರಿಹಾರ ಕೋರಲು ದೆಹಲಿಗೆ ಹೋಗುತ್ತೀರಾ ಎಂದು ಕೇಳಿದಾಗ, ಸಿಎಂ, "ನಾನು ಹಲವಾರು ಬಾರಿ ದೆಹಲಿಗೆ ಭೇಟಿ ನೀಡಿದ್ದೇನೆ, ಪ್ರಧಾನಿ ನರೇಂದ್ರ ಮೋದಿ, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿದ್ದೇನೆ. ಕೇಂದ್ರ ಸರ್ಕಾರ ಪ್ರತಿಕ್ರಿಯಿಸುತ್ತಿಲ್ಲ. ಏನು ಮಾಡಬೇಕು?" ಎಂದರು.

ಇನ್ನು ರಾಜ್ಯದಲ್ಲಿ ಹೆಚ್ಚಿನ ಸಂಖ್ಯೆಯ ಅನರ್ಹ ಬಿಪಿಎಲ್ ಕಾರ್ಡ್ ಹೊಂದಿರುವವರ ಬಗ್ಗೆ ಪ್ರಶ್ನಿಸಿದಾಗ, ಅವರನ್ನು ತೆಗೆದುಹಾಕಲು ಸೂಚನೆ ನೀಡಿದ್ದೇನೆ ಎಂದು ಸಿಎಂ ತಿಳಿಸಿದರು.

"ಅರ್ಹರನ್ನು ತೆಗೆದುಹಾಕಬಾರದು. ಅನರ್ಹರನ್ನು ತೆಗೆದುಹಾಕಬೇಕು. ಅರ್ಹರನ್ನು ತೆಗೆದರೆ ಅವರನ್ನು ಮತ್ತು ಸೇರಿಸಬೇಕು" ಎಂದು ಅವರು ಹೇಳಿದರು.

## ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಚಿತ್ತ ಅಭಿವೃದ್ಧಿಯತ್ತ

### ಡಿಜೆಗಿಂತ ಮಾಡುವ ಮುಖ್ಯ ಕೆಲಸ ಬಹಳ ಇವೆ

**ದಾವಣಗೆರೆ:** ಗಣಪತಿ ಹಬ್ಬದಲ್ಲಿ ಡಿಜೆಗೆ ಅವಕಾಶ ಕೊಡಬೇಕೆ ಅಥವಾ ಬೇಡವೇ ಎಂಬುದಕ್ಕಿಂತ ಮಾಡಬೇಕಾದ ಮುಖ್ಯ ಕೆಲಸಗಳು ಬಹಳಷ್ಟು ಇವೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ಮಾರ್ಮಿಕವಾಗಿ ನುಡಿದಿದ್ದಾರೆ.



ಬಿಜೆಪಿ ಮುಖಂಡರು, ಗಣಪತಿ ಪ್ರತಿಷ್ಠಾಪನಾ ಸಮಿತಿಯ ಕೆಲವರು ಡಿಜೆಗೆ ಅವಕಾಶ ಕೋರಿ ಒತ್ತಡ ಹಾಕುತ್ತಿರುವ ಬಗ್ಗೆ ಮಾಧ್ಯಮದವರು ಕೇಳಿದ ಪ್ರಶ್ನೆಗೆ ಜಿಲ್ಲಾಧಿಕಾರಿ ಮೇಲಿನಂತೆ ಉತ್ತರಿಸಿದರು.

ಗ್ರಾಮೀಣ, ನಗರ ಭಾಗದಲ್ಲಿ ನಾಯಿ ಕಡಿತ ಸಂಖ್ಯೆ ಹೆಚ್ಚಾಗುತ್ತಿದೆ. ಜಿಲ್ಲೆಯಲ್ಲಿ ಇತ್ತೀಚಿನ ದಿನಮಾನದಲ್ಲಿ ಒಟ್ಟು 4–5 ಸಾವಿರ ಜನ ನಾಯಿ ಕಚ್ಚಿಸಿಕೊಂಡಿದ್ದಾರೆ. ಹೀಗಾಗಿ ನಾಯಿ ಹಾಗೂ ಹಂದಿಗಳ ನಿಯಂತ್ರಣ ಜಿಲ್ಲಾಡಳಿತಕ್ಕೆ ಈಗ ಆದ್ಯತೆ ಕೆಲಸವಾಗಿದೆ ಎಂದರು. ನಾಯಿ, ಹಂದಿಗಳ ನಿಯಂತ್ರಣಕ್ಕೆ ವಿಶೇಷ ಗಮನ ಹರಿಸಲಾಗಿದೆ. ನಾಯಿ ಹಾಗೂ ಹಾವು ಕಡಿತಕ್ಕೆ ಆಸ್ಪತ್ರೆಗಳಲ್ಲಿ ಔಷಧ ಲಭ್ಯವಿದೆ. ಇಂಥ ಪ್ರಕರಣ ನಡೆದರೆ ಸಾರ್ವಜನಿಕರು ತಕ್ಷಣ ಸಮೀಪದ ಸರ್ಕಾರಿ ಆಸ್ಪತ್ರೆಗೆ ಹೋಗಬೇಕು. ನಾಟಿ ವೈದ್ಯರ ಬಳಿ ಹೋಗಬಾರದು ಎಂದು ಮನವಿ ಮಾಡಿದರು. ಜಿಲ್ಲೆಯಲ್ಲಿ 32000 ವಿಶೇಷ ಚೇತನರು ಇದ್ದಾರೆ. ಇವರ ಶ್ರೇಯೋಭಿವೃದ್ಧಿಗೆ ಸಹಾಯಕವಾಗುವ ಯೋಜನೆ, ಕಾರ್ಯಕ್ರಮ ಜಾರಿಗೆ ಚಿಂತಿಸಲಾಗುತ್ತಿದೆ. ಇದರ ಜೊತೆ ಮಳೆಗಾಲದಲ್ಲಿ ಅನೇಕ ರಸ್ತೆಗಳಲ್ಲಿ ಗುಂಡಿ ಬಿದ್ದು, ಸಂಚಾರಕ್ಕೆ ತೊಂದರೆ ಆಗಿದೆ. ಇವುಗಳನ್ನು ಸರಿಪಡಿಸಲು ಈಗ ಶುರು ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ನಗರದಲ್ಲಿ ಕಟ್ಟಡ ತ್ಯಾಜ್ಯಗಳನ್ನು ಸಾರ್ವಜನಿಕರು ಎಲ್ಲೆಂದರೆ ಬಿಸಾಡುವಂತಿಲ್ಲ. ಆನಗೋಡು ಸಮೀಪ ಇದಕ್ಕಾಗಿ ಮೂರು ದೊಡ್ಡ ಗುಂಡಿಗಳನ್ನು ಗುರುತಿಸಲಾಗಿದೆ. ಇಲ್ಲಿ ಕಟ್ಟಡ ತ್ಯಾಜ್ಯ ಹಾಕಬೇಕು. ಒಂದು ವೇಳೆ ಪಾಲಿಕೆಗೆ ಮಾಹಿತಿ ನೀಡಿ–ದರೆ ಸಿಬ್ಬಂದಿ ಅದನ್ನು ಸಾಗಣೆ ವೆಚ್ಚ ಪಡೆದು ವಿಲೇವಾರಿ ಮಾಡುವರು. ಮನೆ ಕಸ ತ್ಯಾಜ್ಯ ಎಲ್ಲೆಂದರಲ್ಲಿ ಬಿಸಾಡಿದರೆ ಪಾಲಿಕೆ ಅಧಿಕಾರಿಗಳು ಕಠಿಣ ಕ್ರಮಕೈಗೊಳ್ಳುವರು. ಖಾಲಿ ನಿವೇಶನದಾರರು ಸುತ್ತ ಕಾಂಪೌಂಡ್ ನಿರ್ಮಿಸಿಕೊಳ್ಳಬೇಕು ಎಂದರು.

# ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ ಬೆಳೆಸಲು ಯುವ ಸಂಸತ್ ಕಾರ್ಯಕ್ರಮ

**ಚಿಕ್ಕಮಗಳೂರು, ಸೆ. 17:** ವಿದ್ಯಾರ್ಥಿ ದೆಸೆಯಿಂದಲೇ ಶಾಲಾ ಮಕ್ಕಳಿಗೆ ನಾಯಕತ್ವದ ಗುಣಗಳನ್ನು ಬೆಳೆಸುವುದು, ಸರ್ಕಾರ ಆಡಳಿತ ವೈಖರಿ ಮತ್ತಿತರ ವಿಷಯಗಳ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದ ಯುವ ಸಂಸತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಪದವಿ ಪೂರ್ವ ಇಲಾಖೆಯ ಉಪನಿರ್ದೇಶಕಿ ಮಂಜುಳ ಕೆ ಹೇಳಿದರು.

ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಇಂದು ಸಂಸದೀಯ ವ್ಯವಹಾರಗಳ ಮತ್ತು ಶಾಸನ ರಚನಾ ಇಲಾಖೆ ಹಾಗೂ ಪದವಿ ಪೂರ್ವ ಇಲಾಖೆ ವತಿಯಿಂದ ಪದವಿ ಪೂರ್ವ ವಿದ್ಯಾರ್ಥಿಗಳಿಗೆ ಏರ್ಪಡಿಸಲಾಗಿದ್ದ ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ದೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜನಪ್ರತಿನಿಧಿ ಸಂಸ್ಥೆಗಳ ಪಾತ್ರದ ಬಗ್ಗೆ ಅರಿವು ಮೂಡಿಸುವುದು ವಿದ್ಯಾರ್ಥಿಗಳಲ್ಲಿ ಗ್ರಾಮ ಪಂಚಾಯಿತಿ, ತಾಲ್ಲೂಕು ಜಿಲ್ಲಾ ಪಂಚಾಯಿತಿ



ವಿಧಾನ ಸಭಾ ಹಾಗೂ ಸಂಸತ್‌ಗಳಲ್ಲಿ ನಡೆಸುವ ಕಲಾಪಗಳ ಬಗ್ಗೆ ಪರಿಚಯಿಸುವುದು ಸೇರಿದಂತೆ ಪ್ರಜಾಪ್ರಭುತ್ವದ ಬುನಾದಿಯನ್ನು ಭದ್ರಪಡಿಸುವ ದಿಶೆಯಲ್ಲಿ ಎಲ್ಲರ ಅಭಿಪ್ರಾಯಕ್ಕೆ ಮನ್ನಣೆಯಿದ್ದು, ಭಾತರದ ಪ್ರಜಾಪ್ರಭುತ್ವದ ಆಡಳಿತದ ಬಗ್ಗೆ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.

ಸಮಾಜದಲ್ಲಿರುವ ಪ್ರಚಲಿತ ಸಮಸ್ಯೆಗಳನ್ನು ತೆಗೆದುಕೊಂಡು ಅಣುಕು ಸಂಸತ್ ಕಲಾಪಗಳನ್ನು ಆಯೋಜಿಸಲಾಗುತ್ತದೆ ಎಂದ ಅವರು ವಿದ್ಯಾರ್ಥಿಗಳಿಗೆ ವಿವಿಧ ಪಾತ್ರಗಳನ್ನು ನೀಡಿ ಅವರಿಗೆ ಕಲಾಪಗಳನ್ನು ನಡೆಸಲು ಅವಕಾಶ ಕಲ್ಪಿಸಲಾಗುತ್ತದೆ ಎಂದು ಹೇಳಿದರು.

ಮೂಡಿಗೆರೆ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಮಹೇಶ ಬಿ ಅವರು ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ ತಾಲ್ಲೂಕು ಹಂತದಿಂದ ಶಾಲಾ ವಿದ್ಯಾರ್ಥಿಗಳಿಗೆ ತರಬೇತಿ ನೀಡಿ ಸಂಸತ್ ಹಾಗೂ ಸಂಸತ್ ಕಾರ್ಯ ವೈಖಾರಿ ಬಗ್ಗೆ ಮಾಹಿತಿ ನೀಡಿ ಇದಕ್ಕಾಗಿ ಜಿಲ್ಲೆಯ ವಿವಿಧ ಶಾಲೆಗಳಿಂದ ಮಕ್ಕಳನ್ನು ಆಯ್ಕೆ ಮಾಡಿಕೊಳ್ಳಲಾಗಿತ್ತು ಎಂದ ಅವರು ಯುವ ಸಂಸತ್ ಕಾರ್ಯಕ್ರಮದಲ್ಲಿ ಕಾಲೇಜು ವಿದ್ಯಾರ್ಥಿಗಳು ಉತ್ತಮ ಪ್ರದರ್ಶನ ನೀಡಿ, ಸಂಸತ್ ಮಾದರಿಯಲ್ಲಿ ಅವರಿಗೆ ಕೊಟ್ಟ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಿದ್ದಾರೆ ಎಂದರು. ಈ ಕಾರ್ಯಕ್ರಮದಲ್ಲಿ ಸಂಸತ್ ಸಭೆಯಲ್ಲಿ ನಡೆಯುತ್ತಿದ್ದ ಕಲಾಪಗಳನ್ನು ಆಸೀನರಾಗಿದ್ದ ವಿದ್ಯಾರ್ಥಿಗಳು ಆಸಕ್ತಿಯಿಂದ ಆಲಿಸಿ ವಾಕ್‌ಚಾತುರ್ಯದ ಮೂಲಕ ಹಲವು ವಿದ್ಯಾರ್ಥಿಗಳು,ತೀರ್ಪುದಾರರು ಮತು ಉಪನ್ಯಾಸಕರುಗಳ ಗಮನ ಸೆಳೆದಿದೆ ಎಂದು ಹೇಳಿದರು

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವಿಜಯ್ ಕುಮಾರ್ ಬಿ.ಕೆ ಹಾಗೂ ಬೀರೂರು ಕೆ.ಎಲ್ ಕಾಲೇಜು ಉಪನ್ಯಾಸಕರಾಧ ಪ್ರದೀಪ್ ಬಿ.ವಿ ಅವರುಗಳು ಸಮಾರಂಭದಲ್ಲಿ ಮಾತನಾಡಿದರು,

ಉಪನ್ಯಾಸಕರಾದ ಶಿವಕುಮಾರ್ ಎಮ್ ಸ್ವಾಗತಿಸಿದರು, ನವೀನ್ ಕುಮಾರ್ ವಂದಿಸಿದರು

## ಸೆ.19, 20ರಂದು ಪ.ಪೂ.ಕಾಲೇಜುಗಳ ರಾಜ್ಯಮಟ್ಟದ ಫುಟ್‌ಬಾಲ್ ಪಂದ್ಯಾವಳಿ

**ದಾವಣಗೆರೆ.ಸೆ.17:** ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ದಾವಣಗೆರೆ ಜಿಲ್ಲೆ ಹಾಗೂ ಆನಂದ್ ಪದವಿಪೂರ್ವ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಸೆಪ್ಟಂಬರ್ 19 ಮತ್ತು 20ರಂದು ಪದವಿಪೂರ್ವ ಕಾಲೇಜುಗಳ ರಾಜ್ಯಮಟ್ಟದ ಫುಟ್‌ಬಾಲ್ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಪಳನಿವೇಲು ದೊರೈಸ್ವಾಮಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆ.18ರಂದು ಸಂಜೆ 6ಕ್ಕೆ ಪಂದ್ಯಾಳಿಯ ಉದ್ಘಾಟನೆ ನಡೆಯಲಿದೆ. ಇದಕ್ಕೂ ಮುನ್ನ ರಾಜ್ಯದ ವಿವಿಧ ಕಡೆಗಳಿಂದ ಆಗಮಿಸುವ ಕ್ರೀಡಾಪಟುಗಳ ನೊಂದಣಿ ಕಾರ್ಯ ನಡೆಯಲಿದೆ. ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಪಂದ್ಯಾವಳಿಗೆ ಚಾಲನೆ ನೀಡಲಿದ್ದು, ಶಾಸಕ ಡಾ.ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ. ವಿಶೇ? ಆಹ್ವಾನಿತರಾಗಿ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್, ಜಿಲ್ಲೆಯ ಶಾಸಕರು, ವಿಧಾನ ಪರಿ?ತ್ತಿನ ಸದಸ್ಯರು, ನಿಗಮ ಮಂಡಳಿಗೆ ಅಧ್ಯಕ್ಷರು, ಶಾಲಾ ಶಿಕ್ಷಣ ಇಲಾಖೆಯ ನಿರ್ದೇಶಕ ಎಸ್.ಭರತ್, ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಎಸ್ಪಿ ಉಮಾಪ್ರಶಾಂತ್ ಸೇರಿದಂತೆ ಇತರೆ ಅಧಿಕಾರಿಗಳು ಆಗಮಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಸೆ.19 ಮತ್ತು 20ರಂದು ನಾಕೌಟ್ ಮಾದರಿಯಲ್ಲಿ ಪಂದ್ಯಾವಳಿ ನಡೆಯಲಿದ್ದು, 20ರ ಸಂಜೆ 4ಕ್ಕೆ ಬಹುಮಾನ ವಿತರಣೆ ಸಮಾರಂಭ ನಡೆಯಲಿದೆ. ಶಾಸಕ ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸಲಿದ್ದು, ಆನಂದ್ ಪೋತಿನ, ಡಿ.ಪಳನಿವೇಲು, ಅವಿನಾಶ್ ಜೆ.ನಾಯ್ಕ, ಎನ್.ಓಹಿಲೇಶ್ವರ ಉಪಸ್ಥಿತಿ ಇರಲಿದ್ದಾರೆ ಎಂದರು.

## ನಾಳೆ ಹುಬ್ಬಳ್ಳಿಯಲ್ಲಿ ಹರ–ಗುರು–ಚರಮೂರ್ತಿಗಳ ವೀರಶೈವ ಲಿಂಗಾಯತ ಏಕತಾ ಸಮಾವೇಶ

**ದಾವಣಗೆರೆ.ಸೆ.17:** ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ನೇತೃತ್ವದಲ್ಲಿ ಸೆ.19 ರಂದು ಹುಬ್ಬಳ್ಳಿಯಲ್ಲಿ ವೀರಶೈವ ಲಿಂಗಾಯತ ಏಕತಾ ಸಮಾವೇಶ ನಡೆಯಲಿದೆ ಎಂದು ಮಹಾಸಭಾದ ತಾಲ್ಲೂಕು ಅಧ್ಯಕ್ಷ ಶಂಭು ಉರೇಕೊಂಡಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಡಿನ ಹಲವಾರು ಹರ–ಗುರು ಚರಮೂರ್ತಿಗಳ ಸಾನಿಧ್ಯದಲ್ಲಿ 3.00 ಗಂಟೆಗೆ ಹುಬ್ಬಳ್ಳಿ ನಗರದ ನೆಹರೂ ಮೈದಾನದಲ್ಲಿ ವೀರಶೈವ ಲಿಂಗಾಯತ ಏಕತಾ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದ್ದು, ವೀರಶೈವ ಲಿಂಗಾಯತ ಸಮಾಜವನ್ನು ಒಗ್ಗೂಡಿಸಿ. ಸಮಾಜ ಬಾಂಧವರಲ್ಲಿ ನಾವೆಲ್ಲ ಒಂದು ಎಂಬ ಭಾವನೆ ಮೂಡಿಸುವುದು ಈ ಸಮಾವೇಶದ ಉದ್ದೇಶವಾಗಿದೆ. ಈ ಸಮಾವೇಶದಲ್ಲಿ ಭಾಗವಹಿಸುವ ಎಲ್ಲರಿಗೂ ಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿದೆ.

# ಸಮೀಕ್ಷೆಯಲ್ಲಿ ಹಡಪದ ಎಂದೇ ಬರೆಸಲು ಮನವಿ

**ಹೊನ್ನಾಳಿ :** ರಾಜ್ಯದಲ್ಲಿ ಹಿಂದೂಳಿದ ವರ್ಗಗಳ ಆಯೋಗ ಸೆ.22 ರಿಂದ ನಡೆಸಲಿರುವ ಶೈಕ್ಷಣಿಕ ಆರ್ಥಿಕ ಮತ್ತು ಸಾಮಾಜಿಕ ಸಮೀಕ್ಷೆಯಲ್ಲಿ ತಾಲೂಕಿನ ಹಡಪದ ಸಮಾಜ ಬಾಂಧವರ "ಹಡಪದ" ಎಂದೇ ಬರೆಸಬೇಕು ಎಂದು ತಾಲೂಕ್ ಹಡಪದ ಅಪ್ಪಣ ಸಮಾಜದ ತಾಲೂಕು ಅಧ್ಯಕ್ಷ ವಿರುಪಾಕ್ಷಪ ಹೇಳಿದರು.

ಅವರು ಶೈಕ್ಷಣಿಕ ಸಾಮಾಜಿಕ ಸಮೀಕ್ಷೆ ಬಗ್ಗೆ ಬುಧವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರೆದಿಂದ ಸಮಾಜ ಬಂದುಗಳ ಸಭೆಯಲ್ಲಿ ಮಾತನಾಡಿದರು.

ನಮ್ಮ ಸಮುದಾಯದ ಜನರ ಹಿತಕ್ಕಗಿ ಸರಕಾರದ ಸೌಲಭ್ಯಗಳು ಕೆಳ ಮಟ್ಟದ ಸಮಾಜಕ್ಕು ತಲಪುವ ಉದ್ದೇಶದಿಂದ ಈ ಶೈಕ್ಷಣಿಕ ಆರ್ಥಿಕ ಮತ್ತು ಸಾಮಾಜಿಕ ಸಮೀಕ್ಷೆಯನ್ನು ಮಾಡುತ್ತಿದೆ ಅದ್ದರಿಂದ ತಮ್ಮ ಗ್ರಾಮಗಳ ಮನೆಗಳಿಗೆ ಶಿಕ್ಷಕರು



ಬರುತ್ತಾರೆ,ಸಮಿಕ್ಷ ಕುರಿತು ತಮ್ಮಲ್ಲಿ ತಮ್ಮ ಕುಟುಂಬದ ಕುರಿತು 60 ಪ್ರಶ್ನೆಗಳನ್ನು ಕೇಳುತ್ತಾರೆ ಆಸದ ಕಾರಣ ಹಡಪದ ಸಮಾಜದ ಬಂದವರು ಧರ್ಮದ ಕಾಲಂ ನಲ್ಲಿ ಹಿಂದೂ ಎಂದು ಜಾತಿ ಕಾಲಂ ನಲ್ಲಿ "ಹಡಪದ" ಎಂದು ಬರೆಸಬೇಕೆಂದು ಮನವಿ ಮಾಡಿದರು.

ಹಡಪದ ಸಮಾಜದ ಮುಖಂಡ ಕೀಳು ಕುದುರೆ ಕಾಲವಿದ ಬಸವರಾಜುನರಸಹೂಂಡನಹಳ್ಳಿ ಮಾತನಾಡಿ ಹಡಪದ ಅಪ್ಪಣ ಸಮಾಜದ ಎಲ್ಲರೂ ಕೂಡ ಯಾವುದೇ ಗೊಂದಲಗಳಿಗೆ ಒಳಗಾಗದೇ ಸಮೀಕ್ಷೆಗೆ ಮನೆ ಮನೆಗಳಿಗೆ ಬರುವವರಿಂದ ಮಾಹಿತಿ ಪಡೆದು ಅವುಗಳನ್ನು ಸಮೀಕ್ಷಾ ಫಾರಂಗಳನ್ನು ಭರ್ತಿ ಮಾಡಬೇಕು ಇದ–ರಿಂದ ಎಲ್ಲರಿಗೂ ಸಾಮಾಜಿಕ ನ್ಯಾಯ ಒದಗಿಸಲು ಸರಕಾರಕ್ಕೆ ಸಹಾಯವಾಗುತ್ತದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಹಡಪದ ಅಪ್ಪಣ ಸಮಾಜದ ಉಪಾದ್ಯಕ್ಷ ಕೆ.ಬಿ.ಮಂಜುನಾಥ,ಎಚ್.ಬಿ.ಸುರೇಶ್,ಕಾರ್ಯದರ್ಶಿ ಹನುಮನಹಳ್ಳಿ ರಾಜು,ಸಹಯಾಕ ಕಾರ್ಯದರ್ಶಿ ಸಾಸೆಹಳ್ಳಿ ಹಾಲೇಶ್,ಸಂಘಟನ ಕಾರ್ಯದರ್ಶಿ ಉಜ್ಜಿನಿಪುರ ಪರಮೇಶ್ ,ಕೆ.ವಿ.ಮಹೇಶ್,ಕ್ಯಾಸಿನಕೇರಿ ಶಿವಪ್ಪ, ವೀರೇಶ್,ಕತ್ತಿಗಿಚನ್ನಪ್ಪ,ಭರ್ಮಪ್ಪ ಇತರರು ಇದ್ದರು.

## ಇಂದು ಆಮ್ ಆದ್ಮಿ ಪಕ್ಷದಿಂದ ವಿವಿಧ ಬೇಡಿಕೆ ಈಡೇರಿಕೆಗಾಗಿ ಧರಣಿ ಸತ್ಯಾಗ್ರಹ

**ದಾವಣಗೆರೆ.ಸೆ.17:** ಮಹಾನಗರ ಪಾಲಿಕೆ ವ್ಯಾಪ್ತಿಯ ಭಾ? ನಗರದ ಮುಖ್ಯ ರಸ್ತೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ವೈದ್ಯರ ನೇಮಕ ಸೇರಿದಂತೆ ಇತರೆ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಆಮ್ ಆದ್ಮಿ ಪಕ್ಷದ ವತಿಯಿಂದ ಸೆ.18ರ ಇಂದು ಆರೋಗ್ಯ ಕೇಂದ್ರದ ಮುಂಭಾಗದಲ್ಲಿ ಬೆಳಿಗ್ಗೆ 10 ಗಂಟೆಯಿಂದ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ಎಎಪಿ ಜಿಲ್ಲಾಧ್ಯಕ್ಷ ಕೆ.ಎಸ್.ಶಿವಕುಮಾರಪ್ಪ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರೋಗ್ಯ ಕೇಂದ್ರದಲ್ಲಿ ಬೆಳಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆವರೆಗೂ ಮಾತ್ರ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆದ್ದರಿಂದ ಸಂಜೆ 4 ಗಂಟೆಯಿಂದ ಬೆಳಗ್ಗೆ 10 ಗಂಟೆ ವರೆಗೂ ಹೆರಿಗೆ ಶಸ್ತ್ರ ಚಿಕಿತ್ಸೆ ವೈದ್ಯರು, ಮಕ್ಕಳ ವೈದ್ಯರು ನೇಮಕ್ಕಾಗಿ ಮತ್ತು ಸ್ಕ್ಯಾನಿಂಗ್ ಯಂತ್ರೋಪಕರಣಕ್ಕಾಗಿ ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿತ್ತು. ಆದರೆ ಜಿಲ್ಲಾ ಆರೋಗ್ಯಾಧಿಕಾರಿಗಳಿಂದ ಸಕಾರಾತ್ಮಕವಾದ ಉತ್ತರ ಸಿಗದ ಕಾರಣ ಆರೋಗ್ಯ ಕೇಂದ್ರದ ಮುಂಭಾಗದಲ್ಲಿ ಬೇಡಿಕೆಯನ್ನು ಈಡೇರಿಸಬೇಕೆಂದು ಒತ್ತಾಯಿಸಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದರು.

# ಅರ್ಜಿ ಆಹ್ವಾನ

**ಗದಗ :** ಕರ್ನಾಟಕ ಉಚ್ಚ ನ್ಯಾಯಾಲಯ, ಧಾರವಾಡ/ ಬೆಂಗಳೂರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು / ಬೆಳಗಾವಿ ನ್ಯಾಯಾಲಯಗಳಲ್ಲಿ ಜಿಲ್ಲಾ ಪಂಚಾಯತಿ ಅಧ್ಯಕ್ಷರು ಅಧಿಕಾರಿಗಳನ್ನು ಎದುರುದಾರರನ್ನಾಗಿಸಿ ದಾಖಲಾಗುವ ರಿಟ್ ಅರ್ಜಿಗಳನ್ನು ನಿರ್ವಹಿಸಲು ಆಯಾ ನ್ಯಾಯಾಲಯಗಳಲ್ಲಿ ಖಾಯಂ ಸದಸ್ಯ ನೋಂದಣಿಯಾಗಿರುವ, ಜಿಲ್ಲಾ ಪಂಚಾಯತಿ ಹಾಗೂ ಇತರೆ ವಿವಿಧ ಕಚೇರಿಗಳ ಪರವಾಗಿ ನ್ಯಾಯವಾದಿಗಳಾಗಿ ಕಾರ್ಯನಿರ್ವಹಿಸಿದ ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಕ್ಕೆ ಸಂಬಂಧಿಸಿದ ಪ್ರಕರಣಗಳಲ್ಲಿ ಜಿಲ್ಲಾ ಪಂಚಾಯತ್ , ತಾಲೂಕು ಪಂಚಾಯತ್, ಹಾಗೂ ಗ್ರಾಮ ಪಂಚಾಯತಿ ಪರವಾಗಿ ಪ್ರಕರಣಗಳನ್ನು ನಿರ್ವಹಿಸಿದ ಬಗ್ಗೆ ಕನಿಷ್ಟ 5 ವರ್ಷಗಳ ಅನುಭವ ಹೊಂದಿರುವ ವಕೀಲರನ್ನು ನೇಮಿಸಿಕೊಳ್ಳುವ ಕುರಿತು ನ್ಯಾಯವಾದಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಅರ್ಜಿದಾರರು ತಮ್ಮ ಹೆಸರು, ವಯಸ್ಸು, ವಿದ್ಯಾರ್ಹತೆ, ಅನುಭವ, ವಿವಿಧ ಕಚೇರಿಗಳ ಪರವಾಗಿ ನ್ಯಾಯವಾದಿಗಳಾಗಿ ಕಾರ್ಯನಿರ್ವಹಿಸಿದ ವಿವರದ ಕುರಿತು ಆಯಾ ಕಚೇರಿಯಿಂದ ಪಡೆದ ಪ್ರಮಾಣ ಪತ್ರ ಸಲ್ಲಿಸಬೇಕು. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ ಹಾಗೂ ಗ್ರಾಮ ಪಂಚಾಯತ್ /ತಾಲೂಕು ಪಂಚಾಯತ್/ ಜಿಲ್ಲಾ ಪಂಚಾಯತ್‌ಗಳಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ವಾದ ಮಂಡಿಸಿದ ಬಗ್ಗೆ ವಿವರ ಸಲ್ಲಿಸಬೇಕು. ಕನಿಷ್ಟ 10 ರಿಂದ 15 ವರ್ಷ ನ್ಯಾಯಾಲಯದ ಕಾರ್ಯಕಲಾಪಗಳಲ್ಲಿ ಕಾರ್ಯನಿರ್ವಹಿಸಿದ ಅನುಭವ ಹೊಂದಿದ ಬಗ್ಗೆ ಸೂಕ್ತ ಪ್ರಾಧಿಕಾರದಿಂದ ಪಡೆದ ಪ್ರಮಾಣಪತ್ರ ಅಥವಾ ನೋಂದಣಿ ಪ್ರಮಾಣ ಪತ್ರ ಸಲ್ಲಿಸುವುದು. ಆಸಕ್ತ ನ್ಯಾಯವಾದಿಗಳು ತಮ್ಮ ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿ ಅರ್ಜಿಯನ್ನು ಜಿಲ್ಲಾ ಪಂಚಾಯತಿ ಕಾರ್ಯಾಲಯಕ್ಕೆ ಸೆಪ್ಟೆಂಬರ್ 26 ರೊಳಗೆ ಸಲ್ಲಿಸಬೇಕು. ಮಾಹಿತಿಯನ್ನು ದಠಿಂಚಿಜಚಿರ.ಞಚಿಡಿಟಿಚಿಣಚಿಞಚಿ.ರಠತ.ಟಿ ನಲ್ಲಿ ವೀಕ್ಷಿಸಬಹುದಾಗಿದೆ ಎಂದು ಗದಗ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾನೂನು ಪದವೀಧರರಿಗೆ ತರಬೇತಿಗಾಗಿ ಆಯ್ಕೆ ಕುರಿತು ಅರ್ಜಿ ಆಹ್ವಾನ

**ಗದಗ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ತರಬೇತಿಗೆ ಆಯ್ಕೆ ಮಾಡಬೇಕಾಗಿದ್ದು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಹಾಗೂ ಅರ್ಹ ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ಭರ್ತಿ ಮಾಡಿದ ಅರ್ಜಿಯನ್ನು ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳಿಗೆ ಅಕ್ಟೋಬರ್ 15 ರಂದು ಸಂಜೆ 5 ಗಂಟೆಯೊಳಗಾಗಿ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ 208, ಹುಬ್ಬಳ್ಳಿ ರಸ್ತೆ, ಗದಗ ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

# ಅರ್ಜಿ ಆಹ್ವಾನ

**ಹಾಸನ :** ಹಿಂದೂಸ್ಥಾನ್‌ಏರೋನ್ಯಾಟಿಕ್ಸ(ಲಿ) ಟೆಕ್ನಿಕಲ್‌ಟ್ರೈನಿಂಗ್ ಇನ್ಸ್ಟಿಟ್ಯೂಟ್ ಬೆಂಗಳೂರು-17 ರವರಿಂದ ಫಿಟ್ಟರ್, ಟರ್ನರ್, ಮೇಷಿನಿಷ್ಟ್, ಎಲೆಕ್ಟ್ರೀಷಿಯನ್, ವೆಲ್ಡರ್, ಫೌಂಡ್ರೀ ಮ್ಯಾನ್, ಶೀಟ್ ಮೆಟಲ್ ವರ್ಕರ್, ಟ್ರೇಡ್‌ಕಂಪ್ಯೂಟರ್‌ಆಪರೇಟರ್ ಮತ್ತು ಪ್ರೋಗ್ರಾಮಿಂಗ್ ಅಸಿಸ್ಟೆಂಟ್, ಕಾರ್ ಪೇಂಟರ್, ಟೂಲ್‌ಅಂಡ್‌ಡೈ ಮೇಕರ್, ಸಿಎನ್ ಸಿ ಪ್ರೋಗ್ರಾಮರ್ ಹಾಗೂ ಆಪರೇಟರ್, ಮೆಕಾನಿಕ್‌ರೆಫ್ರೀಜರೇಷನ್ ಮತ್ತುಏರ್‌ಕಂಡೀಷನಿಂಗ್ ಗಳಿಗೆ ಫುಲ್‌ಟರ್ಮಅಪ್ರೆಂಟಿಸ್‌ಟ್ರೈನಿಂಗ್‌ತರಬೇತಿ ನೀಡುವವರಿದ್ದು, ಅಸಕ್ತ ಅರ್ಹ ಅಭ್ಯರ್ಥಿಗಳು ಉದ್ಯೋಗಾಧಿಕಾರಿಗಳು, ಜಿಲ್ಲಾಉದ್ಯೋಗ ವಿನಿಮಯಕೇಂದ್ರ, ಹಾಸನ- ರವರನ್ನುಕಚೇರಿ ವೇಳೆಯಲ್ಲಿ ಸಂಪರ್ಕಿಸಿ ಅರ್ಜಿ ನಮೂನೆ ಪಡೆದು ಭರ್ತಿ ಮಾಡಿದಈ-ಕಚೇರಿಯಲ್ಲಿ ಸಲ್ಲಿಸಬಹುದಾಗಿದೆ. ವಿದ್ಯಾರ್ಹತೆ:ಐಟಿಐತೇರ್ಗಡೆ ಹೊಂದಿರಬೇಕು, ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕಡ್ಡಾಯವಾಗಿhttps://apprenticeshipindia.gov.in/candidate-registration ನಲ್ಲಿ ನೋಂದಾಯಿಸಿ ಅರ್ಜಿ ನಮೂನೆಯಲ್ಲಿಅಪ್ರೆಂಟಿಸ್ ನೋಂದಣಿ ಸಂಖ್ಯೆ ನಮೂದಿಸುವುದು ಹಾಗೂ ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ಸ್ಟೈಫಂಡ್( ಸರ್ಕಾರ ನಿಗಧಿಪಡಿಸಿದಂತೆ) ನೀಡಲಾಗುವುದು. ಭರ್ತಿ ಮಾಡಿದಅರ್ಜಿಯನ್ನು ಈ ಕಚೇರಿಗೆ ಸಲ್ಲಿಸಲುಕೊನೆಯ ದಿನಾಂಕ: 30-09-2025 ಅರ್ಜಿಯೊಂದಿಗೆಅಭ್ಯರ್ಥಿಯಇತ್ತೀಚಿನ ಪಾಸ್ ಪೋರ್ಟ ಆಳತೆಯ ಭಾವಚಿತ್ರ ಅಂಟಿಸಿ, ಎನ್.ಟಿ.ಸಿ ಸರ್ಟಿಫೀಕೆಟ್, ಆಧಾರ್‌ಕಾರ್ಡ್ ಮತ್ತು ಪಾನ್‌ಕಾರ್ಡ್‌ಜೆರಾಕ್ಸ್ ಪ್ರತಿಗಳನ್ನು ಲಗತ್ತಿಸಿ ಸಲ್ಲಿಸಬೇಕು.

# ಉದ್ಯೋಗಖಾತ್ರಿ ಯೋಜನೆ ವ್ಯವಸ್ಥಿತ ಅನುಷ್ಠಾನಕ್ಕೆ ಸೂಚನೆ

**ಶಿವಮೊಗ್ಗ :** ಜಿಲ್ಲೆಯಲ್ಲಿ ನರೇಗಾ ಯೋಜನೆಯ ವ್ಯವಸ್ಥಿತ ಅನುಷ್ಠಾನದಲ್ಲಿ ಅನೇಕ ಲೋಪಗಳಿದ್ದು, ಅವುಗಳನ್ನು ಸರಿಪಡಿಸುವಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ವಿಶೇಷ ಗಮನಹರಿಸಬೇಕಲ್ಲದೆ ಸರ್ಕಾರಕ್ಕೆ ಸಭೆಯ ನಡಾವಳಿಯನ್ನು ಸಲ್ಲಿಸುವಂತೆ ಸಂಸದ ಬಿ.ವೈ.ರಾಘವೇಂದ್ರ ಅವರು ಹೇಳಿದರು.



ಅವರು ಇಂದು ಜಿಲ್ಲಾ ಮಟ್ಟದ ಅಭಿವೃದ್ಧಿ, ಸಮನ್ವಯತೆ ಹಾಗೂ ಮೇಲ್ವಿಚಾರಣೆ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ನರೇಗಾ ಯೋಜನೆಯಡಿಯಲ್ಲಿ ಉದ್ಯೋಗಚೀಟಿ ಪಡೆದವರಿಗೆ ಪಾವತಿಸುವ ಹಣದಲ್ಲಿ ಅಕ್ರಮಗಳಿಗೆ ಅವಕಾಶವಾಗಿರುವುದನ್ನು ಸಮಿತಿ ಸದಸ್ಯರು ಗಮನಕ್ಕೆ ತಂದಿರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಪರಿಶೀಲಿಸಿ ಕ್ರಮ ಕೈಗೊಳ್ಳಬೇಕಲ್ಲದೆ ಕ್ರಿಯಾಯೋಜನೆಯಲ್ಲಿನ ಅನೇಕ ಲೋಪಗಳಲ್ಲಿನ ಲೋಪಗಳನ್ನು ಸರಿಪಡಿಸಿಕೊಳ್ಳಬೇಕು. ಕ್ರಿಯಾಯೋಜನೆ ತಯಾರಿಸುವ ಮುನ್ನ ಅಧಿಕಾರಿಗಳು ಸ್ಥಳಕ್ಕೆ ಖುದ್ದು ಭೇಟಿ ನೀಡಿ ಪರಿಶೀಲಿಸಿ ನಂತರ ಕ್ರಿಯಾಯೋಜನೆ ರೂಪಿಸಬೇಕು ಎಂದರು.

ಭದ್ರಾವತಿಯಲ್ಲಿ ಅಪರಾಧ ಚಟುಚಟಿಕೆ ಹೆಚ್ಚಾಗಿದ್ದು, ಅದನ್ನು ಕಡಿವಾಣ ಹಾಕಬೇಕಿದೆ. ಇದರೊಟ್ಟಿಗೆ ಅಟ್ರಾಸಿಟಿ ಕಾಯ್ದೆಯು ಕೂಡ ದುರುಪಯೋಗವಾಗುತ್ತಿದ್ದು, ಇದಕ್ಕೆ ಅವಕಾಶ ನೀಡಬಾರದು ಎಂದು ಸಂಸದ ಬಿ.ವೈ.ರಾಘವೇಂದ್ರ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಗೆ ತಿಳಿಸಿದರು. ಅಮೃತ್ 1.0 ಯೋಜನೆಯಡಿ ಈಗಾಗಲೇ ಜಿಲ್ಲೆಯಲ್ಲಿ ನೀರು ಸರಬರಾಜು ಮಾಡಲಾಗಿದ್ದು, ಮುಂದಿನ ದಿನಗಳಲ್ಲಿ ಅಮೃತ್ 2.0 ಯೋಜನೆಯಡಿಯಲ್ಲಿ ನೀರು ಸರಬರಾಜು ಕಲ್ಪಿಸುವ ಕಾಮಗಾರಿಯನ್ನು ಕೈಗೊಳ್ಳಲಾಗುವುದು ಎಂದರು.

ಜಿಲ್ಲೆಯಲಿ ಅನುಷ್ಠಾನದಲ್ಲಿರುವ 1000 ಕೋಟಿ ವೆಚ್ಚದ ಯುಜಿಡಿ ಯೋಜನೆ ಅನುಷ್ಠಾನದ ಬಗ್ಗೆ ದೂರುಗಳು ಬರುತ್ತಿದ್ದು, ಅದನ್ನು ಸರಿಪಡಿಸುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖಾ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು. ಸರಿಯಾದ ನೀರು ಸರಬರಾಜು, ಒಳಚರಂಡಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಮೊದಲ ಆದ್ಯತೆ ನೀಡಬೇಕು. ಸಮಸ್ಯೆಗಳ ನಿವಾರಣೆಗೆ ಅಧಿಕಾರಿಗಳು ಎಲ್ಲಾ ರೀತಿಯ ಶ್ರಮವನ್ನು ವಹಿಸಬೇಕು. ಇಲಾಖೆಯ ಸಚಿವರಿಗೂ ಕೂಡ ಸಂಪರ್ಕ ಮಾಡಿ ಈ ಕುರಿತು ಅಧಿಕಾರಿಗಳು ತಿಳಿಸುವಂತಾಗಬೇಕು ಎಂದರು.

ಪಿಎಂಎಜಿವೈ ಯೋಜನೆಯಿಂದ ಎಸ್ಸಿ/ಎಸ್ಟಿ ಕಾಲೋನಿಗೆ ಉತ್ತಮವಾದ ಮೂಲಭೂತ ಸೌಕರ್ಯ ಕಲ್ಪಿಸುವಲ್ಲಿ ಅಧಿಕಾರಿಗಳು ಗಮನಹರಿಸಬೇಕು. ಅಲ್ಲಿನ ಮಕ್ಕಳ ವಿದ್ಯಾಭ್ಯಾಸಕ್ಕೆ ಅಂಗನವಾಡಿ ಕೇಂದ್ರ, ಓಡಾಡಲು ಉತ್ತಮ ರಸ್ತೆ, ಚರಂಡಿ, ಸೋಲರ್ ಲೈಟ್ ಮಾಡಿಕೊಡಬೇಕು ಎಂದರು.

ಸಭೆಯಲ್ಲಿ ಉಪಸ್ಥಿತರಿದ್ದ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಮಾತನಾಡಿ, ಶಿಕಾರಿಪುರ, ಹಾನಗಲ್ ಮಾರ್ಗವಾದ ಟೋಲ್ಗೇಟ್ ಸಂಬಂಧಿಸಿದಂತೆ ಮಾಹಿತಿ ನೀಡಿದರು. ಟೋಲ್ ಗೇಟ್ ವಿರೋಧಿಸಿ ಪ್ರತಿಭಟನೆ ಮಾಡಿದ ಬೆನ್ನಲ್ಲೆ ಸಚಿವರ ಮಟ್ಟದಲ್ಲಿ ಸಭೆ ಮಾಡಲಾಗಿದೆ. ಹಾಗೂ ಸರ್ಕಾರಕ್ಕೂ ಪತ್ರವನ್ನು ಬರೆದಿದ್ದೇವೆ. ಇದು ಸರ್ಕಾರ ಮಟ್ಟದಲ್ಲಿ ಚರ್ಚೆಯಾಗಿ ನಿರ್ಧಾರವನ್ನು ತೆಗೆದುಕೊಳ್ಳಬೇಕಾಗಿದೆ ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ,

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎನ್. ಹೇಮಂತ್, ಜಿಲ್ಲಾ ಪೊಲೀಸ್ ಅಧೀಕ್ಷಕ ಜಿ.ಕೆ.ಮಿಥುನ್‌ಕುಮಾರ್, ವಿಧಾನ ಪರಿಷತ್ತಸದಸ್ಯೆ ಶ್ರೀಮತಿ ಬಲ್ಕೀಸ್ಬಾನು, ಡಾ॥ ಧನಂಜಯ ಸರ್ಜಿ, ಶಾಸಕ ಎಸ್.ಎನ್. ಚನ್ನಬಸಪ್ಪ, ದಿಶಾ ಸಮಿತಿಯ ಹಿರಿಯ ಸದಸ್ಯ ಕೆ.ಎಸ್.ಗುರುಮೂರ್ತಿ ಸೇರಿದಂತೆ ಸಮಿತಿಯ ನಾಮನಿರ್ದೇಶಿತ ಸದಸ್ಯರು, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

> ಶಿವಮೊಗ್ಗ-ಆನವಟ್ಟಿ ಮಾರ್ಗದಲ್ಲಿ ಸವಳಂಗ ಮತ್ತು ಕುಟ್ರಳ್ಳಿ ಸಮೀಪ ರಾಜ್ಯ ಹೆದ್ದಾರಿ 57ರಲ್ಲಿ ಅಳವಡಿಸಿರುವ ಟೋಲ್ಸುಂಕವಸೂಲಿ ಗೇಟುಗಳು ಅವೈಜ್ಞಾನಿಕವಾಗಿದೆ. ಇದು ಸರಿಯಲ್ಲ. ಅಲ್ಲದೇ ಸಾರ್ವಜನಿಕರ ಶೋಷಣೆಗೆ ಅವಕಾಶ ನೀಡಿದಂತಾಗಿದೆ. ಜನಸಾಮಾನ್ಯರಿಗೆ ಆರ್ಥಿಕ ಹೊರೆ ಹೆಚ್ಚಾಗಿದೆ. ಈ ಗೇಟುಗಳನ್ನು ಅಳವಡಿಸಿ ಅನೇಕ ವರ್ಷಗಳೇ ಸಂದಿವೆ. ಇವುಗಳನ್ನು ತ್ವರಿತವಾಗಿ ತೆರವುಗೊಳಿಸಬೇಕು.
>
> **- ಕೆ.ಎಸ್.ಗುರುಮೂರ್ತಿ, ದಿಶಾ ಸಮಿತಿ ಸದಸ್ಯ ಶಿಕಾರಿಪುರ.**

> ದುಮ್ಮಳ್ಳಿ ರಸ್ತೆಯ ಇಕ್ಕೆಲಗಳಲ್ಲಿ ಹಲವು ದಶಕಗಳಿಂದ ವಾಸವಿರುವ ನಿವಾಸಿಗಳಿಗೆ ಮೂಲಭೂತ ಸೌಲಭ್ಯ ಕಲ್ಪಿಸಿಕೊಟ್ಟು ಬೇರೆಡೆಗೆ ಸ್ಥಳಾಂತರಕ್ಕೆ ಕ್ರಮ ಕೈಗೊಳ್ಳಬೇಕು. ಅಲ್ಲದೇ ಚನ್ನಗಿರಿ ರಸ್ತೆ ರಾಷ್ಟ್ರೀಯ ಹೆದ್ದಾರಿಯಲ್ಲಿ ಬರುವ ಗ್ರಾಮಗಳ ರಸ್ತೆಯ ಇಕ್ಕೆಲಗಳಲ್ಲಿ ಚರಂಡಿ ವ್ಯವಸ್ಥೆ ಕಲ್ಪಿಸಬೇಕು. ಈ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕು.
>
> **- ಎಸ್.ಎನ್.ಚನ್ನಬಸಪ್ಪ, ಶಾಸಕರು, ಶಿವಮೊಗ್ಗ ವಿಧಾನ ಸಭಾ ಕ್ಷೇತ್ರ.**

> ರಾಷ್ಟ್ರೀಯ ಹೆದ್ದಾರಿ 15ರಲ್ಲಿನ ಸಕ್ಕರೆ ಕಾರ್ಖಾನೆ ಸಮೀಪ ದುಮ್ಮಳ್ಳಿ ರಸ್ತೆಯ ಇಕ್ಕೆಲಗಳಲ್ಲಿ ಅಂಗಡಿ-ಮುಂಗಟ್ಟು ಇಟ್ಟುಕೊಂಡಿರುವಲ್ಲಿ ಆಗಾಗ್ಗೆ ಆಕಸ್ಮಿಕ ಅಪಘಾತಗಳು ನಡೆಯುತ್ತಲೇ ಇವೆ. ಇವುಗಳ ನಿಯಂತ್ರಣಕ್ಕೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ತಕ್ಷಣದ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು. ಇಲ್ಲದಿದ್ದಲ್ಲಿ ಇನ್ನಷ್ಟು ಅನಾಹುತಗಳು ಸಂಭವಿಸುವ ಸಾಧ್ಯತೆ ಇದೆ.
>
> **- ಡಾ॥ ಧನಂಜಯ ಸರ್ಜಿ, ವಿಧಾನ ಪರಿಷತ್ತಸದಸ್ಯರು. ಶಿವಮೊಗ್ಗ.**

# ಪಕ್ಷ ವಿರೋಧಿ ಎಂ.ಪಿ.ರೇಣುಕಾಚಾರ್ಯರನ್ನು ಪ್ರಾಥಮಿಕ ಸದಸ್ಯತ್ವದಿಂದ ಉಚ್ಚಾಟಿಸಿ: ಬಿಜೆಪಿ ಮುಖಂಡರ ಒತ್ತಾಯ

**ದಾವಣಗೆರೆ:** ಪದೇ ಪದೇ ಪಕ್ಷದ್ರೋಹಿ ಚಟುವಟಿಕೆ ನಡೆಸುತ್ತಿರುವ ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಅವರನ್ನು ಕೂಡಲೇ ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ಉಚ್ಚಾಟನೆ ಮಾಡಬೇಕೆಂದು ಬಿಜೆಪಿಯ ಮಾಜಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಾಂತರಾಜ್ ಪಾಟೀಲ್ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೇಣುಕಾಚಾರ್ಯ ಕಳೆದ ಲೋಕಸಭಾ ಚುನಾವಣೆಯಲ್ಲಿ ಯಾವ ಪಕ್ಷದ ಅಭ್ಯರ್ಥಿ ಪರ ಕೆಲಸ ಮಾಡಿದರು ಎಂದು ಈಗಾಗಲೇ ಜಗಜ್ಜಾಹೀರಾಗಿದೆ. ಈಗ ಮತ್ತದೇ ಪಕ್ಷ ವಿರೋಧಿ ಚಟುವಟಿಕೆಯಲ್ಲಿ ಭಾಗಿಯಾಗಿರುವ ರೇಣುಕಾಚಾರ್ಯ, ಸೆ.14ರಂದು ನ್ಯಾಮತಿ ತಾಲ್ಲೂಕಿನ ತಾಲ್ಲೂಕು ವ್ಯವಸಾಯ ಉತ್ಪನ್ನ ಸಹಕಾರ ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆದಿದ್ದು, ಬಿಜೆಪಿ ಬೆಂಬಲಿತ ಅಭ್ಯರ್ಥಿಯಾಗಿದ್ದ ಗೋವಿನಕೋವಿಯ ಆರ್.ಪ್ರವೀಣ್ ಇವರನ್ನು ಬಿಟ್ಟು, ಇದೇ ಸ್ಥಾನಕ್ಕೆ ನ್ಯಾಮತಿ ತಾಲ್ಲೂಕಿನ ಹಾಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಿ.ಜಿ.ವಿಶ್ವನಾಥ್ ಅವರಿಗೆ ಬೆಂಬಲ ನೀಡಿದ್ದು ಪಕ್ಷ ವಿರೋಧಿ ಚಟುವಟಿಕೆ ಎಂದು ದೂರಿದರು.ಜಿಲ್ಲೆಯಲ್ಲಿ ಬಿಜೆಪಿ ಪಕ್ಷವನ್ನು ನಿತ್ರಾಣ ಮಾಡುವ ಹುನ್ನಾರವನ್ನು ಎಂ.ಪಿ.ರೇಣುಕಾಚಾರ್ಯ ಮಾಡುತ್ತಿದ್ದಾರೆ. ಅಲ್ಲದೇ ಮುಂಬರುವ ದಿನಗಳಲ್ಲಿ ಅವರು ಕಾಂಗ್ರೆಸ್ ಪಕ್ಷಕ್ಕೆ ಹೋಗುವ ತಯಾರಿ ನಡೆಸುತ್ತಿದ್ದಾರೆ. ಈ ಬಗ್ಗೆ ಈಗಾಗಲೇ ನಾವು ರಾಜ್ಯ ಘಟಕದ ಗಮನಕ್ಕೆ ತರಲಾಗಿದ್ದರೂ ಸಹ ಯಾವುದೇ ಕ್ರಮ ಕೈಗೊಳ್ಳಲು ಮುಂದಾಗಿಲ್ಲ. ಕಾರಣ ರಾಷ್ಟ್ರೀಯ ನಾಯಕರ ಗಮನಕ್ಕೆ ತರಲಾಗುವುದು ಎಂದು ಎಚ್ಚರಿಕೆ ನೀಡಿದರು.

ಇದು ಪ್ರಜಾ ತಂತ್ರದ ವ್ಯವಸ್ಥೆಯಲ್ಲಿ ನಡೆಯುವ ಚುನಾವಣೆಯ ಒಂದು ಪ್ರಕ್ರಿಯೆ. ಆದರೆ ಭಾರತೀಯ ಜನತಾ ಪಾರ್ಟಿ ನನ್ನ ಆತ್ಮ, ನನ್ನ ಆಸ್ತಿ, ನಾನು ಪಕ್ಷದ ಶಿಸ್ತಿನ ಸಿಪಾಯಿ ಎಂದು ಯಾವ ಜವಾಬ್ದಾರಿ ಇಲ್ಲದೇ ಇದ್ದರೂ ರಾಜ್ಯವನ್ನೇ ಸುತ್ತಾಡುವ ಹವ್ಯಾಸ ಹೊಂದಿರುವ ಮಾಜಿ ಸಚಿವ ರೇಣುಕಾಚಾರ್ಯ, ಹಲವಾರು ಅಧಿಕಾರ ಅನುಭವಿಸಿದ್ದು, ಇದೀಗ ಪಕ್ಷ ವಿರೋಧಿ ಚಟುವಟಿಕೆ ಮಾಡುತ್ತಿದ್ದಾರೆ. ಬಿಜೆಪಿಗೆ ದ್ರೋಹ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಆದ್ದರಿಂದ ಇಂತಹ ಪಕ್ಷದ ವಿಶ್ವಾಸ ದ್ರೋಹಿ ರೇಣುಕಾಚಾರ್ಯರನ್ನು ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ಕೂಡಲೇ ಉಚ್ಚಾಟನೆ ಮಾಡಿ ಪಕ್ಷದ ನಿಷ್ಠೆಯನ್ನು ಪ್ರದರ್ಶಿಸಬೇಕೆಂದು ಪಕ್ಷದ ರಾಜ್ಯಾಧ್ಯಕ್ಷರಿಗೆ, ಪಕ್ಷದ ಪದಾಧಿಕಾರಿಗಳಿಗೆ, ಪಕ್ಷದ ಶಿಸ್ತುಪಾಲನ ಸಮಿತಿಯ ರಾಜ್ಯಾಧ್ಯಕ್ಷರಿಗೆ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಎ.ಬಿ.ಹನುಮಂತಪ್ಪ, ಕೆ.ವಿ.ಚನ್ನಪ್ಪ, ಸಿ.ಕೆ.ರವಿ, ಮಂಜಣ್ಣ, ನೆಲಹೊನ್ನೆ ದೇವರಾಜ್, ಸೋಗಿಲು ಪ್ರಭು, ಅಜಯರೆಡ್ಡಿ ಇತರರು ಇದ್ದರು

# ವಿದ್ಯೆ ಎಂಬುದು ಸಾಧಕನ ಸ್ವತ್ತೇ ಹೊರತು ಸೋಮಾರಿಯದಲ್ಲ: ಡಾ.ಶುಕ್ಲಾ ಶೆಟ್ಟಿ

**ದಾವಣಗೆರೆ:** ವಿದ್ಯೆ ಎಂಬುದು ಸಾಧಕನ ಸ್ವತ್ತೇ ಹೊರತು ಸೋಮಾರಿಯದಲ್ಲ, ಶಿಕ್ಷಣ ಎಂಬ ಮೂರಕ್ಷರ ಇಲ್ಲದೇ ಹೋದರೆ ಅಂತಹವರ ಬಾಳು ಅಂದಕಾರದಲ್ಲಿ ಮುಳುಗಿ ಹೋಗಲಿದೆ ಎಂದು ಜೆಜೆಎಂ ಮೆಡಿಕಲ್ ಕಾಲೇಜಿನ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞೆ ಡಾ.ಶುಕ್ಲಾ ಶೆಟ್ಟಿ ಹೇಳಿದರು.

ಮಂಗಳವಾರ ನಗರದ ಡಿಆರ್‌ಎಂ ವಿಜ್ಞಾನ ಕಾಲೇಜಿನ 2025-26ನೇ ಸಾಲಿನ ಸಹಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳ ಉದ್ಘಾಟನೆ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭ ಹೊಂಗಿರಣ 2025 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯೆ ಎಂಬುವುದು ಸೋಮಾರಿಗಳ ಸೊತ್ತಲ್ಲ, ಶಿಕ್ಷಣ ಎಂಬ ಮೂರಕ್ಷರ ಇಲ್ಲದೇ ಹೋದರೆ ಅಂತಹವರ ಬಾಳು ಅಂದಕಾರದಲ್ಲಿ ಮುಳುಗಿ ಹೋಗಲಿದೆ. ಹಾಗಾಗೀ ಪ್ರತಿಯೊಬ್ಬರು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕೆಂದು ಅವರು ಕಿವಿ ಮಾತು ಹೇಳಿದರು.

ಜೀವನದಲ್ಲಿ ಉತ್ತಮ ಸಂಸ್ಕಾರ ರೂಢಿಸಿಕೊಂಡು ತಮ್ಮ ಹಾಗೂ ದೇಶದ ಅಭಿವೃದ್ಧಿಗೆ ಮುಂದಾಗಬೇಕು. ಕಾಲೇಜಿಗೆ ಹಾಗೂ ತಮಗೆ ವಿದ್ಯೆ ಕಲಿಸಿದ ಗುರುಗಳಿಗೆ ಹೆಮ್ಮೆ ತರುವ ಹಾಗೆ ಸಾಧನೆ ಮಾಡಬೇಕು ಎಂದು ನುಡಿದರು.

ಕಾಲೇಜಿನ ಪ್ರಾಣಿಶಾಸ್ತ್ರ ವಿಭಾಗದ ಡಾ॥ ಮಂಜುನಾಥ ಬಸಪ್ಪ ಚನ್ನಿ ಪಿಎಚ್ಡಿ ಪಡೆದಿದ್ದು ಹಾಗೂ ಡಾ॥ ಹರೀಶ್ ಅವರು ಯುವ ವಿಜ್ಞಾನ ಪ್ರಶಸ್ತಿ ಪಡೆದಿದ್ದು, ಇಬ್ಬರನ್ನು ಸನ್ಮಾನಿಸಲಾಯಿತು. ಇದೇ ವೇಳೆ ವಿದ್ಯಾರ್ಥಿಗಳು ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮ ಎಲ್ಲರನ್ನು ರಂಜಿಸಿತು.

ಕಾರ್ಯಕ್ರಮದಲ್ಲಿ ಕರುಣಾ ಜೀವ ಕಲ್ಯಾಣ ಟ್ರಸ್ಟ್‌ನ ಕಾರ್ಯದರ್ಶಿ ಶಿವನಕೆರೆ ಬಸವಲಿಂಗಪ್ಪ, ಕಾಲೇಜಿನ ಪ್ರಾಂಶುಪಾಲೆ ಎಂ.ಪಿ.ರೂಪಶ್ರೀ, ಡಾ.ಟಿ.ಮಂಜುರಾಜ್, ಶಿವಪ್ಪ ಮುಳ್ಳೂರು, ಆಡಿ ವಸಂತ್ ನಾಯಕ್ ಸೇರಿದಂತೆ 2025-26ನೇ ಸಾಲಿನ ವಿದ್ಯಾರ್ಥಿ ಸಂಘದ ಪದಾಧಿಕಾರಿಗಳು, ಕಾಲೇಜಿನ ಬೋಧಕ, ಬೋಧಕೇತರ ವರ್ಗದವರು, ವಿದ್ಯಾರ್ಥಿಗಳು ಹಾಜರಿದ್ದರು.

# ವಕ್ಫ್‌ಕುರಿತ ಸುಪ್ರೀಂಕೋರ್ಟ್ ಮಧ್ಯಂತರ ಆದೇಶ ಐತಿಹಾಸಿಕ: ಜಿಲ್ಲಾ ಬಿಜೆಪಿ ಬಣ್ಣನೆ

**ಚಿಕ್ಕಮಗಳೂರು:** ವಕ್ಫ್ ಕಾಯ್ದೆ-2025 ಕುರಿತು ಸುಪ್ರೀಂಕೋರ್ಟ್ ನೀಡಿರುವ ಮಧ್ಯಂತರಆದೇಶ ಐತಿಹಾಸಿಕವಾಗಿದ್ದು, ಸಂವಿಧಾನದ ಆಶಯಗಳನ್ನು ಕೋರ್ಟ್‌ಎತ್ತಿ ಹಿಡಿದಿರುವುದನ್ನುಜಿಲ್ಲಾ ಬಿಜೆಪಿ ಸ್ವಾಗತಿಸಿದೆ ಎಂದು ಪಕ್ಷದಜಿಲ್ಲಾ ವಕ್ತಾರ ಹಿರೇಮಗಳೂರು ಪುಟ್ಟಸ್ವಾಮಿ ತಿಳಿಸಿದ್ದಾರೆ.

ವಕ್ಫ್‌ತಿದ್ದುಪಡಿ ಕಾಯ್ದೆ-2025 ಪ್ರತಿಯೆ ೂಂದುಅಂಶವನ್ನುಗಣನೆಗೆತೆಗೆದುಕೊಂಡಿದ್ದು, ಇಡೀಕಾಯ್ದೆಗೆತಡೆಯಾಜ್ಞೆ ನೀಡುವಂತಹಅವ ಶ್ಯಕತೆಕಂಡುಬಂದಿಲ್ಲವಾದ್ದರಿಂದಕಾಯ್ದೆಗೆತಡೆ ನೀಡಬೇಕು ಎಂಬ ಕೋರಿಕೆಯನ್ನುತಿರಸ್ಕರಿಸ ಲಾಗಿದೆಎಂದುಆದೇಶದಲ್ಲಿ ನ್ಯಾಯಾಧೀಶರು ವಿವರಿಸುವ ಮೂಲಕ ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಆಶಯಗಳಿಗೆ ಸ್ಪಂದಿಸಿದ್ದಾರೆ ಎಂದುಅವರು ಮಂಗಳವಾರ ಹೇಳಿಕೆಯಲ್ಲಿ ಮಾಹಿತಿ ನೀಡಿದ್ದಾರೆ.

ವಕ್ಫ್ ಆಸ್ತಿಗೆ ಸಂಬಂಧಿಸಿದಂತೆ ರಾಜ್ಯವ್ಯಾಪಿ ದೊಡ್ಡ ವಿವಾದಗಳು ಹುಟ್ಟಿಕೊ ಂಡುರೈತರುಕಂಗಾಲಾಗಿದ್ದರು. ರೈತರ ಸಂಕಷ್ಟ ಪರಿಹರಿಸುವ ಮತ್ತು ಸರ್ಕಾರಗಳ ಗಮನ ಸೆಳೆಯುವ ಹಿನ್ನೆಲೆಯಲ್ಲಿರಾಜ್ಯದಾದ್ಯಂತ ಬಿಜೆಪಿ ಸೇರಿದಂತೆ ವಿವಿಧ ಸಂಘಟನೆಗಳು ಹೋರಾಟ ನಡೆಸಿದ್ದವು. ಸಮಸ್ಯೆಯತೀವ್ರತೆ ಯನ್ನುಅರಿತಕೇಂದ್ರ ಸರ್ಕಾರ ವಕ್ಫ್‌ತಿದ್ದುಪಡಿ ಕಾಯ್ದೆ-2025 ಗೆ ತಿದ್ದುಪಡಿತಂದಿತ್ತುಎಂದು ಹೇಳಿದ್ದಾರೆ.

## ಬಂಟರ ಸಂಘದಿಂದ ವಿದ್ಯಾರ್ಥಿವೇತನ ವಿತರಣಾ ಕಾರ್ಯಕ್ರಮ

# ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಬಂಟರ ಸಂಘದಿಂದ ಉಚಿತ ಶಿಕ್ಷಣ : ಅಶೋಕ್‌ಕುಮಾರ್ ಶೆಟ್ಟಿ

**ಚಿಕ್ಕಮಗಳೂರು:** ಆರ್ಥಿಕವಾಗಿ ಹಿಂದುಳಿದಿರುವ ಸಮುದಾಯದ ಬಡ ವಿದ್ಯಾರ್ಥಿಗಳಿಗೆ ಬಂಟರ ಯಾನೆ ನಾಡವರ ಸಂಘ ಉಚಿತ ಶಿಕ್ಷಣ ನೀಡಲಿದೆ ಎಂದು ರಾಜ್ಯ ಬಂಟರ ಯಾನೆ ನಾಡವರ ಸಂಘದ ರಾಜ್ಯಾಧ್ಯಕ್ಷ ಸಿ.ಎ. ಅಶೋಕ್‌ಕುಮಾರ್ ಹೇಳಿದ್ದಾರೆ.

ನಗರದ ಹೊರ ವಲಯದಲ್ಲಿರುವ ಬಂಟರ ಸಂಘದ ಭವನದಲ್ಲಿ ಚಿಕ್ಕಮಗಳೂರು ಬಂಟರ ಯಾನೆ ನಾಡವರ ಸಂಘ ಇತ್ತೀಚಿಗೆ (ಭಾನುವಾರ) ಹಮ್ಮಿಕೊಂಡಿದ್ದ ವಿದ್ಯಾರ್ಥಿವೇತನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.




ಈ ಸಂಬಂಧ ರಾಜ್ಯ ಬಂಟರ ಸಂಘ ಈಗಾಗಲೇ 132 ವಿದ್ಯಾರ್ಥಿಗಳನ್ನು ಗುರುತಿಸಿ ಅವರಿಗೆ ಉಚಿತವಾಗಿ ಶಿಕ್ಷಣ ನೀಡುತ್ತಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲೂ ಕೂಡ ಇಂತಹ ಬಡ ವಿದ್ಯಾರ್ಥಿಗಳು ಇದ್ದಲ್ಲಿ ಅಂತಹವರಿಗೆ ಉಚಿತ ಶಿಕ್ಷಣ ನೀಡಲು ರಾಜ್ಯಸಂಘ ಬದ್ದವಾಗಿದ್ದು, ಅಂತಹ ವಿದ್ಯಾರ್ಥಿಗಳಿದ್ದಲ್ಲಿ ಎಲ್ಲಾ ತಾಲ್ಲೂಕಿನ ಬಂಡರ ಸಂಘದಿಂದ ಹೆಸರು ಸಂಗ್ರಹಿಸಿ ಜಿಲ್ಲಾ ಸಂಘದ ಅಧ್ಯಕ್ಷ ಪುರಂದರ ಶೆಟ್ಟಿಯವರ ಮೂಲಕ ರಾಜ್ಯ ಸಂಘಕ್ಕೆ ಕಳುಹಿಸಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೂ ಉಚಿತ ಶಿಕ್ಷಣ ನೀಡುವುದಾಗಿ ತಿಳಿಸಿದರು.

ಕಳೆದ ಹಲವು ವರ್ಷಗಳಿಂದ ಚಿಕ್ಕಮಗಳೂರು ಬಂಟರ ಯಾನೆ ನಾಡವರ ಸಂಘ ಸಮುದಾಯದ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಪ್ರತಿವರ್ಷ ವಿದ್ಯಾರ್ಥಿ ವೇತನ ನೀಡುತ್ತಿದ್ದು, ಎಸ್.ಎಸ್.ಎಲ್.ಸಿ., ಪಿ.ಯು.ಸಿ. ಮತ್ತು ಉನ್ನತ ಶಿಕ್ಷಣ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೂ ಕೂಡ ವಿದ್ಯಾರ್ಥಿ ವೇತನ ನೀಡುತ್ತಿರುವ ಕಾರ್ಯವನ್ನು ಶ್ಲಾಘಿಸಿದರು.

ಚಿಕ್ಕಮಗಳೂರು ಜಿಲ್ಲಾ ಬಂಡರ ಯಾನೆ ನಾಡವರ ಸಂಘ ಸಮುದಾಯದ ಅಭಿವೃದ್ಧಿಗೆ ಯಾವುದೇ ಸಮಾಜಮುಖಿ ಕಾರ್ಯ ಕೈಗೆತ್ತಿಕೊಂಡಲ್ಲಿ ನಿಮ್ಮ ನೆರವಿಗೆ ರಾಜ್ಯ ಸಂಘ ಸದಾ ಬದ್ಧವಾಗಿದೆ ಎಂದು ಭರವಸೆ ನೀಡಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ರಾಜ್ಯ ಬಂಟರ, ನಾಡವರ ಸಂಘದ ವಿದ್ಯಾರ್ಥಿ ವೇತನ ಮತ್ತು ಪ್ರಶಸ್ತಿ ಸಮಿತಿ ಅಧ್ಯಕ್ಷ ಉಮೇಶ್‌ಕುಮಾರ್ ಶೆಟ್ಟಿ ಮಾತನಾಡಿ ರಾಜ್ಯ ಬಂಟರ ಯಾನೆ ನಾಡವರ ಸಂಘ ಕೈಗೊಂಡಿರುವ ವಿದ್ಯಾರ್ಥಿ ವೇತನ ನೀಡುವ ಕಾರ್ಯಕ್ರಮ ರಾಜ್ಯಾದ್ಯಂತ ವಿಸ್ತರಿಸಲಾಗಿದ್ದು, ಇದರ ಜೊತೆಗೆ ಆರ್ಥಿಕವಾಗಿ ಹಿಂದುಳಿದಿರುವ ಹೆಣ್ಣು ಮಕ್ಕಳ ಮದುವೆ ಕಾರ್ಯಕ್ಕೆ ರಾಜ್ಯ ಸಂಘ ಕರಿಮಣಿ (ಮಾಂಗಲ್ಯ) ನೀಡಲು ಸಿದ್ಧವಿದ್ದು, ಅಂತಹ ಬಡ ಕುಟುಂಬಗಳು ಜಿಲ್ಲಾ ಸಂಘದ ಮೂಲಕ ತಮ್ಮ ಹೆಸರುಗಳನ್ನು ನೋಂದಾಯಿಸಿ ಈ ಸೌಲಭ್ಯ ಪಡೆಯಬಹುದಾಗಿದೆ ಎಂದರು.

ಬಂಟರ ಯಾನೆ ನಾಡವರ ಸಂಘದ ಸಮುದಾಯದ ಅಭಿವೃದ್ಧಿಗೆ ಹತ್ತು ಹಲವು ಸಮಾಜಮುಖಿ ಕಾರ್ಯಕ್ರಮಗಳನ್ನು ರೂಪಿಸಿದ್ದು, ಚಿಕ್ಕಮಗಳೂರು ಜಿಲ್ಲೆಯ ಬಂಟರ ಸಮಾಜದ ಜನ ಈ ಸೌಲಭ್ಯವನ್ನು ಪಡೆದುಕೊಳ್ಳುವಂತೆ ಮನವಿ ಮಾಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಬಂಟರ ಯಾನೆ ನಾಡವರ ಸಂಘದ ಅಧ್ಯಕ್ಷ ಪುರಂದರ ಶೆಟ್ಟಿ ಮಾತನಾಡಿ ತಮ್ಮ ಅಧಿಕಾರ ಅವಧಿಯಲ್ಲಿ ಸಂಘದ ಸದಸ್ಯತ್ವ ಹೆಚ್ಚಳ ಸೇರಿದಂತೆ ಜಿಲ್ಲಾ ಪಂಚಾಯಿತಿ ಕಛೇರಿ ಸಮೀಪ ಸರ್ಕಾರ ನೀಡಿರುವ ನಿವೇಶನವನ್ನು ಸಮತಟ್ಟಗೊಳಿಸಿ, ತಂತಿ ಬೇಲಿ ನಿರ್ಮಿಸಲಾಗಿದ್ದು, ಇದರ ಜೊತೆಗೆ ಹಾಲಿ ಬಂಟರ ಸಂಘದ ಕಟ್ಟಡದ ಪಕ್ಕದಲ್ಲಿರುವ ಜಾಗವನ್ನು ಖರೀದಿಸಲು ನಿರ್ಧರಿಸಲಾಗಿದ್ದು, ಈ ಕಾರ್ಯಕ್ಕೆ ಸಹಕಾರ ನೀಡಿದ ಸಂಘದ ಎಲ್ಲಾ ಹಿರಿಯರು ಹಾಗೂ ವಿದ್ಯಾರ್ಥಿ ವೇತನದ ನಿಧಿಗೆ ದಾನ ನೀಡಿದ ದಾನಿಗಳಿಗೆ ಕೃತಜ್ಞತೆ ಸಲ್ಲಿಸಿದರು.

ಬಂಟರ ಯಾನೆ ನಾಡವರ ಸಂಘದ ಮಹಿಳಾ ಘಟಕದ ಅಧ್ಯಕ್ಷೆ ಬಲಾರಿ ವಿ. ಶೆಟ್ಟಿ ಮಾತನಾಡಿದರು. ಸಂಘದ ಮಾಜಿ ಅಧ್ಯಕ್ಷ ಆನಂದ್ ಕುಮಾರ್ ಶೆಟ್ಟಿ ಸಂಘದ ನಡೆದುಬಂಬ ಹಾದಿ ವಿವರಿಸಿದರು. ಬಂಟರ ಸಂಘದ ಸ್ಥಾಪಕ ಅಧ್ಯಕ್ಷ ಶೇಖರ್‌ಶೆಟ್ಟಿ, ಸಹ ಕಾರ್ಯದರ್ಶಿ ಸತೀಶ್ ಶೆಟ್ಟಿ, ಬಾಳೆಹೊನ್ನೂರು ಬಂಟರ ಸಂಘದ ಅಧ್ಯಕ್ಷ ವೆಂಕಟೇಶ್, ಕೊಪ್ಪ ತಾಲ್ಲೂಕು ಸಂಘದ ಅಧ್ಯಕ್ಷ ಸುಬ್ರಹ್ಮಣ್ಯ ಶೆಟ್ಟಿ, ಶೃಂಗೇರಿ ತಾಲ್ಲೂಕು ಸಂಘದ ಅಧ್ಯಕ್ಷ ರಾಘವೇಂದ್ರ ಎಸ್.ಶೆಟ್ಟಿ, ಎನ್.ಆರ್. ಪುರ ತಾಲ್ಲೂಕು ಸಂಘದ ಅಧ್ಯಕ್ಷ ಪ್ರಕಾಶ್‌ಶೆಟ್ಟಿ, ಕಳಸ ಸಂಘದ ಅಧ್ಯಕ್ಷ ಶ್ರೀಧರ್ ಶೆಟ್ಟಿ ಹಾಗೂ ಚಿಕ್ಕಮಗಳೂರು ಬಂಟರ ಸಂಘದ ಖಜಾಂಚಿ ದಿವಾಕರ್‌ರೈ ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿವೇತನ ನಿಧಿಗೆ 1 ಲಕ್ಷ ರೂ. ದೇಣಿಗೆ ನೀಡಿದ ಸಂಘದ ಸಂಸ್ಥಾಪಕ ಅಧ್ಯಕ್ಷ ಶೇಖರ್‌ಶೆಟ್ಟಿ ಅವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಸಂಘದ ಉಪಾಧ್ಯಕ್ಷ ನರೇಂದ್ರಶೆಟ್ಟಿ ಸ್ವಾಗತಿಸಿದರು. ಸಂಘದ ಕಾರ್ಯದರ್ಶಿ ದೇವರಾಜ ಶೆಟ್ಟಿ ವಂದಿಸಿದರು. ಮಾಜಿ ಅಧ್ಯಕ್ಷ ಶ್ರೀಕಾಂತ್‌ಶೆಟ್ಟಿ ಕಾರ್ಯಕ್ರಮ ನಿರೂಪಿಸಿದರು.

# ಜಾತಿಗಣತಿಯ ಅರ್ಜಿ ನಮೂನೆಯಲ್ಲಿ ಕುರುಬ ಎಂದು ಬರೆಸಿರಿ: ಕೆ.ಎಸ್.ಶಾಂತೇಗೌಡ

**ಚಿಕ್ಕಮಗಳೂರು:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ನಡೆಸಲು ಉದ್ದೇಶಿಸಿರುವ ಜಾತಿಗಣತಿಯುಲ್ಲಿಗಣತಿದಾರರು ಮನೆ ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವ ಸಂದರ್ಭದಲ್ಲಿಜಿಲ್ಲೆಯಲಿ ರುವಕುರುಬ ಸಮುದಾಯದವರುಜಾ ತಿಕಾಲಂನಲ್ಲಿಕುರುಬ ಎಂದು ಬರೆಸಿರಿ ಎಂದುಜಿಲ್ಲಾಕುರುಬ ಸಂಘ ಅಧ್ಯಕ್ಷ ಕೆ .ಎಸ್.ಶಾಂತೇಗೌಡಜಿಲ್ಲೆಯಕುರುಬ ಸಮಾಜದಲ್ಲಿ ಮನವಿ ಮಾಡಿದ್ದಾರೆ.



ಕುರುಬ ಸಮಾಜದ ಪ್ರತಿಯೊಬ್ಬರಿಗೂ ಸರ್ಕಾರದ ಸಲವತ್ತುಗಳು ಸಮರ್ಪಕವಾಗಿದೊರ ಯಬೇಕಾದಲ್ಲಿಜಾತಿಗಣತಿ ಸಂದರ್ಭದಲ್ಲಿಕುರುಬ ಸಮಾಜದವರು ಎಷ್ಟೇ ಕೆಲಸ ಕಾರ್ಯಗಳಿದ್ದರೂ ಬದಿಗೊತ್ತಿ ಮಹತ್ವದ ಸಮೀಕ್ಷಾಕಾರ್ಯದಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದುಅವರು ಮಂಗಳವಾರ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಸರ್ಕಾರದ ಯೋಜನೆಗಳು ಜಾತಿಯಜನ ಸಂಖ್ಯೆಗೆಅನುಗುಣವಾಗಿರೂಪಗೊಂಡು ಅನುಷ್ಠಾನಗೊಳ್ಳುವುದರಿಂದ ಜಾತಿ ಸಮೀಕ್ಷೆ ಮಹತ್ವ ಪಡೆದುಕೊಂಡಿದೆ. ನಮ್ಮ ಸಮುದಾಯದವರುಜಾತಿಕಾಲಂನಲ್ಲಿ ಕೇವಲ ಕುರುಬ ಎಂದಷ್ಟೇ ಬರೆಸಬೇಕು. ಯಾವುದೇ ಉಪ ಜಾತಿಗಳನ್ನು ಬರೆಸಬಾರದುಎಂದು ಹೇಳಿದ್ದಾರೆ.

ರಾಜ್ಯದಲ್ಲಿ 50 ಲಕ್ಷಕ್ಕೂ ಹೆಚ್ಚಿನ ಸಂಖ್ಯೆಯಲ್ಲಿಕುರುಬ ಸಮುದಾಯದ ವರುಇದ್ದಾರೆಎಂದುಅಂದಾಜಿಸಲಾಗಿದೆ. ಆದರೆ, ನಿಖರವಾಗಿ ಸಮುದಾಯದಜನ ಸಂಖ್ಯೆಯನ್ನು ತಿಳಿಯಬೇಕೆಂದಲ್ಲಿ ಸಮೀಕ್ಷಾಕಾರ್ಯದಲ್ಲಿ ಭಾಗವಹಿಸಿ ಕುರುಬ ಎಂದು ಸ್ಪಷ್ಟವಾಗಿ ನಮೂದಿಸಬೇಕು. ಅದರಿಂದಆರ್ಥಿಕ, ಸಾಮಾಜಿಕ, ರಾಜಕೀಯವಾಗಿ ಹೆಚ್ಚಿನ ಸ್ಥಾನಮಾನಗಳನ್ನು ಪಡೆದುಕೊಳ್ಳಲು ಸಹಕಾರಿಯಾಗುತ್ತದೆಎಂದು ವಿವರಿಸಿದ್ದಾರೆ.

ಈ ಬಗ್ಗೆ ಯಾವುದೇ ಸಮಸ್ಯೆಗಳು, ತೊಡಕುಗಳು ಇದ್ದಲ್ಲಿಜಿಲ್ಲೆಯಕುರುಬ ಸಮುದಾಯದವರುಜಿಲಾ ಕುರುಬರ ಸಂಘದಿಂದ ಪರಿಹರಿಸಿಕೊಳ್ಳಬಹುದು. ಸಮೀಕ್ಷಾಕಾರ್ಯದ ಯಶಸ್ಸಿಗೆ ಜಿಲ್ಲೆಯಲ್ಲಿರುವಕುರುಬ ಸಮುದಾಯದವರು ಹೆಚ್ಚಿನಆಸಕ್ತಿಯೊಂದಿಗೆ ಸಹಕಾರ ನೀಡಬೇಕುಎಂದು ಮನವಿ ಮಾಡಿದ್ದಾರೆ.

## ವಿಕಲಚೇತನ ವೈಯಕ್ತಿಕ ಕಾರ್ಯಕ್ರಮಗಳನ್ನು ಪಡೆಯಲು ಅರ್ಜಿ ಆಹ್ವಾನ

**ಶಿವಮೊಗ್ಗ:** 2023-24, 2024-25 ನೇ ಸಾಲಿನ ಸಾಗರ ನಗರಸಭಾ ಸಾಮಾನ್ಯ ನಿಧಿ ಮತ್ತು ಎಸ್‌ಎಫ್‌ಸಿ ಮುಕ್ತ ನಿಧಿ, ಮಂಜೂರಾದ ಕ್ರಿಯಾ ಯೋಜನೆಯಡಿಯಲ್ಲಿ ಉಳಿಕೆ ಕಾರ್ಯಕ್ರಮಗಳ ಹಾಗೂ 2025-26 ನೇ ಸಾಲಿನ ಸಾಮಾನ್ಯ ನಿಧಿ ಮತ್ತು ಎಸ್‌ಎಫ್‌ಸಿ

ಮುಕ್ತನಿಧಿ ಮಂಜೂರಾತಿ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಹಾಗೂ ವಿಕಲಚೇತನ ಫಲಾನುಭವಿಗಳಿಂದ ವೈಯಕ್ತಿಕ ಕಾರ್ಯಕ್ರಮಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ನಿಗದಿತ ನಮೂನೆಯನ್ನು ಸಾಗರ ನಗರಸಭೆ ಕಚೇರಿಯಿಂದ ಪಡೆದು,

ಭರ್ತಿ ಮಾಡಿದ ಅರ್ಜಿಯನ್ನು ಕಚೇರಿಗೆ ಅ .16 ರೊಳಗಾಗಿ ಸಲ್ಲಿಸುವಂತೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.ಹೆಚ್ಚಿನ ಮಾಹಿತಿಗಾಗಿ ದೂ.ಸಂ.: 08183-226021 ನ್ನು ಹಾಗೂ ವಿಷಯ ನಿರ್ವಾಹಕರನ್ನು ಸಂಪರ್ಕಿಸುವುದು.

# ಮಸೂದ್ ಕುಟುಂಬ ಛಿದ್ರ

## ಭಾರತ ದಾಳಿ: ಜೈಷ್–ಎ–ಮೊಹಮ್ಮದ್ ಕಮಾಂಡರ್ ಹೇಳಿಕೆ

**ಲಾಹೋರ್ (ಪಿಟಿಐ):** 'ಬಹಾವುರ ದಲ್ಲಿರುವ ಸಂಘಟನೆಯ ಕೇಂದ್ರ ಕಚೇರಿ ಮೇಲೆ ಭಾರತ ನಡೆಸಿದ ಕ್ಷಿಪಣಿ ದಾಳಿಯಲ್ಲಿ ಜೈಷ್–ಎ–ಮೊಹಮ್ಮದ್ (ಜೆಐಎಂ) ಮುಖ್ಯಸ್ಥ ಮೌಲಾನಾ ಮಸೂದ್ ಅಜರ್ ಕುಟುಂಬದ ಸದಸ್ಯರ ದೇಹಗಳು ಛಿದ್ರ ಛಿದ್ರಗೊಂಡಿದ್ದವು' ಎಂದು ಸಂಘಟನೆಯ ಕಮಾಂಡರ್ ಸಾರ್ವಜನಿಕವಾಗಿ ಒಪ್ಪಿಕೊಂಡಿದ್ದಾನೆ.

ಯೂಟ್ಯೂಬ್ ಚಾನೆಲ್‌ಗೆ ಅಪ್‌ಲೋಡ್ ಮಾಡಲಾದ ವಿಡಿಯೊ ದಲ್ಲಿ ಜೆಇಎಂ ಕಮಾಂಡರ್ ಇಲ್ಯಾಸ್ ಕಾಶ್ಮೀರಿ ಮಾತನಾಡಿರುವುದು ಕಂಡುಬಂದಿದೆ.ಯೂಟ್ಯೂಬ್ ಚಾನೆಲ್‌ಗೆ ಅಪ್‌ಲೋಡ್ ಮಾಡಲಾದ ವಿಡಿಯೊ ದಲ್ಲಿ ಜೆಇಎಂ ಕಮಾಂಡರ್ ಇಲ್ಯಾಸ್ ಕಾಶ್ಮೀರಿ ಮಾತನಾಡಿರುವುದು ಕಂಡುಬಂದಿದೆ.

ಸೆ.6ರಂದು ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದಲ್ಲಿ 'ಮಿಷನ್ ಮುಸ್ತಾಫಾ' ಕಾರ್ಯಾಗಾರದಲ್ಲಿ ಉರ್ದು ಭಾಷೆಯಲ್ಲಿ ಮಾತನಾಡಿರುವ ಇಲ್ಯಾಸ್, ಅಜರ್ ಕುಟುಂಬಸ್ಥರನ್ನು ಹತ್ಯೆಯಾಗಿರುವ

ಕುರಿತು ಆಕ್ರೋಶ ಹೊರಹಾಕಿದ್ದಾನೆ.

ಹಲವಾರು ಬಂದೂಕುಧಾರಿಗಳ ಮಧ್ಯೆ ನಿಂತು ಭಾಷಣ ಮಾಡಿರುವ ಮಸೂದ್ ಆತ, 'ದೇಶದ ಭೌಗೋಳಿಕ ಹಾಗೂ ಸೈದ್ಧಾಂತಿಕ ರಕ್ಷಣೆಗಾಗಿ ದೆಹಲಿ, ಕಾಬೂಲ್ ಹಾಗೂ ಕಂದಹಾರ್‌ನ ಮೇಲೆ ಜಿಹಾದ್ ದಾಳಿ ನಡೆಸಿದ್ದೆವು. ಎಲ್ಲ ತ್ಯಾಗ ಮಾಡಿದ ನಂತರವೂ, ಬಹಾವಲ್ಪುರದಲ್ಲಿರುವ ಸಂಘಟನೆಯ ಕೇಂದ್ರ ಕಚೇರಿ ಮೇಲೆ ಭಾರತವು ಕ್ಷಿಪಣಿ ದಾಳಿ ನಡೆಸಿದ್ದರಿಂದ ಮಸೂದ್ ಅಜರ್‌ನ ಕುಟುಂಬದ ಸದಸ್ಯರು ಛಿದ್ರ ಛಿದ್ರಗೊಂಡಿದ್ದರು' ಎಂದು ಒಪ್ಪಿಕೊಂಡಿದ್ದಾನೆ.

'ಬಹಾವಲ್ಪುರದಲ್ಲಿರುವ ಸುಭಾನ್

ಅಲ್ಲಾ ಜಾಮಿಯಾ ಮಸೀದಿ ಮೇಲೆ ನಡೆದ ದಾಳಿಯಲ್ಲಿ ಮಸೂದ್ ಅಜರ್ ಅಕ್ಕ, ಬಾವ, ಸೋದರ ಸಂಬಂಧಿ ಹಾಗೂ ಆತನ ಪತ್ನಿ, ಮತ್ತೊಬ್ಬ ಸೋದರ ಸಂಬಂಧಿ ಹಾಗೂ ಐವರು ಮಕ್ಕಳು ಮೃತಪಟ್ಟಿದ್ದರು. ಅಜರ್‌ನ ಸಹಚರ, ಆತನ ತಾಯಿ ಹಾಗೂ ಇತರ ಇಬ್ಬರು ಆಪ್ತರು ಕೂಡ ಈ ದಾಳಿಯಲ್ಲಿ ಅಸುನೀಗಿದ್ದರು' ಎಂದು ಈ ಹಿಂದೆ ಪ್ರಕಟಣೆಯಲ್ಲಿ ಹೇಳಲಾಗಿತ್ತು.

199900 ಅಪಹರಣಕ್ಕೆ ಒಳಗಾಗಿದ್ದ ಇಂಡಿಯನ್ ಏರ್‌ಲೈನ್ಸ್ ವಿಮಾನದಲ್ಲಿದ್ದ ಪ್ರಯಾಣಿಕರನ್ನು (24–814) ರಕ್ಷಿಸುವುದಕ್ಕೆ ಪ್ರತಿಯಾಗಿ ಮಸೂದ್ ಅಜರ್‌ನನ್ನು ಭಾರತ ಮಾಡಿತ್ತು. ನಂತರ, ಬಹಾವುರವು ಕೇಂದ್ರವಾಗಿದೆ.

### ಗಾಜಾ ಹೊತ್ತಿ ಉರಿಯುತ್ತಿದೆ': ರಕ್ಷಣಾ ಸಚಿವ ಕಾಟ್ಸ್ ಹೇಳಿಕೆ

# ಇಸ್ರೇಲ್‌ನಿಂದ ಮುಂದುವರಿದ ದಾಳಿ

**ಜೆರುಸಲೇಂ (ಎಪಿ):** ಗಾಜಾ ನಗರದ ಮೇಲೆ ಸೋಮವಾರ ರಾತ್ರಿಯಿಡೀ ಭಾರಿ ದಾಳಿ ನಡೆಸಿರುವ ಇಸ್ರೇಲ್ ಸೇನೆ, 'ಹಮಾಸ್ ಸಂಪೂರ್ಣ ನಾಶ'ವಾಗುವ ವರೆಗೆ ಕಾರ್ಯಾಚರಣೆ ಮುಂದುವರಿಯಲಿದೆ' ಎಂದು ಹೇಳಿದೆ.



ಗಾಜಾ ನಗರದ ದಕ್ಷಿಣ ಭಾಗಕ್ಕೆ ತೆರಳುವಂತೆ ನಿವಾಸಿಗಳಿಗೆ ಸೇನೆಯು ಮಂಗಳವಾರ ಎಚ್ಚರಿಕೆ ನೀಡಿದೆ. ಸೋಮವಾರ ರಾತ್ರಿ ನಡೆಸಿದ ದಾಳಿಯಿಂದ 'ಗಾಜಾ ಹೊತ್ತಿ ಉರಿಯುತ್ತಿದೆ' ಎಂದು ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಸ್ ಹೇಳಿದ್ದಾರೆ. 'ಹಮಾಸ್‌ನ ಮಿಲಿಟರಿ ಮೂಲಸೌಕರ್ಯ' ನಾಶ ಮಾಡಲು ವಿಸ್ತೃತ ಕಾರ್ಯಾಚರಣೆ ಆರಂಭಿಸಲಾಗಿದೆ ಎಂದು ಇಸ್ರೇಲ್ ಸೇನೆಯ ವಕ್ತಾರ ಅವಿಹಾಯ್ ಅಡೇಯಿ ಘೋಷಿಸಿದ್ದಾರೆ.

ಕಳೆದ ಒಂದು ತಿಂಗಳಲ್ಲಿ ಸುಮಾರು 2.20 ಲಕ್ಷ ಪ್ಯಾಲೆಸ್ತೀನಿಯನ್ನರು ಉತ್ತರ ಗಾಜಾವನ್ನು ತೊರೆದಿದ್ದಾರೆ ಎಂದು ವಿಶ್ವಸಂಸ್ಥೆ ಅಂದಾಜು ಮಾಡಿದೆ. ಇಸ್ರೇಲ್ ಸೇನೆಯು ಗಾಜಾ ನಗರ ತೊರೆಯುವಂತೆ

ಇಸ್ರೇಲ್ ಸೇನೆಯ ದಾಳಿಯಿಂದ ಗಾಜಾ ನಗರದಲ್ಲಿ ಧ್ವಂಸಗೊಂಡ ಕಟ್ಟಡದ ಅವಶೇಷಗಳಡಿ ಸ್ಥಳೀಯರು ಹುಡುಕಾಟ ನಡೆಸಿದರುನಿವಾಸಿಗಳಿಗೆ ಎಚ್ಚರಿಕೆ ನೀಡಿದ ಸಂದರ್ಭದಲ್ಲಿ ಈ ಪ್ರದೇಶದಲ್ಲಿ ಸುಮಾರು 10 ಲಕ್ಷ ಮಂದಿ ನೆಲಸಿದ್ದರು.ಸೋಮವಾರ ರಾತ್ರಿಯಿಂದೀಚೆ ಗಾಜಾದಲ್ಲಿ 20 ಮಂದಿ ಮೃತಪಟ್ಟಿದ್ದಾರೆ. ಗಾಜಾದ ಪಶ್ಚಿಮ ಭಾಗದ ಜನವಸತಿ ಪ್ರದೇಶದ ಮೇಲೆ ನಡೆದ ದಾಳಿಯಲ್ಲಿ ಮೃತಪಟ್ಟ 20 ಮಂದಿಯ ಮೃತದೇಹ ಗಳನ್ನು ತರಲಾಗಿದೆ ಎಂದು ಶಿಫಾ ಆಸ್ಪತ್ರೆಯ ವೈದ್ಯರು ತಿಳಿಸಿದ್ದಾರೆ.

ಬಾಂಬ್ ದಾಳಿಯಲ್ಲಿ 90 ಮಂದಿ ಗಾಯಗೊಂಡಿದ್ದಾರೆ.'ಗಾಜಾದ ಜನರಿಗೆ ಸೋಮವಾರ ರಾತ್ರಿ ದುರಂತಮಯವಾಗಿತ್ತು. ಒಂದೇ ಒಂದು ಕ್ಷಣ ಬಿಡುವು ನೀಡದೆ ಬಾಂಬ್ ದಾಳಿ ನಡೆಸಲಾಗಿದೆ. ಕಟ್ಟಡಗಳ ಅವಶೇಷಗಳಡಿ ಹಲವು ಮೃತದೇಹಗಳು ಇವೆ' ಎಂದು ಶಿಫಾ ಆಸ್ಪತ್ರೆಯ ನಿರ್ದೇಶಕ ಡಾ.ಮೊಹಮ್ಮದ್ ಅಬು ಸೆಲ್ಕಿಯಾ ತಿಳಿಸಿದ್ದಾರೆ.

ಈಜಿಪ್ಟ್ ಕಿಡಿ :ಇಸ್ರೇಲ್ ಜೊತೆ ದಶಕಗಳ ಹಿಂದೆಯೇ ಶಾಂತಿ ಒಪ್ಪಂದ ಮಾಡಿಕೊಂಡಿರುವ ಮತ್ತು ಗಾಜಾ ಯುದ್ಧ ನಿಲ್ಲಿಸಲು ಮಧ್ಯವರ್ತಿಯಾಗಿ ಕೆಲಸ ಮಾಡುತ್ತಿರುವ ಈಜಿಪ್ಟ್ ಇದೀಗ ಇಸ್ರೇಲ್ ಜೊತೆ ತಾಳ್ಮೆ ಕಳೆದುಕೊಂಡಂತೆ ಕಾಣುತ್ತಿದೆ. ಕತಾರ್‌ನಲ್ಲಿ ಸೋಮವಾರ ನಡೆದ ಅರಬ್ ರಾಷ್ಟ್ರಗಳ ಶೃಂಗಸಭೆಯಲ್ಲಿ ಈಜಿಪ್ಟ್ ಅಧ್ಯಕ್ಷ ಅಬ್ಡೆಲ್ ಫತಾಹ್ ಅಲ್ ಸಿಸಿ ಅವರು ಇಸ್ರೇಲ್ ಅನ್ನು 'ಶತ್ರು' ಎಂದು ಕರೆದಿದ್ದಾರೆ. 1979ರಲ್ಲಿ ಎರಡೂ ದೇಶಗಳ ಮಧ್ಯೆ ರಾಜತಾಂತ್ರಿಕ ಸಂಬಂಧ ಆರಂಭವಾದ ನಂತರ ಈಜಿಪ್ಟ್ ನಾಯಕರೊಬ್ಬರು ಈ ಪದವನ್ನು ಬಳಸಿದ್ದು ಇದೇ ಮೊದಲು ಎಂದು ಈಜಿಪ್ಟ್ ಸರ್ಕಾರದ ಮಾಹಿತಿ ವಿಭಾಗದ ಮುಖ್ಯಸ್ಥರಾದ ದಿಯಾ ರಶ್ವಾನ್ ಹೇಳಿದ್ದಾರೆ

# ಮಾತುಕತೆ ಸಕಾರಾತ್ಮಕ'

## ಹೆಚ್ಚುವರಿ ತೆರಿಗೆ ರದ್ದುಪಡಿಸಲು ಅಮೆರಿಕಕ್ಕೆ ಭಾರತ ಒತ್ತಾಯ

**ನವದೆಹಲಿ:** ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ವಿಚಾರವಾಗಿ ಅಮೆರಿಕದ ನಿಯೋಗದ ಜೊತೆಗಿನ ಮಾತುಕತೆಯು ಸಕಾರಾತ್ಮಕವಾಗಿ ಇತ್ತು ಎಂದು ಕೇಂದ್ರ ವಾಣಿಜ್ಯ ಸಚಿವಾಲಯ ಹೇಳಿದೆ.

ಇಬ್ಬರಿಗೂ ಅನುಕೂಲ ಆಗುವ ಒಪ್ಪಂದವೊಂದಕ್ಕೆ ಆದಷ್ಟು ಬೇಗ ಅಂತಿಮ ರೂಪ ನೀಡಲು ಎರಡೂ ದೇಶಗಳು ಒಪ್ಪಿವೆ ಎಂದು ಕೂಡ ಸಚಿವಾಲಯವು ಹೇಳಿದೆ.


'ಎರಡೂ ಪ್ರಯೋಜನಕಾರಿ ಕಡೆಯವರಿಗೆ ಆಗುವಂತಹ ವ್ಯಾಪಾರ ಒಪ್ಪಂದವನ್ನು ಬೇಗನೆ ಸಾಧ್ಯವಾಗಿಸುವ ಪ್ರಯತ್ನಕ್ಕೆ ಇನ್ನಷ್ಟು ಚುರುಕು ನೀಡಲು ತೀರ್ಮಾನಿಸಲಾಗಿದೆ' ಎಂದು ಸಚಿವಾಲಯವು ಹೇಳಿದೆ. ಎರಡೂ ದೇಶಗಳ ಪ್ರತಿನಿಧಿಗಳ ನಡುವೆ ಮಂಗಳವಾರ ಇಡೀ ದಿನ ಮಾತುಕತೆ ನಡೆದಿದೆ.

ಭಾರತಕ್ಕೆ ಭೇಟಿ ನೀಡಿರುವ ಅಮೆರಿಕದ ಮುಖ್ಯ ಸಂಧಾನಕಾರ ಬ್ರೆಂಡನ್ ಲಿಂಚ್ ಅವರ ಜೊತೆ ಪ್ರಸ್ತಾವಿತ ದ್ವಿಪಕ್ಷೀಯ ವ್ಯಾಪಾರ

ಒಪ್ಪಂದ ಕುರಿತಾದ ಮಾತುಕತೆಗಳು ಸಕಾರಾತ್ಮಕವಾಗಿದ್ದವು ಸಚಿವಾಲಯವು ಹೇಳಿದೆ. ಎಂದು

ಲಿಂಚ್ ಅವರು ಸೋಮವಾರ ಸಂಜೆ ನವದೆಹಲಿಗೆ ಬಂದಿದ್ದಾರೆ. ಮಾತುಕತೆ ವೇಳೆ ಭಾರತದ ಪ್ರತಿನಿಧಿಗಳ ನೇತೃತ್ವವನ್ನು ವಾಣಿಜ್ಯ ಇಲಾಖೆಯ ವಿಶೇಷ ಕಾರ್ಯದರ್ಶಿ ರಾಜೇಶ್ ಅಗರ್ವಾಲ್ ಅವರು ವಹಿಸಿದ್ದರು.

ಎರಡೂ ದೇಶಗಳು ವರ್ಚುವಲ್ ವೇದಿಕೆಯ ಮೂಲಕ ಮಾತುಕತೆ ಮುಂದುವರಿಸಲಿವೆ. ಅಲ್ಲದೆ, ಮುಂದಿನ ಭೌತಿಕ ಸಭೆಗೆ ಸೂಕ್ತ ದಿನಾಂಕ ಯಾವುದು ಎಂಬುದನ್ನು ಕೂಡ ನಿರ್ಧರಿಸಲಿವೆ ಎಂದು ಮೂಲವೊಂದು ತಿಳಿಸಿದೆ.



ಅಮೆರಿಕವು ಭಾರತದ ಸರಕುಗಳ ಮೇಲೆ ಶೇಕಡ 50ರಷ್ಟು ಸುಂಕ ವಿಧಿಸಿದೆ. ಪ್ರತಿಸುಂಕದ ರೂಪದಲ್ಲಿ ಶೇ 25ರಷ್ಟು ತೆರಿಗೆ ಹಾಗೂ ರಷ್ಯಾದಿಂದ ಕಚ್ಚಾ ತೈಲ ಖರೀದಿಸುತ್ತಿರುವುದಕ್ಕಾಗಿ

ಶೇ 25ರಷ್ಟು ಹೆಚ್ಚುವರಿ ತೆರಿಗೆ ವಿಧಿಸಲಾಗಿದೆ. ಈ ತೆರಿಗೆ ಕ್ರಮಗಳು ಜಾರಿಗೆ ಬಂದ ನಂತರದಲ್ಲಿ ಅಮೆರಿಕದ ಹಿರಿಯ ಅಧಿಕಾರಿಯೊಬ್ಬರು ವ್ಯಾಪಾರ ಒಪ್ಪಂದದ ಮಾತುಕತೆಗೆ ಭಾರತಕ್ಕೆ ಭೇಟಿ ನೀಡಿರುವುದು ಇದೇ ಮೊದಲು. ಶೇ 50ರಷ್ಟು ತೆರಿಗೆ ವಿಧಿಸುವ ಕ್ರಮವನ್ನು /ಭಾರತವು 'ಅನ್ಯಾಯ' ಎಂದು ಹೇಳಿದೆ.

ಮಾತುಕತೆ ಮುಂದುವರಿಯಬೇಕು ಎಂದಾದರೆ ಭಾರತದ ಮೇಲೆ ಹೇರಿರುವ ಹೆಚ್ಚುವರಿ ಶೇ 25ರಷ್ಟು ಸುಂಕವನ್ನು ರದ್ದುಪಡಿಸಬೇಕು ಎಂದು ಭಾರತದ ಅಧಿಕಾರಿಗಳು ಒತ್ತಾಯಿಸಿದರು ಎಂದು ಮೂಲಗಳು ತಿಳಿಸಿವೆ.

'ಮಾತುಕತೆಯಲ್ಲಿ ಪ್ರಗತಿಯು, ಕಚ್ಚಾ ತೈಲ ಖರೀದಿಗೆ ಸಂಬಂಧಿಸಿದ ಶೇ 25ರಷ್ಟು ತೆರಿಗೆಯನ್ನು ಅಮೆರಿಕವು ಹಿಂಪಡೆಯುವುದನ್ನು ಅವಲಂಬಿಸಿದೆ. ಅದು ಸಾಧ್ಯವಾಗದೆ ಇದ್ದರೆ ರಾಜಕೀಯವಾಗಿ ಅಥವಾ ಆರ್ಥಿಕ ದೃಷ್ಟಿಯಿಂದ ಯಾವುದೇ ಮಹತ್ವದ ತಿರುವು ಲಭಿಸುವುದಿಲ್ಲ' ಎಂದು ಗ್ಲೋಬಲ್ ಟ್ರೇಡ್ ರಿಸರ್ಚ್ (ಜಿಟಿಆರ್‌ಐ) ಇನಿಷಿಯೇಟಿವ್‌ನ ಅಜಯ್ ಶ್ರೀವಾಸ್ತವ ಹೇಳಿದ್ದಾರೆ

### 30,284 ಟನ್ ಕಬ್ಬಿಣದ ಅದಿರು ಅಕ್ರಮ ಸಾಗಾಟ ಪ್ರಕರಣ

# ಮರು ತನಿಖೆ: ಆನಂದ್ ಸಿಂಗ್‌ಗೆ ಮತ್ತೆ ಸಂಕಷ್ಟ

**ಬೆಂಗಳೂರು:** ಬೇಲೇಕೇರಿ ಬಂದರಿಗೆ ಅಕ್ರಮವಾಗಿ ಅದಿರು ಸಾಗಾಟ ಮಾಡಿದ ಪ್ರಕರಣದ ಮರು ತನಿಖೆ ನಡೆಸಿ, ಎರಡು ತಿಂಗಳಲ್ಲಿ ವರದಿ ಸಲ್ಲಿಸುವಂತೆ ಲೋಕಾಯುಕ್ತ ನ್ಯಾಯಾಲಯವು ಲೋಕಾಯುಕ್ತ ಎಸ್‌ಐಟಿಯ ಎಡಿಜಿಪಿಗೆ ನಿರ್ದೇಶಿಸಿದೆ. ಇದರಿಂದ ಪ್ರಕರಣದಲ್ಲಿ ಖುಲಾಸೆಗೊಂಡಿದ್ದಮಾಜಿ ಸಚಿವ ಆನಂದ್ ಸಿಂಗ್‌ಗೆ ಮತ್ತೆ ಸಂಕಷ್ಟ ಎದುರಾಗಿದೆ.

2009ರ ಜನವರಿ 1ರಿಂದ 2010ರ ಮೇ 31ರ ಅವಧಿಯಲ್ಲಿ ಬಳ್ಳಾರಿ ಜಿಲ್ಲೆ ಸಂಡೂರು ತಾಲ್ಲೂಕಿನ ಗಣಿ ಯಾರ್ಡ್‌ಗಳಿಂದ ಬೇಲೇಕೇರಿ ಬಂದರಿಗೆ ಅಕ್ರಮವಾಗಿ 30.284 ಟನ್ ಕಬ್ಬಿಣದ ಅದಿರು ಸಾಗಾಟ ಪ್ರಕರಣಕ್ಕೆ ಸಂಬಂಧಿಸಿ ಕೋರ್ಟ್.11ರಂದು ಈ ಆದೇಶ ನೀಡಿದೆ.

ಪ್ರಕರಣದಲ್ಲಿ ಲೋಪಗಳನ್ನು ಗುರುತಿಸಿರುವ ನ್ಯಾಯಾಲಯ, ಆರೋಪಿ ಸ್ಥಾನದಲ್ಲಿರುವ ಎಸ್.ಬಿ.ಮಿನರಲ್ಸ್‌ನ ಸಹ ಪಾಲುದಾರರಾದ ಆನಂದ್ ಸಿಂಗ್ ಸೇರಿ ಇತರರನ್ನು ಕೈ ಬಿಟ್ಟ ಕ್ರಮವನ್ನು ಪ್ರಶ್ನಿಸಿದೆ.

'ಸಂಡೂರಿನ ಜೈಸಿಂಗ್‌ಪುರ ಯಾರ್ಡ್‌ನಿಂದ ಬೇಲೇಕೇರಿ ಬಂದರಿಗೆ ಅಕ್ರಮವಾಗಿ ಸಾಗಾಟ ಮಾಡಿದ್ದ 12 ಸಾವಿರಕ್ಕೂ ಅಧಿಕ ಟನ್ ಅದಿರು ಸಾಗಾಟದಲ್ಲಿ ನಡೆದ ಅವ್ಯವಹಾರ, ವಂಚನೆಯಲ್ಲಿ ಮೆಸರ್ಸ್ ಎಸ್.ಬಿ.ಮಿನರಲ್ಸ್ ಶಾಮೀಲಾಗಿದೆ. ಆದರೆ, ತನಿಖೆ

**ಮುಖ್ಯಾಂಶಗಳು**

ಪ್ರಕರಣದಲ್ಲಿ ಎಸ್‌ಐಟಿಯ ಲೋಪ ಗುರುತಿಸಿರುವ ನ್ಯಾಯಾಲಯ

ಪ್ರತಿ ವ್ಯವಹಾರ, ವಹಿವಾಟಿಗೂ ಎಲ್ಲಾ ಪಾಲುದಾರರು ಹೊಣೆಗಾರರು

ನಡೆಸಿರುವ ಎಸ್‌ಐಟಿ, ಪ್ರಕರಣದಲ್ಲಿ ಬಿ.ಎಸ್. ಜಯರಾಜ್ ಸಿಂಗ್, ಕಂಪನಿಯನ್ನು ಆರೋಪಿಗಳನ್ನಾಗಿ ಪರಿಗಣಿಸಿದೆ. ಕಂಪನಿಯ ಸಹ ಪಾಲುದಾರರಾದ ಬಿ.ಪಿ. ಅನಂದ್ ಸಿಂಗ್



ಅಲಿಯಾಸ್ ಆನಂದ್ ಕುಮಾರ್ ಸಿಂಗ್ ಮತ್ತು ಅವರ ಸಹೋದರರ ಪಾತ್ರದ ಬಗ್ಗೆ ತನಿಖೆಯನ್ನೇ ನಡೆಸಿಲ್ಲ' ಎಂದು ಆದೇಶದಲ್ಲಿ ತಿಳಿಸಿದೆ.

'ಭಾರತೀಯ ಪಾಲುದಾರಿಕೆ ಕಾಯ್ದೆಯ ಕಲಂ 25ರ ಅನ್ವಯ ಯಾವುದೇ ಕಂಪನಿಯ ಪ್ರತಿ ವ್ಯವಹಾರ, ವಹಿವಾಟಿಗೂ ಎಲ್ಲಾ ಪಾಲುದಾರರು ಹೊಣೆಗಾರರು ಎಂದು ಸ್ಪಷ್ಟವಾಗಿ ತಿಳಿಸಿದೆ. ಆದರೆ, ಎಸ್‌ಐಟಿ ತನಿಖಾ ತಂಡವು ಎಸ್.ಬಿ.ಮಿನರಲ್ಸ್ ಸಹ ಪಾಲುದಾರರು ಅಕ್ರಮದಲ್ಲಿ ಶಾಮೀಲಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದರೂ ಪೂರ್ಣ ಪ್ರಮಾಣದ ತನಿಖೆ ನಡೆಸದೇ, ಕೈ ಬಿಟ್ಟು ಲೋಪ ಎಸಗಿದೆ' ಎಂದು ನ್ಯಾಯಾಲಯ ಆದೇಶದಲ್ಲಿ ಹೇಳಿದೆ.

ಪ್ರಕರಣವೇನು?

2009ರ ಜನವರಿ 1ರಿಂದ 2010ರ ಮೇ 31ರ ಅವಧಿಯಲ್ಲಿ ಬೇಲೇಕೇರಿ ಬಂದರಿಗೆ 30,284 ಟನ್ ಕಬ್ಬಿಣದ ಅದಿರು ಅಕ್ರಮವಾಗಿ ಸಾಗಾಟ ಮಾಡಿ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿದ್ದ ಸಂಬಂಧ ಎಸ್‌ಐಟಿ ತನಿಖೆ ನಡೆಸಿತ್ತು.

ಜೆ.ದೇಸಾಯ್ ಸೇರಿ 19 ಆರೋಪಿಗಳು, ಎಸ್.ಬಿ. ಮಿನರಲ್ಸ್ ಸೇರಿ 5 ಪ್ರತ್ಯೇಕ ಕಂಪನಿಗಳ ವಿರುದ್ಧ ಕೋರ್ಟ್‌ಗೆ ದೋಷಾರೋಪ ಪಟ್ಟಿ ಸಲ್ಲಿಸಿತ್ತು. ಈ ಪ್ರಕರಣದಲ್ಲಿ ತಮ್ಮವಿರುದ್ಧ ಹೊರಿಸಿರುವ ದೋಷಾರೋಪಗಳಿಂದ ಮುಕ್ತಗೊಳಿಸುವಂತೆ ಉದಯ್ ಜೆ.ದೇಸಾಯ್ ಸೇರಿ 21 ಮಂದಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಾಲಯ ವಜಾ ಮಾಡಿ, ಪ್ರಕರಣದ ಮರುತನಿಖೆಗೆ ಆದೇಶಿಸಿದೆ.

ಬಳ್ಳಾರಿಯ ವ್ಯಾಸನಕೆರೆ ಗಣಿಯಿಂದ ಬೇಲೇಕೇರಿಗೆ 16,987 ಟನ್ ಅದಿರು ಅಕ್ರಮವಾಗಿ ಸಾಗಾಟ ಮಾಡಿದ ಪ್ರಕರಣದಲ್ಲಿ ಆನಂದ್ ಸಿಂಗ್ ಸೇರಿ ಇತರೆ ಆರೋಪಿಗಳನ್ನು ಖುಲಾಸೆಗೊಳಿಸಿ. ಕಳೆದ ಮಾರ್ಚ್‌ನಲ್ಲಿ ವಿಶೇಷ ನ್ಯಾಯಾಲಯ ಆದೇಶಿಸಿತ್ತು

**2009ರ ಜನವರಿ 1ರಿಂದ 2010ರ ಮೇ 31ರ ಅವಧಿಯಲ್ಲಿ ಬಳ್ಳಾರಿ ಜಿಲ್ಲೆ ಸಂಡೂರು ತಾಲ್ಲೂಕಿನ ಗಣಿ ಯಾರ್ಡ್‌ಗಳಿಂದ ಬೇಲೇಕೇರಿ ಬಂದರಿಗೆ ಅಕ್ರಮವಾಗಿ 30.284 ಟನ್ ಕಬ್ಬಿಣದ ಅದಿರು ಸಾಗಾಟ ಪ್ರಕರಣಕ್ಕೆ ಸಂಬಂಧಿಸಿ ಕೋರ್ಟ್.11ರಂದು ಈ ಆದೇಶ ನೀಡಿದೆ.**

**ಪ್ರಕರಣದಲ್ಲಿ ಲೋಪಗಳನ್ನು ಗುರುತಿಸಿರುವ ನ್ಯಾಯಾಲಯ, ಆರೋಪಿ ಸ್ಥಾನದಲ್ಲಿರುವ ಎಸ್.ಬಿ.ಮಿನರಲ್ಸ್‌ನ ಸಹ ಪಾಲುದಾರರಾದ ಆನಂದ್ ಸಿಂಗ್ ಸೇರಿ ಇತರರನ್ನು ಕೈ ಬಿಟ್ಟ ಕ್ರಮವನ್ನು ಪ್ರಶ್ನಿಸಿದೆ.**

# ಜಿಎಸ್‌ಟಿ ಇಳಿಕೆ ಕುರಿತು ಮಾಹಿತಿ ನೀಡಲು ಸೂಚನೆ

**ನವದೆಹಲಿ (ಪಿಟಿಐ):** ಭೌತಿಕ ಮಳಿಗೆಗಳ ಮೂಲಕ ರಿಟೇಲ್ ಮಾರಾಟದಲ್ಲಿ ತೊಡಗಿರುವವರು ಜಿಎಸ್‌ಟಿ ದರ ಇಳಿಕೆಯಿಂದಾಗಿ ಉತ್ಪನ್ನಗಳ ಬೆಲೆಯಲ್ಲಿ ಆಗುವ ಇಳಿಕೆಯನ್ನು ಗ್ರಾಹಕರಿಗೆ ಗೊತ್ತಾಗುವ ರೀತಿಯಲ್ಲಿ ಪ್ರದರ್ಶಿಸಬೇಕು ಎಂದು ಕೇಂದ್ರವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯವು ಸೂಚಿಸಿದೆ.

ರಿಟೇಲ್ ವಹಿವಾಟಿನಲ್ಲಿ ತೊಡಗಿರುವವರ ಸಂಘಕ್ಕೆ ಸೂಚನೆಯೊಂದನ್ನು ರವಾನಿಸಿರುವ ಕೈಗಾರಿಕೆ ಮತ್ತು ಆಂತರಿಕ ವ್ಯಾಪಾರ ಉತ್ತೇಜನಾ ಇಲಾಖೆಯು (ಡಿಪಿಐಐಟಿ), ರಿಟೇಲ್ ವಹಿವಾಟಿನಲ್ಲಿ ತೊಡಗಿರುವವರು ಜಿಎಸ್‌ಟಿಯಲ್ಲಿ ಆಗಿರುವ ಇಳಿಕೆಯನ್ನು ರಸೀದಿಯಲ್ಲಿ'ಜಿಎಸ್‌ಟಿ ರಿಯಾಯಿತಿ' ಎಂಬುದಾಗಿ ನಮೂದಿಸಬೇಕು ಎಂದು ಹೇಳಿದೆ.'ಜಿಎಸ್‌ಟಿಯಿಂದಾಗಿನ ರಿಯಾಯಿತಿಯನ್ನು ಪ್ರಮುಖವಾಗಿ ತೋರಿಸಬೇಕು. ಉದಾಹರಣೆಗೆ, ಪೋಸ್ಟರ್‌ಗಳು, ಫ್ಲೈಯರ್‌ಗಳು ಹಾಗೂ ಜಾಹೀರಾತುಗಳ ಮೂಲಕ (ಟಿ.ವಿ., ಮುದ್ರಣ ಮತ್ತು ಆನ್‌ಲೈನ್ ಮಾಧ್ಯಮ) ತಿಳಿಸಬೇಕು' ಎಂದು ಅದು ಸೂಚಿಸಿದೆ.

# 'ಜಿಎಸ್‌ಟಿ ಇಳಿಕೆ ಲಾಭ ಗ್ರಾಹಕರಿಗೆ'

**ನವದೆಹಲಿ (ಪಿಟಿಐ):** ಜಿಎಸ್‌ಟಿ ದರದಲ್ಲಿನ ಪರಿಷ್ಕರಣೆಯಪೂರ್ಣ ಪ್ರಯೋಜನವನ್ನು ಗ್ರಾಹಕರಿಗೆ ವರ್ಗಾವಣೆ ಮಾಡಲಾಗುತ್ತದೆ ಎಂದು ಮದರ್ ಡೈರಿ ಮಂಗಳವಾರ ಹೇಳಿದೆ. ಹಾಲಿನ ಮೌಲ್ಯವರ್ಧಿತ ಉತ್ಪನ್ನಗಳು, ಸಂಸ್ಕರಿತ ಆಹಾರ ಸೇರಿದಂತೆ ತನ್ನ ಬಹುತೇಕ ಉತ್ಪನ್ನಗಳ ಬೆಲೆಯು ಸೆಪ್ಟೆಂಬರ್ 22ರಿಂದ ಕಡಿಮೆ ಆಗಲಿದೆ ಎಂದು ಅದು ಹೇಳಿದೆ.

ರಾಷ್ಟ್ರೀಯ ಹೈನು ಅಭಿವೃದ್ಧಿ ಮಂಡಳಿಯ (ಎನ್‌ಡಿಡಿಬಿ) ಅಂಗಸಂಸ್ಥೆ ಮದರ್ ಡೈರಿ. 200 ಗ್ರಾಂ ಪನೀರ್ ಬೆಲೆಯು 195 ಇರುವುದು ರೂ 92ಕ್ಕೆ, 1 ಲೀಟರ್ ತುಪ್ಪದ ಬೆಲೆಯು ರೂ 675 ಇರುವುದು ರೂ 645ಕ್ಕೆ 100 ಗ್ರಾಂ ಬೆಣ್ಣೆಯ ಬೆಲೆಯು ರೂ 62 ಇರುವುದು ರೂ 58ಕ್ಕೆ ಇಳಿಕ ಕಾಣಲಿದೆ ಎಂದು ಹೇಳಿದೆ.

# ಸೇಡಿಗಾಗಿ ಸಮಾಜವನ್ನು ಬಲಿ ಕೊಡಬೇಡಿ'

**ಹುಬ್ಬಳ್ಳಿ:** 'ಪಂಚ ಪೀಠಾಧೀಶರ ವಿರುದ್ಧ ಸೇಡು ತೀರಿಸಿಕೊಳ್ಳುವ ಭರದಲ್ಲಿ ಜಾಗತಿಕ ಲಿಂಗಾಯತ ಮಹಾಸಭಾದ ಕಾರ್ಯದರ್ಶಿ ಎಸ್. ಎಂ. ಜಾಮದಾರ ಅವರು ಸಮಾಜವನ್ನು ಬಲಿ ಕೊಡಬಾರದು' ಎಂದು ಶಿರಹಟ್ಟಿಯ ಫಕೀರ ದಿಂಗಾಲೇಶ್ವರ ಸ್ವಾಮೀಜಿ ಹೇಳಿದರು.

'ಸಮಾಜಕ್ಕೆ ಸಂಬಂಧಿಸಿ ಜಾಮದಾರ ಅವರು ಪಂಚಾಚಾರ್ಯರಿಗೆ ಸವಾಲು ಹಾಕಬೇಕೆ ಹೊರತು ನಮಗಲ್ಲ. ಸಮಾಜದ ಸಂಘಟನೆಗಷ್ಟೇ ಹುಬ್ಬಳ್ಳಿಯಲ್ಲಿ ವೀರಶೈವ–ಲಿಂಗಾಯತ ಏಕತಾ ಸಮಾವೇಶ ಹಮ್ಮಿಕೊಳ್ಳಲಾಗಿದೆ' ಸುದ್ದಿಗಾರರಿಗೆ ತಿಳಿಸಿದರು.

'ಪಂಚ ಪೀಠದವರಿಗಷ್ಟೇ ಅಲ್ಲ, ಎಲ್ಲ ಮಠಗಳಿಗೆ ಆಮಂತ್ರಿಸುವಂತೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾಕ್ಕೆ ಕೋರಿದ್ದೇವೆ. ಸಕಾರಾತ್ಮಕ ಸ್ಪಂದನೆ ಸಿಕ್ಕಿದೆ. ಎಲ್ಲರೂ ಒಂದಾಗಲು ಕೆಲ ನಿಯಮ ಸಡಿಲಿಸಿಕೊಳ್ಳಬೇಕು. ಪ್ರತ್ಯೇಕ ಲಿಂಗಾಯತ ಧರ್ಮ ಕೇಳುತ್ತಿರುವವರು ಅದಕ್ಕೆ ಸಿದ್ಧರಿಲ್ಲ. ಅವರ ಷರತ್ತುಗಳು ಸಂಘಟನೆಗೆ ಪೂರಕವಾಗಿಲ್ಲ' ಎಂದು ಅಭಿಪ್ರಾಯಪಟ್ಟರು.

ಭಿನ್ನಾಭಿಪ್ರಾಯದಿಂದ ಸಮಾಜ ಹಾಳಾಗಿದೆ. ಕೊರಳಲ್ಲಿ ಲಿಂಗ ಕಟ್ಟಿಕೊಂಡು ಪೂಜೆಮಾಡುವ ಯಾವುದೇ ಸಮಾಜ, ಯಾವುದೇ ಸಂಪ್ರದಾಯದವರು ಈ ಸಮಾವೇಶದಲ್ಲಿ ಭಾಗವಹಿಸಬಹುದು' ಎಂದರು.

'ಜಾತಿ ಸಮೀಕ್ಷೆಯಲ್ಲಿ ಏನು ನಮೂದಿಸಬೇಕು ಎಂದು ವೀರಶೈವ ಲಿಂಗಾಯತ ಮಹಾಸಭಾ ನಿರ್ಣಯ ತೆಗೆದುಕೊಳ್ಳಲಿದೆ.ಮಹಾಸಭಾ ಯಾವುದೇ ಪಕ್ಷ, ಮುಖಂಡರ ಅಧೀನದಲ್ಲಿ ಇಲ್ಲ. ಎಲ್ಲರೂ ತಮ್ಮ ಅಭಿಪ್ರಾಯವನ್ನು ಮಹಾಸಭಾಗೆ ನೀಡಬೇಕು' ಎಂದರು.'ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಟಿಕೆಟ್ ಕೊಡಿಸುವಂತೆ ಕೋರಲು ದಿಂಗಾಲೇಶ್ವರ ಸ್ವಾಮೀಜಿ ಮಠಕ್ಕೆ ಬಂದಿದ್ದರು' ಎಂಬ ವಚನಾನಂದ ಸ್ವಾಮೀಜಿ ಹೇಳಿಕೆಗೆ ಪ್ರತಿಕ್ರಿಯಿಸಿ, 'ಟಿಕೆಟ್‌ಗಳನ್ನು ಅವರ ಮಠದಲ್ಲಿ ಮಾರಾಟಕ್ಕೆ ಇಟ್ಟಿದ್ದಾರೆಯೇ?' ಎಂದು ಪ್ರಶ್ನಿಸಿದರು.

'ಪಕ್ಷದ ಟಿಕೆಟ್ ಅನ್ನು ಅವರ ಬಳಿ ಕೇಳುವ ಪ್ರಸಂಗ ಯಾರಿಗೂ ಬರಲಿಕ್ಕಿಲ್ಲ. ಅವರ ವಿನಂತಿಯಂತೆ ಮಠಕ್ಕೆ ಹೋಗಿ ಪೂಜೆ, ಪ್ರಸಾದ ಮಾಡಿ ಬಂದಿದ್ದೆ. ಉಳಿದಿದ್ದು ಅವರ ವಿವೇಚನೆಗೆ ಬಿಟ್ಟಿದ್ದು. ಸದ್ಯಕ್ಕೆ ಆ ವಿಚಾರದ ಚರ್ಚೆ ಬೇಡ' ಎಂದರು.

# ಅರ್ಜಿ ಆಹ್ವಾನ

**ಶಿವಮೊಗ್ಗ:** ಸೊರಬ ತಾಲೂಕಿನ ಚಂದ್ರಗುತ್ತಿ ಗ್ರಾಮದ ಶ್ರೀ ರೇಣುಕಾಂಬ ದೇವಸ್ಥಾನದಲ್ಲಿ ಸೆ.22 ರಿಂದ ಅ.02 ರವರೆಗೆ ದಸರಾ ಉತ್ಸವದ ಅಮ್ಮನವರ ಪಲ್ಲಕ್ಕಿ ಮೆರವಣಿಗೆಯಲ್ಲಿ ಭಾಗವಹಿಸಲು ಇಚ್ಛೆಯುಳ್ಳ ವಿವಿಧ ಕಲಾತಂಡಗಳಿಂದ ಅರ್ಜಿ ಆಹ್ವಾನಿಸಿದೆ.

ಶ್ರೀ ರೇಣುಕಾ ಪರಮೇಶ್ವರಿ ಅಮ್ಮನವರ ಶರನ್ನವರಾತ್ರಿ ಉತ್ಸವದ ಅಂಗವಾಗಿ ಪ್ರತಿ ದಿನ ದೇವಿ ಪಾರಾಯಣ, ನವಗ್ರಹ ಜಪ, ಮೃತ್ಯುಂಜಯ ಜಪ, ಪವಮಾನ, ಶ್ರೀ ರೇಣುಕಾ ಸಹಸ್ರನಾಮ, ಶ್ರೀ ದುರ್ಗಾ ಸಹಸ್ರನಾಮ, ಲಲಿತಾ ಸಹಸ್ರನಾಮ ಪೂಜಾ ವಿಧಿಗಳನ್ನು ನಡೆಯುವುದು. ಅ. 02 ರಂದು ವಿಜಯದಶಮಿಯ ಬನ್ನಿ ಉತ್ಸವದಂದು ಅಮ್ಮನವರ ಪಲ್ಲಕ್ಕಿ ಮೆರವಣಿಗೆ ನಡೆಯುವುದರಿಂದ ಮೆರವಣಿಗೆಯಲ್ಲಿ ಭಾಗವಹಿಸಿ ಇಚ್ಛೆಯುಳ್ಳ ವಿವಿಧ ಕಲಾತಂಡಗಳು ಸೆ. 18ರೊಳಗಾಗಿ ತಮ್ಮ ತಂಡದ ಹೆಸರು, ತಾವು ನೀಡಿರುವ ಕಾರ್ಯಕ್ರಮದ ಸಂಪೂರ್ಣ ವಿವರಗಳೊಂದಿಗೆ ಕಾರ್ಯನಿರ್ವಾಹಣಾಧಿಕಾರಿಗಳು, ಶ್ರೀ ರೇಣುಕಾಂಬ ದೇವಸ್ಥಾನ ಚಂದ್ರಗುತ್ತಿ, ಸೊರಬ ತಾಲೂಕು, ಶಿವಮೊಗ್ಗ ಜಿಲ್ಲೆ ಇಲ್ಲಿ ಮನವಿ ಪತ್ರವನ್ನು ಸಲ್ಲಿಸುವುದು.

# ಮಾಹಿತಿ ಹಕ್ಕು ಕಾಯ್ದೆ ಕುರಿತು ತರಬೇತಿ

**ಚಿಕ್ಕಬಳ್ಳಾಪುರ:** ಕರ್ನಾಟಕ ರಾಜ್ಯ ಮಾಹಿತಿ ಆಯುಕ್ತರುಗಳಾದ ರುದ್ರಣ್ಣ ಹರ್ತಿಕೋಟೆ ಹಾಗೂ ಎಸ್. ರಾಜಶೇಖರ ರವರ ಅಧ್ಯಕ್ಷತೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಸಾರ್ವಜನಿಕ ಮಾಹಿತಿ ಅಧಿಕಾರಿ ಹಾಗೂ ಪ್ರಥಮ ಮೇಲ್ಮನವಿ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಕಾಯ್ದೆಯ ಕುರಿತು ತರಬೇತಿಯನ್ನು ಸೆಪ್ಟೆಂಬರ್ 20 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಸದರಿ ತರಬೇತಿಗೆ ಸಾರ್ವಜನಿಕ ಮಾಹಿತಿ ಅಧಿಕಾರಿ ಹಾಗೂ ಪ್ರಥಮ ಮೇಲ್ಮನವಿ ಅಧಿಕಾರಿಗಳು ಅಂಕಿ ಅಂಶಗಳ ಮಾಹಿತಿಯೊಂದಿಗೆ ತಪ್ಪದೇ ಹಾಜರಾಗುವಂತೆ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**ಶಿವಮೊಗ್ಗ:** ಕರ್ನಾಟಕ ಬಂಜಾರ ತಾಂಡಾ ಅಭಿವೃದ್ಧಿ ನಿಗಮವು ಬಂಜಾರ ಸಮುದಾಯದ ಸಾಂಪ್ರದಾಯಿಕ ಸಂಸ್ಕೃತಿ ಮತ್ತು ಕಲೆಗಳನ್ನು ಉಳಿಸಿ, ಬೆಳೆಸಿ ಪುನಶ್ಚೇತನಗೊಳಿಸುವ ಉದ್ದೇಶದಿಂದ ಮತ್ತು ಬಂಜಾರ ಕಲಾವಿದರ ಪ್ರತಿಭೆಯನ್ನು ಹೊರಹೊಮ್ಮಿಸಲು ಕಲಾ ಪ್ರತಿಭಾನ್ವೇಷಣೆ–ಕಲಾ ಮಳಾವ್ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಆಸಕ್ತ ಬಂಜಾರ ಸಮುದಾಯದ ಕಲಾವಿದರಿಂದ ಅರ್ಜಿ ಆಹ್ವಾನಿಸಿದೆ.ಆಸಕ್ತ ಬಂಜಾರ ಕಲಾವಿದರು ನಿಗಮದ ವಲಯ ಕಚೇರಿಯಿಂದ ನಿಗದಿತ ನಮೂನೆ ಅರ್ಜಿಯನ್ನು ಪಡೆದು, ಭರ್ತಿ ಮಾಡಿ ಅರ್ಜಿಯನ್ನು ಸೆ. 28 ರೊಳಗಾಗಿ ಸಲ್ಲಿಸುವಂತೆ ನಿಗಮದ ಅಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

### 21 ಮೀಟರ್ ಎತ್ತರದ ಕಟ್ಟಡಗಳಿಗೆ ಜಿಲ್ಲಾ ಮಟ್ಟದಲ್ಲೇ ಅನುಮತಿ

# ಅಗ್ನಿ ಸುರಕ್ಷತಾ ಪತ್ರ ಇನ್ನು ಸಲೀಸು

**ಬೆಂಗಳೂರು:** ವಸತಿ, ಶೈಕ್ಷಣಿಕ, ವಾಣಿಜ್ಯ, ಕೈಗಾರಿಕೆ, ಆಸ್ಪತ್ರೆ ಮತ್ತು ಗೋದಾಮು ಕಟ್ಟಡಗಳಿಗೆ ಅಗ್ನಿ ' ಸುರಕ್ಷತಾ ಸಮಾಪನ ಪತ್ರ ಪಡೆಯುವ ನಿಯಮವನ್ನು ಸರಳಗೊಳಿಸಲಾಗಿದೆ.

ಈ ಅಧಿಕಾರವನ್ನು ಅಗ್ನಿ ಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ನೀಡಿರುವುದರಿಂದ ಕಟ್ಟಡಗಳ ಮಾಲೀಕರು ರಾಜಧಾನಿಗೆ ಅಲೆದಾಡುವುದು ತಪ್ಪಲಿದೆ.

ಇನ್ನು ಮುಂದೆ ಜಿಲ್ಲಾ ಅಗ್ನಿ ಶಾಮಕ ಅಧಿಕಾರಿಯು ತಮ್ಮ ವ್ಯಾಪ್ತಿಯಲ್ಲಿರುವ ಬಹುಮಹಡಿ ಕಟ್ಟಡವಲ್ಲದ, ಅಂದರೆ 21 ಮೀಟರ್‌ಗಿಂತ ಕಡಿಮೆ ಎತ್ತರ ಇರುವ ಕಟ್ಟಡಗಳ ಪರಿಶೀಲನೆ ನಡೆಸಿ ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿಗೆ ವರದಿ ಸಲ್ಲಿಸುವರು. ಈ ವರದಿ ಪರಿಶೀಲನೆ ಬಳಿಕ. ಪ್ರಾದೇಶಿಕ ಅಗ್ನಿ

'ಕಚೇರಿಗೆ ಅಲೆದಾಟ ತಪ್ಪಲಿದೆ'

'ಈ ಪ್ರಕ್ರಿಯೆಯಿಂದ ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟಾಗಿತ್ತು. ಉದಾಹರಣೆಗೆ, ಸೊರಬ ತಾಲ್ಲೂಕಿನಲ್ಲಿ 15ರಿಂದ 21 ಮೀಟರ್ ಎತ್ತರವಿರುವ ಎಲ್ಲಾ ರೀತಿಯ ಕಟ್ಟಡಗಳಿಗೆ ಅಗ್ನಿ ಸುರಕ್ಷತಾ ಸಮಾಪನ ಪತ್ರ ಪಡೆಯಲು ಕೇಂದ್ರ ಕಚೇರಿಗೆ ತೆರಳಬೇಕಿತ್ತು. 15 ಮೀಟರ್‌ಗಿಂತ ಕಡಿಮೆ ಎತ್ತರವಿರುವ ಎಲ್ಲ ರೀತಿಯ ಕಟ್ಟಡಗಳಿಗೆ ಅಗ್ನಿ ಸುರಕ್ಷತಾ ಪತ್ರ ಪಡೆಯಲು ಮುಖ್ಯ ಅಗ್ನಿ ಶಾಮಕ ಅಧಿಕಾರಿ ಇರುವ ಮಂಗಳೂರಿಗೆ ತೆರಳಬೇಕಿತ್ತು. ಇದೇ ರೀತಿ ರಾಜ್ಯದ ಎಲ್ಲ ಜಿಲ್ಲೆಯ ಜನರು ಪತ್ರ ಪಡೆಯಲು ಕಷ್ಟಪಡುತ್ತಿದ್ದರು. ಇದಕ್ಕಾಗಿ ತಿಂಗಳಿಗೂ ಹೆಚ್ಚು



ಕಾಲ ಕಚೇರಿಗೆ ಅಲೆದಾಡಬೇಕಿತ್ತು' ಎಂದು ಅಗ್ನಿ ಶಾಮಕ ಇಲಾಖೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.'ಈ ಸಮಸ್ಯೆ ಬಗ್ಗೆ ಗೃಹ ಸಚಿವ ಜಿ.ಪರಮೇಶ್ವರ ಅವರು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸಿ ಪರಿಹಾರ ನೀಡಿದ್ದಾರೆ. ಸಾರ್ವಜನಿಕರ ಹಿತದೃಷ್ಟಿಯಿಂದ 21 ಮೀಟರ್‌ಗಿಂತ ಕಡಿಮೆ ಎತ್ತರವಿರುವ ಎಲ್ಲಾ ರೀತಿಯ ಕಟ್ಟಡಗಳನ್ನು ಪರಿಶೀಲನೆ ಮಾಡುವ ಅಧಿಕಾರವನ್ನು ಜಿಲ್ಲಾ ಅಗ್ನಿ ಶಾಮಕ ಅಧಿಕಾರಿಗೆ ಹಾಗೂ ಅಗ್ನಿ ಸುರಕ್ಷತಾ ಸಲಹಾ ಪತ್ರ ವಿತರಿಸುವ ಅಧಿಕಾರವನ್ನು ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿಗೆ ನೀಡಲಾಗಿದೆ. ಇದರಿಂದ ಸಾರ್ವಜನಿಕರು ಆಯಾ ಜಿಲ್ಲೆಯಲ್ಲಿ ಪಡೆಯಬಹುದು' ಎಂದು ಹೇಳಿದ್ದಾರೆ.

ಶಾಮಕ ಅಧಿಕಾರಿ ಸಂಬಂಧಪಟ್ಟ ಕಟ್ಟಡದ ಮಾಲೀಕರಿಂದ ನಿಗದಿತಶುಲ್ಕ ಪಾವತಿಸಿಕೊಂಡು, ಅಗ್ನಿ ಸುರಕ್ಷತಾ ಪತ್ರ ನೀಡಲಿದ್ದಾರೆ. ಈ

ಸಂಬಂಧ ಪೊಲೀಸ್ ಸಹಾಯಕ ಸೇವೆ ಮತ್ತು ಸಮನ್ವಯ ಒಳಾಡಳಿತ ಇಲಾಖೆ ಆದೇಶ ಹೊರಡಿಸಿದೆ. ಕಟ್ಟಡಗಳ ಎತ್ತರ 21 ಮೀಟರ್‌ಗಿಂತ ಜಾಸ್ತಿ ಇದ್ದರೆ ಅತಿ ಎತ್ತರದ ಕಟ್ಟಡಗಳೆಂದು, 21 ಮೀಟರ್‌ಗಿಂತ ಒಳಗೆ ಇದ್ದರೆ ಕಡಿಮೆ ಎತ್ತರದ ಕಟ್ಟಡಗಳೆಂದು 2023ರ ಆದೇಶದಲ್ಲಿ ವ್ಯಾಖ್ಯಾನಿಸಲಾಗಿದೆ. 15 ಮೀಟರ್‌ಗಿಂತ ಎತ್ತರದ ಕಟ್ಟಡಗಳನ್ನು ಪೊಲೀಸ್ ಮಹಾ ನಿರ್ದೇಶಕರು ಹಾಗೂ 15 ಮೀಟರ್‌ಗಿಂತ ಕಡಿಮೆ ಎತ್ತರದ ಕಟ್ಟಡಗಳಿಗೆ ಅಗ್ನಿ ಸುರಕ್ಷತಾ ಪತ್ರವನ್ನು ಮುಖ್ಯ ಅಗ್ನಿಶಾಮಕ ಅಧಿಕಾರಿ ವಿತರಿಸುವ ವ್ಯವಸ್ಥೆ ಇದೆ.

# ಸಮೀಕ್ಷೆ ನೆಪದಲ್ಲಿ ಜಾತಿ ಗಣತಿ ನಡೆಸುವ ಕುತಂತ್ರ: ಸಿದ್ದರಾಮಯ್ಯ ವಿರುದ್ಧ ಬಿಜೆಪಿ ಮುಖಂಡರ ಕಿಡಿ

**ಬೆಂಗಳೂರು:** ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆ ಹೆಸರಿನಲ್ಲಿ ವೀರಶೈವ ಸಮಾಜ ವಿಭಜಿಸುವ ಕೆಲಸಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತೊಮ್ಮೆ ಮುಂದಾಗಿದ್ದಾರೆ ಎಂದು ಸಮುದಾಯದ ಬಿಜೆಪಿ ಮುಖಂಡರು ಕಿಡಿಕಾರಿದ್ದಾರೆ.

ಮುಖ್ಯಮಂತ್ರಿ ತಮ್ಮ ರಾಜಕೀಯ ಉದ್ದೇಶಕ್ಕಾಗಿ ನಡೆಸುತ್ತಿರುವ ಜಾತಿ ಗಣತಿಯನ್ನೇ ವಿರೋಧಿಸಿರುವ ಸಮುದಾಯ, ನಮ್ಮಲ್ಲಿ ಯಾವುದೇ ವಿಭಜನೆ ಇಲ್ಲ, ಒಗ್ಗಟ್ಟಿನಿಂದಿದ್ದೇವೆ ಎಂದಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನಾಯಕತ್ವದಲ್ಲಿ ನಡೆದ ಮುಖಂಡರ ಸಭೆಯಲ್ಲಿ ಕೆಲವು ಪ್ರಮುಖ ನಿರ್ಣಯಗಳನ್ನು ಕೈಗೊಂಡಿರುವುದಲ್ಲದೆ, ಸಮಾಜದ ಮಠಾಧೀಶರು ಹಾಗೂ ವೀರಶೈವ ಮಹಾಸಭಾದ ಜೊತೆ ಚರ್ಚಿಸುವ ತೀರ್ಮಾನ ಕೈಗೊಂಡಿದ್ದಾರೆ.

ಸಭೆ ನಂತರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ವಿಜಯೇಂದ್ರ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ, ಸಮೀಕ್ಷೆ



ನೆಪದಲ್ಲಿ ಜಾತಿ ಗಣತಿ ನಡೆಸುವ ಷಡ್ಯಂತ್ರ, ಕುತಂತ್ರ ಇದಾಗಿದೆ ಎಂದು ಕಿಡಿಕಾರಿದರು. ಜಾತಿ ಗಣತಿ ಹೆಸರಿನಲ್ಲಿ ಎಲ್ಲಾ ಸಮಾಜವನ್ನು ಒಡೆಯಲು ಸಿದ್ದರಾಮಯ್ಯ ಮುಂದಾಗಿದ್ದಾರೆ. ತಮ್ಮ ಅಧಿಕಾರ ದುರುಪಯೋಗ ಪಡಿಸಿಕೊಂಡು ಜಾತಿ ವೈಷಮ್ಯ ಹುಟ್ಟುಹಾಕಲು ಹುನ್ನಾರ ನಡೆಸಿದ್ದಾರೆ.

ಸಮಾಜವಾದದ ಹಿನ್ನೆಲೆಯಿಂದ ಬಂದಂತಹ ಸಿದ್ದರಾಮಯ್ಯ ಈ ಕೂಡಲೇ ಇಂತಹ ಸಮೀಕ್ಷೆ ಕೈಬಿಡದಿದ್ದರೆ ರಾಜಕೀಯ ಅಧಃಪತನದತ್ತ ಸಾಗುವುದು ಖಂಡಿತ ಎಂದರು. ಸಂವಿಧಾನದ ವಿಧಿಯಡಿ ಅವಕಾಶ ಇಲ್ಲದೇ ಇದ್ದರೂ ರಾಜ್ಯ ಸರ್ಕಾರ ಜಾತಿ ಗಣತಿ ನಡೆಸುತ್ತಿದೆ, ಇದರ ಹಿಂದೆ ಕುತಂತ್ರ, ಷಡ್ಯಂತ್ರವೂ ಇದೆ. ಸಮೀಕ್ಷೆಯ ಕಾಲಂಗಳನ್ನು ಗಮನಿಸಿದರೆ ಹಿಂದೂ, ಇಸ್ಲಾಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ, ಪಾರ್ಸಿ, ನಾಸ್ತಿಕರು ಜೊತೆಗೆ ಇತರೆ ಎಂಬುದೂ ಕೂಡ ಕಾನೂನುಬಾಹಿರ. ಸಿದ್ದರಾಮಯ್ಯ ತಮ್ಮ ಮನಃಸ್ಥಿತಿಯನ್ನು ಮುಂದಿಟ್ಟುಕೊಂಡು ಜಾತಿಗಣತಿ ನಡೆಸಿ ಜಾತಿ–ಜಾತಿಗಳನ್ನು ವಿಭಜಿಸುವ ಕೆಲಸಕ್ಕೆ ಕೈಹಾಕಿದ್ದಾರೆ ಎಂದು ಟೀಕಿಸಿದ್ದಾರೆ.

ಈ ಸಮೀಕ್ಷೆಯಿಂದ ವೀರಶೈವ ಸಮಾಜ ಒಡೆಯುವ ಕುತಂತ್ರ ಇದಾಗಿದೆ. 2014ರಲ್ಲಿ ಸಮಾಜ ಒಡೆಯುವ ಪ್ರಯತ್ನ ನಡೆಸಿ ಜನತೆಯಿಂದ ತಿರಸ್ಕರಿಸಲ್ಪಟ್ಟಿದ್ದರು. ಅಂದು ನಮ್ಮ ಸಮಾಜ ಒಗ್ಗಟ್ಟಾಗಿ ನಿಂತಿತ್ತು. ಇದೀಗ ಮತ್ತೆ ಅಂತಹ ಕೆಲಸಕ್ಕೆ ಸಿದ್ದರಾಮಯ್ಯ ಹಿಂಬಾಗಿಲಿನಿಂದ ಕೈಹಾಕಿದ್ದಾರೆ, ನಾವೆಲ್ಲರೂ ಒಂದಾಗಿದ್ದೇವೆ ಎಂದರು.

# ಒಬ್ಬ ವಿದ್ಯಾರ್ಥಿ ಇದ್ದರೂ ಶಾಲೆ ನಡೆಸುತ್ತೇವೆ : ಸಚಿವ ಮಧು ಬಂಗಾರಪ್ಪ

**ದಾವಣಗೆರೆ :** ರಾಜ್ಯದಲ್ಲಿ 13 ಸಾವಿರ ಸರ್ಕಾರಿ ಶಾಲೆಗಳಲ್ಲಿ 25ಕ್ಕಿಂತ ಕಡಿಮೆ ಸಂಖ್ಯೆಯ ಮಕ್ಕಳಿದ್ದಾರೆ. ಒಬ್ಬ ವಿದ್ಯಾರ್ಥಿ ಇದ್ದರೂ ಶಾಲೆ ನಡೆಸುತ್ತೇವೆ. ಸರ್ಕಾರಿ ಶಾಲೆಗಳನ್ನು ಮುಚ್ಚುವುದಿಲ್ಲ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದರು.

ದಾವಣಗೆರೆ ಬಿಐಇಟಿ ಕಾಲೇಜು ಆವರಣದಲ್ಲಿರುವ ಎಸ್.ಎಸ್. ಮಲ್ಲಿಕಾರ್ಜುನ್ ಸಾಂಸ್ಕೃತಿಕ ಕೇಂದ್ರದಲ್ಲಿ ಶನಿವಾರ, ಕರ್ನಾಟಕ ಅನುದಾನರಹಿತ ಪದವಿಪೂರ್ವ ಕಾಲೇಜು ಆಡಳಿತ ಮಂಡಳಿಗಳ ಸಂಘ(ಕುಪ್ಮಾ) ವತಿಯಿಂದ ಆಯೋಜಿಸಿದ್ದ ರಾಜ್ಯಮಟ್ಟದ ಪದವಿಪೂರ್ವ ಶಿಕ್ಷಣ ಸಮಾವೇಶದಲ್ಲಿ ಮಾತನಾಡಿದರು.

ಸಮಸ್ಯೆಗಳ ಬಗೆಹರಿಸುವುದರ ಜೊತೆ ಸುಧಾರಣೆಗಳನ್ನೂ ಮಾಡುವ ಕೆಲಸ ಮಾಡುತ್ತಿದ್ದೇವೆ. ಹಿಂದಿನ ಸರ್ಕಾರಗಳಲ್ಲಿ




ಕೇವಲ 308ರಷ್ಟು ಕರ್ನಾಟಕ ಪಬ್ಲಿಕ್ ಶಾಲೆಗಳಿದ್ದವು. ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ 3500 ಕೋಟಿ ವೆಚ್ಚದಲ್ಲಿ 800 ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳನ್ನು ಆರಂಭಿಸುತ್ತಿದೆ ಎಂದು ತಿಳಿಸಿದರು.

ಪದವಿಪೂರ್ವ ಕಾಲೇಜುಗಳನ್ನು ಆರಂಭಿಸುವ ಉದ್ದೇಶವೂ ಇದೆ. ಇದ–ರಿಂದ ಖಾಸಗಿ ಮತ್ತು ಸರ್ಕಾರಿ ಸಂಸ್ಥೆಗಳ ನಡುವೆ ಸ್ಪರ್ಧೆ ಆರಂಭವಾಗಬಹುದು ಎಂದು ಅಭಿಪ್ರಾಯಪಟ್ಟರು.

ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಹಂತದಲ್ಲಿ 3 ಬಾರಿ ಪರೀಕ್ಷೆ ಬರೆಯುವ ನೀತಿ ಜಾರಿಗೆ ತಂದಿರುವುದು ವಿದ್ಯಾರ್ಥಿಗಳಿಗೆ ವರದಾನವಾಗಿದೆ ಎಂದು ಮಧು ಬಂಗಾರಪ್ಪ ಇದೇ ಸಂದರ್ಭದಲ್ಲಿ ಹೇಳಿದರು.

ಮೂರು ಬಾರಿ ಪರೀಕ್ಷೆ ಬರೆಯುವ ನೀತಿ ತಂದಿದ್ದರಿಂದ ಎಸ್‌ಎಸ್‌ಎಲ್‌ಸಿಯಲ್ಲಿ ಈ ವರ್ಷ 1.16 ಲಕ್ಷ ಮಕ್ಕಳು ಹಾಗೂ ದ್ವಿತೀಯ ಪಿಯುಸಿಯಲ್ಲಿ 86 ಸಾವಿರ ವಿದ್ಯಾರ್ಥಿಗಳು ಪಾಸ್ ಆಗಿದ್ದಾರೆ ಎಂದು ತಿಳಿಸಿದರು.

ಖಾಸಗಿ ಸಂಸ್ಥೆಗಳಿಗೆ ಸಮಾನವಾಗಿ ಗುಣಮಟ್ಟ ತರುವ ಪ್ರಯತ್ನ ನಡೆದಿದೆ. ಈ ವರ್ಷ 25 ಸಾವಿರ ಸರ್ಕಾರಿ ಕಾಲೇಜು ವಿದ್ಯಾರ್ಥಿಗಳಿಗೆ ಸಿಇಟಿ ಮತ್ತು ನೀಟ್ ಉಚಿತ ತರಬೇತಿಯನ್ನು ಈ ವರ್ಷದಿಂದ ನೀಡಲಾಗುತ್ತಿದೆ ಎಂದು ಹೇಳಿದರು.

ಕುಪ್ಮಾ ಅಧ್ಯಕ್ಷ ಡಾ. ಎಂ. ಮೋಹನ್ ಆಳ್ವ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಂಸದೆ ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ.ಎಸ್. ಬಸವಂತಪ್ಪ, ಕುಪ್ಮಾ ಗೌರವಾಧ್ಯಕ್ಷ ಎಂ.ಬಿ. ಪುರಾಣಿಕ್, ಕಾರ್ಯದರ್ಶಿ ಪ್ರೊ. ನರೇಂದ್ರ ಎಲ್. ನಾಯಕ್, ಜಿಲ್ಲಾಧ್ಯಕ್ಷ ಎಸ್.ಜೆ. ಶ್ರೀಧರ್ ಇದ್ದರು.

# ಪುರಸಭೆ ಅಧಿಕಾರಿಗಳಿಂದ ದೌರ್ಜನ್ಯ : ಕರ್ನಾಟಕ ರಕ್ಷಣಾ ವೇದಿಕೆಯಿಂದ ದೂರು



**ತರೀಕೆರೆ:** ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ) ತಾಲೂಕು ಘಟಕ, ಕನ್ನಡ ಸೇನೆ ಕರ್ನಾಟಕ ತಾಲೂಕು ಘಟಕ, ಕನ್ನಡಪರ ಸಂಘಟನೆಗಳ ಒಕ್ಕೂಟ ವತಿಯಿಂದ ರಸ್ತೆಯ ಬದಿಯಲ್ಲಿದ್ದ ಪೆಟ್ಟಿಗೆ ಅಂಗಡಿಗಳ ಧ್ವಂಸ, ಅಮೂಲ್ಯ ವಸ್ತುಗಳ ನಾಶ ಹಾಗೂ ಬಡ ಕುಟುಂಬಗಳ ಮೇಲೆ ದಬ್ಬಾಳಿಕೆ ಮತ್ತು ದೌರ್ಜನ್ಯ ಮಾಡಿರುವ ಪುರಸಭೆ ಮುಖ್ಯ ಅಧಿಕಾರಿಗಳು ದೌರ್ಜನ್ಯ ಮಾಡಿರುವ ಕುರಿತು ಉಪ ವಿಭಾಗಾಧಿಕಾರಿಗಳಿಗೆ ದೂರು ಸಲ್ಲಿಸಿದ್ದಾರೆ.

ನಾನು ಮತ್ತು ನನ್ನೊಂದಿಗೆ ಇರುವ ಏಳು ಬಡ ಕುಟುಂಬಗಳ ಮೇಲೆ ದಬ್ಬಾಳಿಕೆ ಮಾಡಿದ್ದು, ತುಂಬಾ ನೋವಿನಿಂದ ಈ ದೂರು ಪತ್ರವನ್ನು ಬರೆಯುತ್ತಿದ್ದೇವೆ. ನಮ್ಮ ಕುಟುಂಬಗಳ ನಿರ್ವಹಣೆಗೆ ತಾತ್ಕಾಲಿಕ ಶೀಟ್‌ಗಳಲ್ಲಿ ಜೆರಾಕ್ಸ್ ಅಂಗಡಿ, ಟೀ ಅಂಗಡಿ, ಹೇರ್ ಸಲೂನ್ ಮುಂತಾದ ಸಣ್ಣ ಸಣ್ಣ ವ್ಯಾಪಾರ ನಡೆಸುತ್ತಿದ್ದೇವೆ. ಈ ಅಂಗಡಿಗಳು ನಮ್ಮ ಮಕ್ಕಳ ಬದುಕಿನ ಆಶಾಕಿರಣ, ನಮ್ಮ ಹೊಟ್ಟೆಯ ಹೊರೆ ತೀರಿಸುವ ಏಕಮಾತ್ರ ದಾರಿ ಎಂದು ದೂರು ಪತ್ರದಲ್ಲಿ ಬಡ ಕುಟುಂಬಗಳು ಅಲವತ್ತುಕೊಂಡಿವೆ. ಅಂಗಡಿಯಲ್ಲಿ ದೇವರ ಪೂಜೆ ಮಾಡುತ್ತಿದ್ದಾಗ ಪುರಸಭೆ ಮುಖ್ಯಾಧಿಕಾರಿ, ಸಿಬ್ಬಂದಿ ಜೆ.ಸಿ.ಬಿ. ಯಂತ್ರದೊಂದಿಗೆ ಉದ್ದೇಶಪೂರ್ವಕವಾಗಿ ಆಗಮಿಸಿ ನಮ್ಮ ಅಂಗಡಿಯನ್ನು ಧ್ವಂಸ ಮಾಡಿದರು. ನಾವು ಬಹಳ ಕಷ್ಟಪಟ್ಟು ಖರೀದಿಸಿದ್ದ ಅಮೂಲ್ಯ ವಸ್ತುಗಳನ್ನು ನಮ್ಮ ಗಮನಕ್ಕೆ ತಾರದೆ ಏಕಾಏಕಿ ಧ್ವಂಸ ಮಾಡಿ ನಷ್ಟಪಡಿಸಿದ್ದಾರೆ ಎಂದಿವೆ.

ಈ ಅಂಗಡಿಯನ್ನು ಧ್ವಂಸ ಮಾಡಿದ ಪರಿಣಾಮವಾಗಿ ನಾವು ಅದಾಯವಿಲ್ಲದೆ ನಿರಾಶ್ರಿತರಾಗಿ ಕಣ್ಣೀರಿನಲ್ಲಿ ಬದುಕುತ್ತಿರುವ ಪರಿಸ್ಥಿತಿ ಉಂಟಾಗಿದೆ. ಮುಖ್ಯವಾಗಿ ಈ ಜಾಗ ಪುರಸಭೆಗೆ ಸೇರಿರುವುದಿಲ್ಲ. ಆದ್ದರಿಂದ ಇದು ಸಂಪೂರ್ಣವಾಗಿ ಅಕ್ರಮ ಕೃತ್ಯವಾಗಿದೆ. ಇದಕ್ಕೆ ಪುರಸಭೆ ಅಧಿಕಾರಿಗಳು ಹೊಣೆಗಾರರು. ಮಾನವೀಯತೆ ಇಲ್ಲದ ಕೃತ್ಯ–ಕ್ಕೆ ಹೊಣೆಗಾರರಾದ ಅಧಿಕಾರಿಗಳು, ಸಿಬ್ಬಂದಿ ಮೇಲೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಪತ್ರದಲ್ಲಿ ಒತ್ತಾಯಿಸಿದ್ದಾರೆ.

ನಮ್ಮ ಅಂಗಡಿಯಲ್ಲಿ ಧ್ವಂಸವಾದ ಅಮೂಲ್ಯ ವಸ್ತುಗಳಿಗೆ ಹಾಗೂ ಜೀವನೋಪಾಯ ನಷ್ಟಕ್ಕೆ ಪರಿಹಾರ ನೀಡಬೇಕು, ನಮ್ಮಂತಹ ಬಡಕುಟುಂಬಗಳಿಗೆ ಸಣ್ಣ ವ್ಯಾಪಾರಗಳನ್ನು ಮುಂದುವರಿಸಲು ರಕ್ಷಣೆ ಒದಗಿಸಬೇಕು ಎಂದು ದೂರು ಪತ್ರದಲ್ಲಿ ಹೇಳಿವೆ.

ಈ ಸಂದರ್ಭದಲ್ಲಿ ಕರವೇ ರಾಜ್ಯ ಸಂಚಾಲಕ ಜಿ.ಆರ್. ವಿಶ್ವನಾಥ್ ಕಾಶಿ, ಕನ್ನಡ ಸೇನೆ ತಾಲೂಕು ಅಧ್ಯಕ್ಷ ವಿಕಾಸ್, ಕರವೇ ತಾಲೂಕು ಅಧ್ಯಕ್ಷ ನವೀನ್, ಗಿರೀಶ್ ಹಾಲುಕಂಬಿ ಭಾಗವಹಿಸಿದ್ದರು.

# ಉಪ್ಪಾರರು ಹಿಂದುಳಿದಿರುವುದೇಕೆ ಎಂಬ ಆತ್ಮಾವಲೋಕ ಅಗತ್ಯ

## ಶಿವಮೊಗ್ಗ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕ ಡಾ. ಪಿ. ರಂಗನಾಥ

**ಶಿವಮೊಗ್ಗ :** ಸಣ್ಣ ಸಣ್ಣ ಸಮುದಾಯಗಳಿಗೆ ಸಂಘಟನೆಯೇ ಬಲ. ಆದ್ದರಿಂದ ಸಮಾಜದವರೆಲ್ಲ ಸೇರಿ ಸಂಘಟನೆಯನ್ನು ಬಲಗೊಳಿಸಬೇಕು. ನಾವೇಕೆ ಹಿಂದುಳಿದಿದ್ದೇವೆ ಎನ್ನುವುದನ್ನು ಅರಿತುಕೊಂಡು ನಾವು ಏಕೆ ಬದಲಾಗುತ್ತಿಲ್ಲ ಎಂಬ ಬಗ್ಗೆ ಆತ್ಮಅವಲೋಕನ ಮಾಡಿಕೊಳ್ಳಬೇಕೆಂದು ಶಿವಮೊಗ್ಗ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕ ಡಾ. ಪಿ. ರಂಗನಾಥ ಹೇಳಿದರು.

ಟ್ರಸ್ಟ್ ಪತ್ರಿಕಾ ಭವನದಲ್ಲಿ ಭಾನುವಾರ ಶ್ರೀ ಭಗೀರಥ ಸಹಕಾರ ಸಂಘದ 3ನೇಯ ವಾರ್ಷಿಕ ಸರ್ವ ಸದಸ್ಯರ ಸಭೆಯಲ್ಲಿ ಪ್ರತಿಭಾ ಪುರಸ್ಕಾರ ಮತ್ತು ನಿವೃತ್ತ ನೌಕರರನ್ನು ಗೌರವಿಸಿ ಮಾತನಾಡಿದ ಅವರು

ಶಿವಮೊಗ್ಗ ಜಿಲ್ಲೆ ಎಲ್ಲ ರಂಗದಲ್ಲೂ ಮುಂದುವರೆದಿದೆ. ಶೈಕ್ಷಣಿಕವಾಗಿ ಮತ್ತು ಆರ್ಥಿಕವಾಗಿ ಸದೃಢವಾಗಿದ್ದಾರೆ. ಇಲ್ಲಿ ನಮ್ಮದೇ ಸಮಾಜದ ಜಿಲ್ಲಾಮಟ್ಟದ ಸಹಕಾರ ಸಂಘ ಸ್ಥಾಪಿಸಿ ಸಮಾಜದ ಏಳಿಗೆಗೆ ಅದು ಕಂಕಣಬದ್ಧವಾಗಿದೆ.

ಜಿಲ್ಲೆಯಲ್ಲಿನ ಪ್ರತಿಯೊಬ್ಬ ಸಮಾಜ ಬಾಂಧವರು ಸ್ವಯಂ ಪ್ರೇರಣೆಯಿಂದ




ಮುಂದೆ ಬಂದು ಸಹಕಾರ ಸಂಘದ ಷೇರನ್ನು ಪಡೆದು ಸಮಾಜದ ಏಳಿಗೆಗೆ ಕೈಜೋಡಿಸಬೇಕು ಎಂದರು.

ಸಂಘದಿಂದ ಸಾಲ ಪಡೆದು ವಿವಿಧ ಚಟುವಟಿಕೆಗಳಲ್ಲಿ ಅದನ್ನು ತೊಡಗಿಸಿ ಉನ್ನತಿಯಾಗಬೇಕು. ಮತ್ತು ಕಾಲಕಾಲಕ್ಕೆ ಮರು ಪಾವತಿ ಮಾಡಬೇಕು. ಆ ಮೂಲಕ ಸಮಾಜಕ್ಕೆ ನಮ್ಮ ಋಣ ತೀರಿಸಬೇಕು. ನಾವು ಸಮಾಜದಿಂದ ಏನನ್ನು ಪಡೆದಿದ್ದೇವೆಯೋ ಅದನ್ನು ಮರಳಿ ಸಮಾಜಕ್ಕೆ ಕೊಡಬೇಕು. ಇನ್ನೊಬ್ಬರು ಮೇಲೆ ಬರಲು ನಾವು ನೆರವಾಗಬೇಕು ಎಂದರು.

ಸಮಾಜದಲ್ಲಿನ ಭಿನ್ನಮತವನ್ನು ತೊಡೆದುಹಾಕಿ ಒಳಿತಿಗಾಗಿ ಎಲ್ಲರೂ ಮುನ್ನಡೆಯಬೇಕು. ಸಂಘದ ಅಭಿವೃದ್ಧಿಗೆ ಯಾರು ಹೆಚ್ಚು ಕಾರಣಕರ್ತರಾಗುತ್ತಾರೋ ಅಂತಹವರು ಅಧಿಕಾರ ವಹಿಸಿಕೊಂಡು ಎಲ್ಲರನ್ನೂ ಒಳಗೊಂಡು, ಯುವಕರನ್ನು ಸೇರಿಸಿಕೊಂಡು ಸಮಾಜಕ್ಕಾಗಿ ದುಡಿಯಬೇಕು ಎಂದು ಕರೆ ನೀಡಿದರು.

ಸಂಘದ ನಿರ್ದೇಶಕ ಎಂ ಜಿ ಕೆ ಹನುಮಂತಪ್ಪ ಮಾತನಾಡಿ, ಗ್ರಾಮಾಂತರ ಪ್ರದೇಶದಲ್ಲಿರುವವರು ಶಿಕ್ಷಣವಂತರಾಗಬೇಕು. ಮಕ್ಕಳಿಗೆ ಹೆಚ್ಚಿನ ವಿದ್ಯಾಭ್ಯಾಸದ ಸೌಲಭ್ಯ ಕಲ್ಪಿಸಬೇಕು. ಮಕ್ಕಳು ಪ್ರತಿಭಾನ್ವಿತರಾಗಬೇಕು. ಅವರ ಮೂಲಕ ಸಮಾಜ ಸೇವೆ ಮಾಡಬೇಕು. ಇಂದು ವಿದ್ಯೆ ಕಲಿತರಷ್ಟೇ ಮುನ್ನಡೆಯಲು ಸಾಧ್ಯವಿದೆ ಎಂದರು.

ಈ ಸಂದರ್ಭದಲ್ಲಿ ನಿವೃತ್ತ ಅಧಿಕಾರಿಗಳನ್ನು ಮತ್ತು ಶೇ. 90ಕ್ಕಿಂತ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭ ಪುರಸ್ಕಾರ ನೀಡಿ ಗೌರವಿಸಲಾಯಿತು.

ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಎನ್. ಮಂಜುನಾಥ ಮಾತನಾಡಿ, ಸಮಾಜದ ಬಾಂಧವರು ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡಬೇಕು ಆ ಮೂಲಕ ಸಮಾಜದಲ್ಲಿನ ವಿದ್ಯಾವಂತರ ಸಂಖ್ಯೆ ಹೆಚ್ಚಾಗಿ ಉದ್ಯೋಗ ಮತ್ತು ಆರ್ಥಿಕತೆಯಲ್ಲಿ ಉನ್ನತಿ ಪಡೆಯಲು ಸಾಧ್ಯ ಎಂದರಲ್ಲದೇ, ಜಿಲ್ಲೆಯಲ್ಲಿನ ಸಮಾಜ ಬಾಂಧವರು ಭಗೀರಥ ಸಹಕಾರ ಸಂಘದ ಷೇರುದಾರರಾಗುವ ಮೂಲಕ ಮಾದರಿ ಸಹಕಾರ ಸಂಘ ಎಂದು ಹೆಸರುಗಳಿಸಲು ಸಂಕಲ್ಪ ಮಾಡಬೇಕಾಗಿದೆ ಎಂದರು.

ಉಪಾಧ್ಯಕ್ಷ ವಸಂತ ಹೋಬಳಿದಾರ್, ನಿರ್ದೇಶಕರಾದ ಎಲ್. ಮಂಜುನಾಥ, ಎಚ್. ರವಿ, ಯು ಕೆ ವೆಂಕಟೇಶ್, ಯು ಕೆ ರಮೇಶ್, ಜಿ ಚಿದಾನಂದ, ಕೆ ಶ್ರೀನಿವಾಸ, ಎಸ್ ಪಿ ಸುಧಾಕರ, ವೈ ಬಿ ಲೋಕೇಶ್, ಎಲ್. ಚಂದ್ರಶೇಖರ್, ಅರ್ಚನಾ, ಕೆ. ಟಿ. ಶ್ರೀನಿವಾಸ ಮೊದಲಾದವರು ಉಪಸ್ಥಿತರಿದ್ದರು.

## ಗೌರವಾನ್ವಿತ ಉಪಲೋಕಾಯುಕ್ತರಿಂದ ಅಹವಾಲು ಸ್ವೀಕಾರ

**ಚಿಕ್ಕಮಗಳೂರು, ಸೆ.17:** ಗೌರವಾನ್ವಿತ ನ್ಯಾಯ ಮೂರ್ತಿಗಳು ಹಾಗೂ ಉಪಲೋಕಾಯುಕ್ತರಾದ ಶ್ರೀ ಕೆ.ಎನ್. ಫಣೀಂದ್ರ ಅವರು ಸೆಪ್ಟಂಬರ್ 24 ರಂದು ನಗರದ ಕುವೆಂಪು ಕಲಾಮಂದಿರದಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ.

ಸೆಪ್ಟಂಬರ್ 24 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಮತ್ತು ಮಧ್ಯಾಹ್ನ 2.30 ರಿಂದ ಸಂಜೆ 5 ಗಂಟೆಯವರೆಗೆ ನಗರದ ಕುವೆಂಪು ಕಲಾ ಮಂದಿರದಲ್ಲಿ ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರ ಮತ್ತು ವಿಚಾರಣೆಯನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯಲ್ಲಿ ಯಾವುದೇ ಸಾರ್ವಜನಿಕರಿಗೆ ಸರ್ಕಾರಿ ಅಧಿಕಾರಿ, ನೌಕರರಿಂದ ಕಾನೂನು ಪ್ರಕಾರ ಆಗಬೇಕಾದ ಕೆಲಸದಲ್ಲಿ ವಿಳಂಬವೇನಾದರೂ ಆಗಿದ್ದಲ್ಲಿ ಅಥವಾ ಅಧಿಕಾರಿ, ನೌಕರರು ನ್ಯಾಯಯುತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ವೃಥಾ ತೊಂದರೆ ಕೊಡುವುದು ಅಥವಾ ಇನ್ಯಾವುದೇ ತರಹದ ದುರಾಡಳಿತದಲ್ಲಿ ತೊಡಗಿದ್ದರೆ, ಅದರಿಂದ ತೊಂದರೆಗೊಳಗಾದ ಸಾರ್ವಜನಿಕರು ಗೌರವಾನ್ವಿತರ ಮುಂದೆ ತಮ್ಮ ಅಹವಾಲುಗಳನ್ನು ಅರ್ಜಿ ನಮೂನೆ–1 ಮತ್ತು ನಮೂನೆ–2 ರಲ್ಲಿ ಲಿಖಿತ ರೂಪದಲ್ಲಿ ದಾಖಲೆ, ಸಾಕ್ಷ್ಯಾಧಾರಗಳೊಂದಿಗೆ ಸಲ್ಲಿಸಬಹುದಾಗಿದೆ ಎಂದು ಚಿಕ್ಕಮಗಳೂರಿನ ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗದ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿಯೊಬ್ಬರಿಗೂ ಪ್ರಜಾಪ್ರಭುತ್ವದಡಿ ಜೀವಿಸುವ ಹಕ್ಕಿದೆ : ರುದ್ರಪ್ಪ ಲಮಾಣಿ

ಹಾವೇರಿ : ದೇಶದ ಪ್ರಜೆಗಳಾದ ನಾವುಗಳು ಪ್ರಜಾಪ್ರಭುತ್ವದ ಅಡಿಯಲ್ಲಿ ಜೀವಿಸುತ್ತಿದ್ದೇವೆ, ಪ್ರತಿಯೊಬ್ಬರಿಗೂ ಇಲ್ಲಿ ಸಮಾನ ಅವಕಾಶಗಳಿವೆ ಎಂದು ಶಾಸಕರು ಹಾಗೂ ವಿಧಾನಸಭೆ ಉಪ ಸಭಾಧ್ಯಕ್ಷರಾದ ರುದ್ರಪ್ಪ ಮಾನಪ್ಪ ಲಮಾಣಿ ಹೇಳಿದರು.

ನಗರದ ಡಾ. ಬಿ ಆರ್ ಅಂಬೇಡ್ಕರ್ ಭವನದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಸಂವಿಧಾನವು ನಮ್ಮ ಉಸಿರು ಇದ್ದಹಾಗೆ, ಸಂವಿಧಾನವನ್ನು ನಾವು ಗೌರವಿಸಬೇಕು ಸಂವಿಧಾನದಿಂದ ಪ್ರಜಾಪ್ರಭುತ್ವದಲ್ಲಿ ಹೇಗೆ ಜೀವಿಸಬೇಕು ಎಂಬುವುದನ್ನು ತಿಳಿದುಕೊಂಡಿದ್ದೇವೆ ಪ್ರಜಾಪ್ರಭುತ್ವದ ಅಡಿಯಲ್ಲಿ ಪ್ರತಿಯೊಬ್ಬರಿಗೂ ವಾಕ್ ಸ್ವಾತಂತ್ರ್ಯ, ಬದುಕುವ ಹಕ್ಕು ಜೊತೆಗೆ ಕರ್ತವ್ಯಗಳನ್ನು ಪಡೆದುಕೊಂಡಿದ್ದೇವೆ. ಇಲ್ಲಿ ಯಾರು ಹೆಚ್ಚು ಮತ್ತು ಕಡಿಮೆ ಎನ್ನುವ ಮನೋಭಾವನೇ ಇಲ್ಲ, ಎಲ್ಲರಿಗೂ ಸಮಾನ ಅವಕಾಶಗಳಿವೆ ಎಂದರು.

ಸರ್ಕಾರವು ಪ್ರಜಾಪ್ರಭುತ್ವ ದಿನಾಚರಣೆಗೆ ಹೆಚ್ಚು ಮಹತ್ವ ನೀಡುತ್ತಾ ಬಂದಿದೆ ಕಳೆದ ವರ್ಷ



ಮಾನವ ಸರಪಳಿ ನಿರ್ಮಿಸುವುದರ ಮೂಲಕ ವಿಶ್ವದಾಖಲೆ ಮಾಡಲಾಗಿದೆ ಈ ವರ್ಷ ನನ್ನ ಮತ ನನ್ನ ಹಕ್ಕು ಎಂಬ ಧ್ಯೇಯ ವಾಕ್ಯದೊಂದಿಗೆ ಪ್ರಜಾಪ್ರಭುತ್ವ ದಿನಾಚರಣೆಯನ್ನು ಆಚರಿಸುತ್ತಿದ್ದೇವೆ ಎಂದರು.

ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ್ ದಾನಮ್ಮನವರ ಅವರು ಮಾತನಾಡಿ, ಪ್ರಜಾಪ್ರಭುತ್ವದ ಮೌಲ್ಯಗಳಾದ ಸ್ವಾತಂತ್ರ್ಯ, ಸಮಾನತೆ, ಭಾಗವಹಿಸುವಿಕೆ, ಉತ್ತರದಾಯಿತ್ವ, ಪ್ರಜಾಪ್ರಭುತ್ವ ಸಂಸ್ಥೆಗಳನ್ನು ಬಲವರ್ಧನೆ ಮಾಡಿ ಜನರಲ್ಲಿ ಅರಿವು ಮೂಡಿಸುವ ಕೆಲಸಮಾಡಬೇಕು. ವಿವಿಧ ಆಡಳಿತ ವ್ಯವಸ್ಥೆಗಳಾದ ಚಕ್ರಾಧಿಪತ್ಯ, ರಾಜಪ್ರಭುತ್ವ, ನಿರಂಕುಶ ಪ್ರಭುತ್ವ ಈ ಎಲ್ಲ ವ್ಯವಸ್ಥೆಗಳಲ್ಲಿ ಒಳ್ಳೆಯ ಆಡಳಿತ ನೀಡುವ ವ್ಯವಸ್ಥೆ ಇದ್ದರೆ ಅದು ಪ್ರಜಾಪ್ರಭುತ್ವ ವ್ಯವಸ್ಥೆ ಎಂದರು.

ಕೆನಡಾ ಲೇಖಕರಾದ ನವಮಿ ರವರ ಪ್ರಕಾರ ಒಬ್ಬ ಮನುಷ್ಯ ಕೇವಲ ಮತದಾನ ಮಾಡುವುದರಿಂದ ಪ್ರಜಾಪ್ರಭುತ್ವ ವ್ಯವಸ್ಥೆ ಆಗುವುದಿಲ್ಲ. ಒಬ್ಬ ಮನುಷ್ಯ ಹೇಗೆ ಗೌರವಯುತವಾಗಿ ಸ್ವಾಭಿಮಾನದಿಂದ ಬದುಕು ಸಾಗಿಸುತ್ತಾನೆ ಎಂಬುದು ನಿಜವಾದ ಪ್ರಜಾಪ್ರಭುತ್ವದ ವ್ಯವಸ್ಥೆಯಾಗಿದೆ ಎಂಬುವುದನ್ನು ತಿಳಿಸದ್ದಾರೆ.

ಪ್ರಬಲ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಕಾರ್ಯಾಂಗ, ನ್ಯಾಯಾಂಗ ಮತ್ತು ಶಾಸಕಾಂಗಗಳು ಯಾರ ಹಸ್ತಕ್ಷೇಪ ವಿಲ್ಲದೆ ಸ್ವತಂತ್ರವಾಗಿರಬೇಕು, ಸ್ವಾತಂತ್ರ್ಯ ಹಕ್ಕುಗಳು, ಸಮಾನ ಕಾನೂನುಗಳು ಇರಬೇಕು, ವ್ಯವಸ್ಥಿತ ವಿರೋಧ ಪಕ್ಷವಿರಬೇಕು ಆಗ ಆಡಳಿತ ಪಕ್ಷವನ್ನು ಹತೋಟಿಗೆ ತರಲು ಸಹಕಾರಿಯಾಗಲಿದೆ ಎಂದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಹಭಾಗಿತ್ವದಲ್ಲಿ ಆಯೋಜಿಸಿದ್ದ ಬೈಕ್ ರ್ಯಾಲಿಗೆ ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ್ ದಾನಮ್ಮನವರ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಆಂಜನೇಯ ಹಲ್ಲಾಳ ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಧಿಕಾರದ ಅಧ್ಯಕ್ಷರಾದ ಎಸ್ ಎಫ್ ಎನ್ ಗಾಜಿಗೌಡ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರುಚಿ ಬಿಂದಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ, ನಗರ ಸಭೆ ಸದಸ್ಯರಾದ ಸಂಜೀವಕುಮಾರ ನೀರಲಗಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಶಾಂತ ಎಂ ವರಗಪ್ಪನವರ, ಸಮುದಾಯದ ಮುಖಂಡರು, ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಅಪೌಷ್ಟಿಕತೆ ತಡೆಗಟ್ಟಲು ಪೋಷಣ್ ಅಭಿಯಾನದ ಉದ್ದೇಶ: ಶಾಸಕ ಹೆಚ್.ಡಿ.ತಮ್ಮಯ್ಯ

**ಚಿಕ್ಕಮಗಳೂರು, ಸೆ. 17:** ಪೋಷಣ್ ಅಭಿಯಾನದ ಭಾಗವಾಗಿ ಪೌಷ್ಠಿಕಾಂಶದ ಬಗ್ಗೆ ಸಾರ್ವಜನಿಕ ಜಾಗೃತಿ ಮೂಡಿಸಲು ಪ್ರತಿ ವರ್ಷ ಸೆಪ್ಟೆಂಬರ್ ತಿಂಗಳನ್ನು "ರಾಷ್ಟ್ರೀಯ ಪೋಷಣ್ ಮಾಸಾಚರಣೆ" ನಡೆಸಲಾಗುತ್ತಿದೆ ಎಂದು ವಿಧಾನ ಸಭಾ ಕ್ಷೇತ್ರದ ಶಾಸಕ ಹೆಚ್.ಡಿ ತಮ್ಮಯ್ಯ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆರೋಗ್ಯ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ತೋಟಗಾರಿಕೆ ಇಲಾಖೆ, ಜಿಲ್ಲಾ ಆಯುಷ್ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ ಇವುಗಳ ಸಂಯುಕ್ತ ಆಶ್ರಯದಲ್ಲಿ ಇಂದು ನಗರದ ರಾಂಪುರದ ಚಿಂತಾಮಣಿ ಸಮುದಾಯ ಭವನದಲ್ಲಿ ಪೋಷಣ್ ಅಭಿಯಾನ ಯೋಜನೆಯಡಿ ರಾಷ್ಟ್ರೀಯ ಪೋಷಣ್ ಮಾಸಾಚರಣೆ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಪೋಷಣ್ ಅಭಿಯಾನದ ಅಂಗವಾಗಿ ಪ್ರತಿ ವರ್ಷ ಸೆಪ್ಟೆಂಬರ್ ತಿಂಗಳಲ್ಲಿ ರಾಷ್ಟ್ರೀಯ ಪೋಷಣ್ ಮಾಸಾಚರಣೆ ಕಾರ್ಯಕ್ರಮವನ್ನು ನಡೆಸಲಾಗುತ್ತದೆ, ಇದರಲ್ಲಿ ಮಕ್ಕಳು, ಹದಿಹರೆಯದ ಹೆಣ್ಣುಮಕ್ಕಳು, ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರಲ್ಲಿ ಅಪೌಷ್ಟಿಕತೆಯನ್ನು ತಡೆಗಟ್ಟಲು, ಜೊತೆಗೆ ಪೌಷ್ಟಿಕಾಂಶ ಆಹಾರದ ಮಹತ್ವದ ಕುರಿತು ಜಾಗೃತಿ ಮೂಡಿಸಲಾಗುತ್ತದೆ ಎಂದರು.

ಮಕ್ಕಳು, ಹದಿಹರೆಯದ ಹೆಣ್ಣುಮಕ್ಕಳು, ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರಿಗೆ ಅಗತ್ಯವಾದ ಪೌಷ್ಟಿಕಾಂಶವನ್ನು ಒದಗಿಸುವ ಮೂಲಕ ಅವರ ಆರೋಗ್ಯವನ್ನು ಸುಧಾರಿಸುವುದು. ಈ ಅಭಿಯಾನದ ಮುಖ್ಯ ಉದ್ದೇಶ ಎಂದು ಹೇಳಿದರು.

ಗರ್ಭಿಣಿಯರು, ಬಾಣಂತಿಯರಲ್ಲಿ ಪೌಷ್ಟಿಕಾಂಶದ ಮಟ್ಟ ವೃದ್ಧಿಗಾಗಿ ಮಾತೃಪೂರ್ಣ ಹಾಗೂ ಕ್ಷೀರಭಾಗ್ಯ ಯೋಜನೆಯನ್ನೂ ಜಾರಿಗೊಳಿಸಿದೆ. ಖನಿಜಾಂಶ ಹೊಂದಿರುವ ಸೊಪ್ಪು, ತರಕಾರಿ ಜತೆ ಮೊಳಕೆ ಕಾಳುಗಳನ್ನು ಉಪಯೋಗಿಸುವ ಮೂಲಕ ಉತ್ತಮ ಆರೋಗ್ಯ ಹೊಂದಬೇಕು. ತಾಯಿ ಆರೋಗ್ಯವಾಗಿದ್ದಾಗ ಮಾತ್ರ ಆರೋಗ್ಯವಂತ



ಶಿಶುವಿಗೆ ಜನ್ಮ ನೀಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ವಿ.ಹನುಮಂತಪ್ಪ ಮಾತನಾಡಿ, ಗರ್ಭಿಣಿಯರು, ಬಾಣಂತಿಯರು ಯಾವುದೇ ಕಾರಣಕ್ಕೂ ಅಪೌಷ್ಟಿಕತೆಯಿಂದ ಹಾಗೂ ರಕ್ತಹೀನತೆಯಿಂದ ಬಳಲದಂತೆ ಸದಾ ನಿಗಾ ವಹಿಸಬೇಕು. ಇಲ್ಲದಿದ್ದಲ್ಲಿ ಎರಡೂ ಜೀವಗಳು ಅನಾರೋಗ್ಯಕ್ಕೆ ತುತ್ತಾಗುವ ಅಪಾಯಗಳು ಹೆಚ್ಚಾಗಲಿವೆ. ಅಭಿಯಾನದ ಗಮನವು ಹದಿಹರೆಯದ ಹೆಣ್ಣುಮಕ್ಕಳು, ಗರ್ಭಿಣಿಯರು, ಹಾಲುಣಿಸುವ ತಾಯಂದಿರು ಮತ್ತು 0–6 ವರ್ಷ ವಯಸ್ಸಿನ ಮಕ್ಕಳ ಪೌಷ್ಟಿಕಾಂಶದ ಸ್ಥಿತಿಗೆ ಒತ್ತು ನೀಡುವುದು. ಒಮ್ಮುಖ ಮತ್ತು ಸಮುದಾಯದ ಒಳಗೊಳ್ಳುವಿಕೆಯ ಮೂಲಕ ಮಕ್ಕಳಲ್ಲಿ ಬೆರಗುಗೊಳಿಸುವ, ಅಪೌಷ್ಟಿಕತೆ, ರಕ್ತಹೀನತೆ ಮತ್ತು ಕಡಿಮೆ ತೂಕದ ಶಿಶು ಜನನ ಕಡಿಮೆ ಮಾಡಲು ಹಾಗೂ ಹದಿಹರೆಯದ ಹೆಣ್ಣುಮಕ್ಕಳು, ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರ ಮೇಲೆ ಕೇಂದ್ರೀಕರಿಸಲು ಶ್ರಮಿಸುತ್ತದೆ ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿಗಳಾದ ಡಾ.ವಿದ್ಯಾ ಸಾಗರ್ ಉಪನ್ಯಾಸ ನೀಡಿ, ಗರ್ಭಾವಸ್ಥೆಯಲ್ಲಿ ಆರೋಗ್ಯಕರ ಆಹಾರಕ್ಕಾಗಿ ಹಣ್ಣುಗಳು, ತರಕಾರಿಗಳು, ಧಾನ್ಯಗಳು ಪ್ರೋಟೀನ್ ಹಾಲು, ಮೊಸರು, ಮತ್ತು ಬೀಜಗಳು ಹೆಚ್ಚಾಗಿ ಸೇವಿಸಬೇಕು ಎಂದು ಹೇಳಿದರು.

ಮಗುವಿನ ಬೆಳವಣಿಗೆಗೆ ವಿಟಮಿನ್ ಎ ಕಬ್ಬಿಣ, ತರಕಾರಿಗಳು, ಕ್ಯಾಲ್ಸಿಯಂ ಮತ್ತು ಫೈಬರ್ ಹಣ್ಣು, ತರಕಾರಿಗಳು ಅಗತ್ಯವಿರುತ್ತದೆ. ಗರ್ಭಾವಸ್ಥೆಯಲ್ಲಿ ನಿರ್ದಿಷ್ಟ ಆಹಾರಗಳನ್ನು ತಪ್ಪಿಸಬೇಕು ಮತ್ತು ಕೀಟನಾಶಕಗಳು ಇರುವ ಹಣ್ಣುಗಳು, ತರಕಾರಿಗಳನ್ನು ಸಂಪೂರ್ಣವಾಗಿ ತೊಳೆದು ಸೇವಿಸಬೇಕು ಎಂದ ಅವರು ದಿನನಿತ್ಯ ಜೀವನದಲ್ಲಿ ವ್ಯಾಯಾಮ ಮಾಡುವುದನ್ನು ಅಭ್ಯಾಸ ಮಾಡಿಕೊಳ್ಳಬೇಕು ಎಂದು ಹೇಳಿದರು.

ಗರ್ಭಾವಸ್ಥೆಯಲ್ಲಿ ಆಯಾಸ ಹೆಚ್ಚಾಗುವುದಕ್ಕೆ ಕಾರಣ ನೀವು ಸೇವಿಸುವ ಆಹಾರವೇ ಮೂಲ ಕಾರಣವಾಗಿರುತ್ತದೆ .ನೀವು ಒಬ್ಬರಲ್ಲ ಇಬ್ಬರಾಗಿರುವುದರಿಂದ ಈ ಸಮಯದಲ್ಲಿ ಹೆಚ್ಚಾಗಿ ಹಸಿ ತರಕಾರಿ ಸೇವಿಸುವುದರ ಜೊತೆಗೆ ದೇಹಕ್ಕೆ ಸಾಕಷ್ಟು ನೀರನ್ನು ಕುಡಿಯಬೇಕು. ವಿಟಮಿನ್ ಹೆಚ್ಚಾಗಿರುವ ಹಣ್ಣು, ಮೊಳಕೆ ಕಾಳು ಇವುಗಳನ್ನು ತಮ್ಮ ದಿನ ನಿತ್ಯ ಜೀವದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಶ್ರೀನಿವಾಸ್ ವೈ.ಆಲದಾರ್ತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ನಗರಸಭಾ ಸದಸ್ಯ ಪರಮೇಶ್ ರಾಜ್ ಅರಸ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅಶ್ವತ್ಥ್‌ಬಾಬು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಡಿ.ಸಂತೋಷ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸಿ.ರಂಗನಾಥ್, ವೈದ್ಯಾಧಿಕಾರಿ ಡಾ ಹೇಮಾಲತಾ, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ರೂಪಕುಮಾರಿ, ಮಹಿಳಾ ಮೇಲ್ವಿಚಾರಕಿ ವಸಂತ ಕುಮಾರಿ, ಕಸಬಾ 2 ವೃತ್ತದ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ಮುಂತಾದವರು ಉಪಸ್ಥಿತರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**